ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 15 | PAGE- ಪುಟ 8 | ಭಾನುವಾರ 16.02.2025 | RS.ಬೆಲೆ 2/-

## ಜಲಜೀವನ್ ಮಿಷನ್‌ಗೆ ರಾಜ್ಯಕ್ಕೆ ಘೋಷಿಸಿದ ಹಣ ಬಿಡುಗಡೆ ಮಾಡದೇ

# ಕೇಂದ್ರದಿಂದ ದ್ರೋಹ: ಸಿಎಂ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.15: ಕೇಂದ್ರ ಸರ್ಕಾರ ಜಲ ಜೀವನ್ ಮಿಷನ್‌ಗೆ ಸಂಬಂಧಿಸಿದಂತೆ ರಾಜ್ಯಕ್ಕೆ ಘೋಷಿಸಿದ ಹಣವನ್ನು ಬಿಡುಗಡೆ ಮಾಡದೆ ಕರ್ನಾಟಕಕ್ಕೆ "ದ್ರೋಹ ಮಾಡಿದೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಬಿಜೆಪಿಯನ್ನು ತೀವ್ರ ತರಾಟೆಗೆ ತೆಗೆದು-ಕೊಂಡರು.

ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ಅವರನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ ಸಿಎಂ ಸಿದ್ದರಾಮಯ್ಯ ಅವರು, ಬಿಜೆಪಿ "ಸುಳ್ಳು ಹರಡುತ್ತಿದೆ" ಎಂದು ಆರೋಪಿಸಿದರು.

ಜೆಜೆಎಂ ಅಡಿಯಲ್ಲಿ ಕರ್ನಾಟಕಕ್ಕೆ 28,623 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಆದರೆ ರಾಜ್ಯವು 11,760 ಕೋಟಿ ರೂ. ಮಾತ್ರ ಖರ್ಚು ಮಾಡಿದೆ ಎಂದು ಸೋಮಣ್ಣ ಲೋಕಸಭೆಗೆ ತಿಳಿಸಿದ್ದಾರೆ ಎಂದು ಮಾಧ್ಯಮ ವರದಿ ಮಾಡಿವೆ.

"ಕೇಂದ್ರ ಸರ್ಕಾರವು ಕರ್ನಾಟಕದಲ್ಲಿ ಜಲ ಜೀವನ್ ಮಿಷನ್ ಅನ್ನು ಉದ್ದೇಶಪೂರ್ವಕವಾಗಿ ಹಾಳುಗೆಡವಿರುವುದನ್ನು ಮುಚ್ಚಿಹಾಕಲು ಕೇಂದ್ರ ಸಚಿವ ಸೋಮಣ್ಣ ಸುಳ್ಳು ಹರಡುತ್ತಿದ್ದಾರೆ!" ಎಂದು ಸಿಎಂ ಸಿದ್ದರಾಮಯ್ಯ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದಾರೆ.

ಜೆಜೆಎಂಗೆ (ರಾಜ್ಯದಲ್ಲಿ) ಒಟ್ಟು ಹಂಚಿಕೆ 49,262 ಕೋಟಿ ರೂ.ಗಳಾಗಿದ್ದು, ಇದರಲ್ಲಿ ಕೇಂದ್ರದ ಪಾಲು 26,119 ಕೋಟಿ ರೂ.ಗಳಾಗಿದ್ದು, ರಾಜ್ಯದ ಪಾಲು 23,142 ಕೋಟಿ ರೂ. ಆಗಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಬಿಡುಗಡೆಯಾದ ಒಟ್ಟು ನಿಧಿ 32,202 ಕೋಟಿ ರೂ.ಗಳಾಗಿದ್ದು, ಇದರಲ್ಲಿ ಕೇಂದ್ರದ ಪಾಲು 11,760 ಕೋಟಿ ರೂ.ಗಳು (ಅದು ಅದರ ಬದ್ಧತೆಯ ಕೇವಲ ಶೇ. 45 ರಷ್ಟು) ಮತ್ತು ರಾಜ್ಯದ ಪಾಲು 20,442 ಕೋಟಿ ರೂ.ಗಳು (ಇದು ಅದರ ಬದ್ಧತೆಯ ಶೇಕಡಾ 88.3") ಕೋಟಿ ರೂ.ಗಳಾಗಿದೆ. ರಾಜ್ಯ ಖರ್ಚು ಮಾಡಿದ ಒಟ್ಟು ಮೊತ್ತ 29,413 ಕೋಟಿ ರೂ.ಗಳು ಎಂದು ಸಿಎಂ ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

"ಕೇಂದ್ರ ಬಿಡುಗಡೆ ಮಾಡಿದ ಪ್ರತಿಯೊಂದು ರೂಪಾಯಿಯನ್ನು ಕರ್ನಾಟಕ ಸಂಪೂರ್ಣವಾಗಿ ಬಳಸಿಕೊಂಡಿದೆ. ಆದ-ರೆ ಮೋದಿ ಸರ್ಕಾರವು ಹಣವನ್ನು ನಿರ್ಬಂಧಿಸುವುದನ್ನು ಮುಂದುವರೆಸಿದೆ ಮತ್ತು ಕರ್ನಾಟಕಕ್ಕೆ ಅದರ ಸರಿಯಾದ ಪಾಲನ್ನು ನಿರಾಕರಿಸುತ್ತಿದೆ" ಎಂದು ಮುಖ್ಯಮಂತ್ರಿ

(2ನೇ ಪುಟ ನೋಡಿ)

## ಶಾಲೆಯಲ್ಲಿ ಸಿಲಿಂಡರ್ ಸ್ಫೋಟ-ತಪ್ಪಿದ ಅನಾಹುತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,-ಸರಕಾರಿ ಶಾಲೆಯ ಬಿಸಿಯೂಟದ ಅಡುಗೆ ಕೊಠಡಿಯಲ್ಲಿನ ಸಿಲಿಂಡರ್ ಸ್ಫೋಟಗೊಂಡು ಅಡುಗೆ ಸಾಮಾನುಗಳು ಸುಟ್ಟಿರುವ ಘಟನೆ ಜಿಲ್ಲೆಯ ಬಾದಾಮಿ ತಾಲೂಕಿನಲ್ಲಿ ನಡೆದಿದೆ.

ಬಾದಾಮಿ ತಾಲೂಕಿನ ಬೀರನೂರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ

(2ನೇ ಪುಟ ನೋಡಿ)

## ಇವ್ರೇ ನೋಡಿ ಬೀದರ್ ಎಟಿಎಂ ದರೋಡೆಕೋರರು! ಇವರ ಸುಳಿವು ಕೊಟ್ರೆ ಭರ್ಜರಿ ಬಹುಮಾನ!




ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ. 15 : ಜನವರಿ 16 ಗುರುವಾರ ಹಾಡಹಗಲೇ ಬೀದರ್‌ನ ಎಸ್‌ಬಿಐ ಎಂಟಿಎಂ ಬಳಿ ಶೂಟೌಟ್ ಮಾಡಿ, ಹಣ ಕದ್ದೊಯ್ದ ಖದೀಮರಿಗಾಗಿ ಪೊಲೀಸರು ಕಳೆದೊಂದು ತಿಂಗಳಿಂದ ಹುಡುಕಾಟ ನಡೆಸುತ್ತಲೇ ಇದ್ದಾರೆ. ಇಬ್ಬರ ಮೇಲೆ ದರೋಡೆಕೋರರು ಗುಂಡು ಹಾರಿಸಿ ಹಣದ ಬಾಕ್ಸ್‌ನೊಂದಿಗೆ ಎಸ್ಕೇಪ್ ಆಗಿದ್ದರು.

ಗುಂಡು ತಿಂದವರ ಪೈಕಿ ಓರ್ವ ಸ್ಥಳದಲ್ಲೇ ಸಾವನ್ನಪ್ಪಿದ್ದರೆ, ಮತ್ತೋರ್ವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಇನ್ನು ಆರೋಪಿಗಳ ಬೆನ್ನು ಬಿದ್ದಿರುವ ಪೊಲೀಸರು ದ-ರೋಡೆ ಮಾಡಿರುವ ಗ್ಯಾಂಗ್

(2ನೇ ಪುಟ ನೋಡಿ)

## ಸಂತ ಸೇವಾಲಾಲ ಮಹಾರಾಜರ ತತ್ವ, ಸಂದೇಶಗಳನ್ನು ನಾವೆಲ್ಲರೂ ಪಾಲಿಸೋಣ: ಸಂಸದ ಸಾಗರ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.15: ಸಂತ ಸೇವಾಲಾಲ್ ಮಾಹಾರಾಜರ ವಿಚಾರಧಾರೆಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಾವೆಲ್ಲರೂ ಮುನ್ನಡೆಯಬೇಕೆಂದು ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ ಹೇಳಿದರು. ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ನಡೆದ 286ನೇ ಸಂತ ಸೇವಾಲಾಲ್ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಂತ ಸೇವಾಲಾಲ ಮಹಾರಾಜರು ಮಹಾನ್ ಪವಾಡ ಪುರುಷರಾಗಿದ್ದರು, ಅವರು ಜನರ ಸಮಸ್ಯೆಗಳನ್ನು ಆಲಿಸಿಸುತ್ತಿದ್ದರು, ಮೂಢನಂಬಿಕೆ, ಕೆಟ್ಟ ಆಚರಣೆಗಳ ವಿರುದ್ಧ ಧ್ವನಿ ಎತ್ತಿದರು ಮತ್ತು ಜನರಿಗೆ ತಿಳಿವಳಿಕೆ ಮೂಡಿಸಿದರು. ಸಮಾಜದ ಐಕ್ಯತೆ ಮತ್ತು ಸಹಬಾಳ್ವೆಗೆ ಪ್ರೇರೆಪಿಸಿದರು. ಬ್ರಿಟಿಷರು ತೆರಿಗೆ ಹೆಚ್ಚಳ ಮಾಡಿದಾಗ ವೀರಸೇನಾನಿಯಾಗಿ ಹೋರಾಡಿದರು. ಯಾವುದೇ ಮಹಾನ ಪುರುಷರು ಒಂದೆ ಜಾತಿಗೆ ಸಿಮಿತವಿಲ್ಲ. ಅವರು ಮಾನವ ಕುಲಕ್ಕೆ ಸುಧಾರಣೆಗೆ ಪ್ರಯತ್ನಿಸಿದವರು ಎಂದು ತಿಳಿಸಿದರು.

ಬೀದರ ಕವಿರತ್ನ ಕಾಳಿದಾಸ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ರಾಜಕುಮಾರ ಥಾವರಾ ಖೋಲಾ ಅವರು ತಮ್ಮ ಅತಿಥಿ

(2ನೇ ಪುಟ ನೋಡಿ)

## ಹುಮನಾಬಾದ್ ಪುರಸಭೆಗೆ ಸೇರಿದ ಗಾರ್ಡನ್ ಜಾಗಗಳು ಮಾಯ?

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್.ಫೆ.15 ನಗರದಲ್ಲಿ ಸಾಕಷ್ಟು ಲೆಔಟಗಳಾಗಿದ್ದು. ಅದರಲ್ಲಿರಬೇಕಾದ ಗಾರ್ಡ್-ನ್ ಜಾಗಗಳು ಮಾಯವಾಗಿವೆ ಎಂಬ ಚರ್ಚೆ ನಡೆಯುತ್ತಿದೆ.

ಬಹುತೇಕ ಲೇಔಟ್‌ಗಳಲ್ಲಿ ಪುರಸಬೆಗೆ ಸೇರಿದ ಉದ್ಯಾನವನ. ಜಾಗಗಳನ್ನು ಕೆಲವರು ಅನಧಿಕೃತ ವಾಗಿ ನಂಬರ ಅಳವಡಿಸಿ ಮಾರಾಟ ಮಾಡಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ. ಪೌರಾಡಳಿತ ಸಚಿವರು ಜಿಲ್ಲೆಯವರೇ ಆಗಿದ್ದು ಹುಮನಾಬಾದ್ ನಗರದಲ್ಲಿರುವ ಗಾರ್ಡನ್ ಜಾಗಗಳನ್ನು ತೆರವುಗೊಳಿಸಿ. ಸರ್ಕಾರದ ಆಸ್ತಿ ಉಳಿಸುವರೆ ಎಂಬ ಪ್ರಶ್ನೆ ಹುಮನಾಬಾದ್ ಜನರದಾಗಿದೆ.

## ಕುಂಭಮೇಳದಿಂದ ಬರುತ್ತಿದ್ದಾಗ ಅಪಘಾತ : ರಾಯಚೂರಿನ ವ್ಯಕ್ತಿ ಸಾವು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಫೆ.15: ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳಕ್ಕೆ ಹೋಗಿದ್ದ ರಾಯಚೂರಿನ ವ್ಯಕ್ತಿ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದಾರೆ.

ಮಹಾದೇವ ವಾಲೇಕರ್ (48) ಮೃತ ದುರ್ದೈವಿ. ಮಧ್ಯಪ್ರದೇಶದ ಮೇಹೂರ್ ಬಳಿ ಕಾರು ಇವರಿಗೆ ಡಿಕ್ಕಿ ಹೊಡೆದಿದ್ದರಿಂದ ಸಾವನ್ನಪ್ಪಿದ್ದಾರೆ.

ರಾಯಚೂರು ತಾಲೂಕಿನ ಚಂದ್ರಬಂಡಾ ಗ್ರಾಮದ ನಿವಾಸಿಯಾಗಿದ್ದ ಮಹಾದೇವ ಕುಟುಂಬ ಸ್ನೇಹಿತರೊಂದಿಗೆ ಪ್ರಯಾಗ್‌ರಾಜ್ ಕುಂಭಮೇಳದಿಂದ

(2ನೇ ಪುಟ ನೋಡಿ)

## ಶಿಕ್ಷಣ, ಆರೋಗ್ಯ ಕ್ಷೇತ್ರಗಳಿಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಹೆಚ್ಚಿನ ಒತ್ತು; ಡಾ.ಅಜಯ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 15: ಕಲ್ಯಾಣ ಕರ್ನಾಟಕ ಭಾಗ ಅಭಿವೃದ್ಧಿ ಹೊಂದಲು ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ್ಯ ಕ್ಷೇತ್ರಗಳು ಅತ್ಯಂತ ಮುಖ್ಯವಾಗಿದ್ದು, ಈ ಕ್ಷೇತ್ರಗಳ ಅಭಿವೃದ್ಧಿಗೆ ಸರ್ಕಾರ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಹೆಚ್ಚಿನ ಒತ್ತು ನೀಡುತ್ತಿದೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಪ್ರತಿಯೊಬ್ಬರ ಜವಾಬ್ದಾರಿ ಪ್ರಮುಖವಾಗಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಡಾ.ಅಜಯ್ ಧರ್ಮಸಿಂಗ್ ಅವರು ಹೇಳಿದರು.

ಫೆ.15ರ ಶನಿವಾರ ದಂದು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಕಲಬುರಗಿ ಆಯುಕ್ತಾಲಯ ಶಾಲಾ ಶಿಕ್ಷಣ ಇಲಾಖೆ ಹಾಗೂ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ ಇವರ ಸಹಯೋಗದಲ್ಲಿ ಶಿಕ್ಷಣ ಭಾಗೀದಾರರ ಸಮಾವೇಶ -2025ರ ಎರಡನೇ ದಿನದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಶಿಕ್ಷಣ ಅತ್ಯಂತ ದೊಡ್ಡ ಆಸ್ತ್ರ ಎಂಬ ಮಾತಿನಂತೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಪ್ರೊ.ನಂಜುಂಡಪ್ಪ ಅವರ ವರದಿ ಪ್ರಕಾರ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯಾಗಬೇಕಾದರೆ ಮೊದಲು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳು ಅಭಿವೃದ್ಧಿ ಹೊಂದಬೇಕು. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

42 ಸಾವಿರಕ್ಕೂ ಮಕ್ಕಳು ಪ್ರವೇಶ; ಹಿಂದುಳಿದ ಜಿಲ್ಲೆ ಎಂಬ ಹಣೆಪಟ್ಟಿಯನ್ನು ಕಿತ್ತು ಹಾಕಲು ಸರ್ಕಾರದಿಂದ ಹಲವಾರು ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಮುಖ್ಯವಾಗಿ ಗ್ರಾಮೀಣ ಭಾಗದ ಮಕ್ಕಳಿಗೆ ಅನುಕೂಲವಾಗುವಂತೆ 30 ಕೋಟಿ ರೂ. ವೆಚ್ಚದಲ್ಲಿ 1008 ಶಾಲೆಗಳಲ್ಲಿ ನರ್ಸರಿ ತರಗತಿಗಳನ್ನು ಪ್ರಾರಂಭಿಸಲಾಗಿದೆ. ತರಗತಿ ಆರಂಭಿಸಿದ ಒಂದೂವರೆ ತಿಂಗಳಿನಲ್ಲಿ 42 ಸಾವಿರಕ್ಕೂ ಹೆಚ್ಚಿನ ಮಕ್ಕಳು ಪ್ರವೇಶಾತಿ ಪಡೆದಿದ್ದಾರೆ. ಇದೊಂದು ಐತಿಹಾಸಿಕ ಬದಲಾವಣೆಗೆ ಸಾಕ್ಷಿಯಾಗಿದೆ. ಇದರ ಜೊತೆಗೆ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲಾಗಿದೆ ಎಂದರು.

ಇದೇ ವೇಳೆ ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅವರು ಮಾತನಾಡಿ, ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಶೈಕ್ಷಣಿಕ ಅಧ್ಯಯನ ಸಮಿತಿಯನ್ನು ರಚಿಸಿರುವುದು ಅತ್ಯಂತ

(2ನೇ ಪುಟ ನೋಡಿ)

## ಬಂಜಾರಾ ಸಮುದಾಯದ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಫೆ:15: ಶಿಕ್ಷಣದಿಂದಲೇ ಉನ್ನತಿ ಸಾಧ್ಯ. ಕಾರಣ ಬಂಜಾರ ಸಮುದಾಯದ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು. ಅದರಲ್ಲೂ ಹೆಣ್ಣು ಮಕ್ಕಳಿಗೆ ಶಾಲೆ ಅರ್ಧಕ್ಕೆ ಬಿಡಿಸಿ ಚಿಕ್ಕ ವಯಸ್ಸಿನಲ್ಲಿಯೇ ಮದುವೆ ಮಾಡಬೇಡಿ ಎಂದು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಕರೆ ನೀಡಿದರು.

ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ *ಸಂತ ಸೇವಾಲಾಲ್ ಮಹಾರಾಜ್ ರ ಜಯಂತಿ* ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ, ಸಂತ ಸೇವಾಲಾಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಿ ಅವರು ಮಾತನಾಡಿ , ಸಂತ ಸೇವಾಲಾಲ್ ಮಹಾರಾಜರು ತಮ್ಮ ಜೀವಿತಾವಧಿಯಲ್ಲಿ ಶಿಕ್ಷಣ-ಕ್ಕೆ ಹೆಚ್ಚು ಒತ್ತು ನೀಡಿದ್ದರು. ಸಂಚಾರ ಮಾಡುತ್ತಿದ್ದ ವೇಳೆ ದಾರಿಯಲ್ಲಿ ಸಿಗುವ ತಾಂಡಾಗಳಿಗೆ ಭೇಟಿ ನೀಡಿ, ಇದನ್ನೇ ಜನಕ್ಕೆ ಹೇಳುತ್ತಿದ್ದರು. ಅದಕ್ಕಾಗಿ ಅವರ ಆಶಯ ನಿಜರೂಪದಲ್ಲಿ ಜಾರಿಯಾಗಬೇಕಾದರೆ ಹಿಂದುಳಿದ ಈ ಸಮಾಜದ ಮಕ್ಕಳು ಶಿಕ್ಷಣ ಪಡೆಯಬೇಕು. ಈ ಸಮಾಜದಲ್ಲಿನ ಅಕ್ಷರಸ್ಥರು ಪಾಲಕರಿಗೆ ತಿಳಿಹೇಳಬೇಕೆಂದರು.

ಬಡತನದ ಕಾರಣಕ್ಕೆ ಹೆಣ್ಣು ಮಕ್ಕಳನ್ನು ಬೇಗನೆ ಮದುವೆ ಮಾಡಿಕೊಡುತ್ತಾರೆ. ಆದರೆ ಚಿಕ್ಕವಯಸ್ಸಿನಲ್ಲಿ ಮದುವೆ ಮಾಡಿದರೆ ಅವಳ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಎಂದರು.

ಬಂಜಾರ ಸಮಾಜದವರು ಕಷ್ಟ ಜೀವಿಗಳು, ಶ್ರಮಿಕರು, ಇಂದಿಗೂ ನೂರಾರು ತಾಂಡಾಗಳಲ್ಲಿನ ಜನರು ವ್ಯವಸಾಯ ಸೇರಿದಂತೆ-ಯೇ ವಿವಿಧ ಕೆಲಸಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಕಾಯಕದಲ್ಲಿ ನಂಬಿಕೆ ಇಟ್ಟಿದ್ದಾರೆ ಎಂದು ಮಾರ್ಮಿಕವಾಗಿ ನುಡಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಜಿಲ್ಲೆಯ ಗುರುಮಠಕಲ್ ಭಾಗದಲ್ಲಿ ಬಂಜಾರ ಸಮುದಾಯದಲ್ಲಿ ಚಿಕ್ಕ ವಯಸ್ಸಿಗೆ ಹೆಣ್ಣುಮಕ್ಕಳಿಗೆ ಮದುವೆ ಮಾಡಿಕೊಡಲಾಗುತ್ತಿದೆ. ಇದು ನಿಲ್ಲಿಸುವತ್ತ ಸರ್ಕಾರ ಮತ್ತು ಸಮಾಜ ಗಂಭೀರ ಚಿಂತನೆ ಮಾಡಬೇಕೆಂದರು.

ಹೆಣ್ಣು ಮಕ್ಕಳಿಗೆ ಹೆಚ್ಚಿನ ಶಿಕ್ಷಣ ನೀಡಬೇಕೆಂದರು.

(2ನೇ ಪುಟ ನೋಡಿ)

# ಸರ್ವಜ್ಞ ವಿದ್ಯಾಪೀಠದಲ್ಲಿ ಸಂತ ಸೇವಾಲಾಲ್ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಪಟ್ಟಣದ ಪ್ರತಿಷ್ಠಿತ ಸರ್ವಜ್ಞವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶ್ರೀ ಸಂತ ಸೇವಾಲಾಲ ಮಹಾರಾಜರ 286 ನೆಯ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರ ಅವರು ಸೇವಾಲಾಲ್ ರ ಭಾವಚಿತ್ರಕ್ಕೆ ಪುಷ್ಪನಮನವನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಯ ಸಂತೋಷ ಪವಾರ ಮಾತನಾಡಿ ಬಂಜಾರಾ ಸಮುದಾಯದ ಆರಾಧ್ಯ ದೈವ ವಾಗಿರುವ ಶ್ರೀ ಸಂತ ಸೇವಾಲಾಲರನ್ನು ಬಂಜಾರರು ಮೋತಿವಾಳು, ಆಇವಳೋ, ಎಂದು ಕರೆಯುತ್ತಾರೆ. ತಂದೆ ಭೀಮಾನಾಯಕ ತಾಯಿ ಧರ್ಮಣಿಯವರ ಉದರದಲ್ಲಿ ಜನಿಸಿದ ಸೇವಾಲಾಲರು ಹಲವಾರು ಪವಾಡಗಳನ್ನು ಮಾಡಿದ್ದಾರೆ. ಕಲ್ಲುಗಳಿಂದ ನಗಾರಿ ತಯಾರಿಸಿ ಬಾರಿಸಿದ್ದಾರೆ. ಮಣ್ಣಿನಿಂದ ಸಿರಾ ಮಾಡಿ ಸ್ನೇಹಿತರಿಗೆ ಉಣ ಬಡಿಸಿದ್ದಾರೆ. ಹೀಗೆ ಹಲವಾರು ಪವಾಡಗಳನ್ನು ಮಾಡುತ್ತಾ ಬಂಜಾರರಿಗೆ ವ್ಯಸನ ಮುಕ್ತರಾಗಿರಿ ಮತ್ತು ಪ್ರಾಮಾಣಿಕತೆಯಿಂದ ಜೀವನವನ್ನು ಕಳೆಯಿರಿ ಮೋಸ ಮಾಡದಿರಿ ಬಡಬಗ್ಗರಿಗೆ ಸಹಾಯವನ್ನು ಮಾಡಿರಿ ಎಂಬ ಸಂದೇಶಗಳನ್ನು ನೀಡಿದ್ದಾರೆ. ಸಮಾಜದಲ್ಲಿ ನಾವು ಜಾತಿ ಧರ್ಮ ಜನಾಂಗಕ್ಕೆ ಸೀಮಿತರಾಗಿರದೆ ಎಲ್ಲಾ ಮಹಾನ್ ವ್ಯಕ್ತಿಗಳ ಜೀವನ ಚರಿತ್ರೆಯನ್ನು ತಿಳಿದುಕೊಂಡು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಶಿಕ್ಷಕರಾದ ರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳ್ಳಗಿ, ಶಾಂತಗೌಡ ಬಿರಾದಾರ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಮೌಲಾಲಿ ವಾಲಿಕಾರ, ಸಿದ್ದನಗೌಡ ಮೂದನೂರು, ಶರಣಗೌಡ ಕಾಚಾಪುರ, ರಮೇಶ ಪಾಸೋಡಿ, ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಅಂಬುಜಾ ಹಜೇರಿ, ಶಿವಕುಮಾರ ಕುಂಬಾರ, ರಾಜಬಿ ಬಿದರಿ, ಕಲ್ಪನಾ ಹಜೇರಿ, ನಾಗರತ್ನ ಮೈಲೇಶ್ವರ, ಹೇಮಾ ಕೊಡೆಕಲ್, ನಾಗಶ್ರೀ ನಾಯಕ, ಮೇಘಾ ಪಾಟೀಲ, ಮುಬಿನ ಮುರಾಳ, ತನುಶ್ರೀ ಮಹೇಂದ್ರಕರ, ಶಂಕ್ರಮ್ಮ, ಮುಬಾರಕ ಬನಹಟ್ಟಿ ಹಾಗೂ ಸರ್ವ ಗುರು ಬಳಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಥ ಮೈದಾನದಲ್ಲಿ ತೃತೀಯ ಕಾಯಕ ಉತ್ಸವಕ್ಕೆ ಬೀದರ ವಿಶ್ವವಿದ್ಯಾಲಯದ ಕುಲಪತಿಗಳಿಂದ ಚಾಲನೆ.



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ :– ಫೆ 15. ಹಾರಕೂಡ ಶ್ರೀಮಠದ ವತಿಯಿಂದ ನಗರದ ರಥ ಮೈದಾನದಲ್ಲಿ ಶನಿವಾರ ರಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ನೇತೃತ್ವದಲ್ಲಿ ತೃತೀಯ ಕಾಯಕ ಉತ್ಸವದ ಉದ್ಘಾಟನಾ ಸಮಾರಂಭ ಜರುಗಿತು.

ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು, ತಿಪುರಾಂತಿನ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಬಸವರಾಜ ಪಾಟೀಲ ಸೇಡಂ, ಪೂಜ್ಯ ಗಂಗಾಬಿಕಾ ಅಕ್ಕನವರು, ಬೀದರ ವಿಶ್ವ ವಿದ್ಯಾಲಯ ಕುಲಪತಿಗಳಾದ ಪ್ರೊ. ಬಿ.ಎಸ್. ಬಿರಾದಾರ, ಶರಣ ಸುಭಾಷಚಂದ್ರ ನಾಗರಾಳೆ, ಶರಣ ರಾಜು ಬಣಕಾರ, ಮಲ್ಲಿನಾಥ ಹಿರೇಮಠ ಹಾರಕೂಡ, ಕುಮಾರಿ ರಾಜಶ್ರೀ ದಿಲೀಪಕುಮಾರಸ್ವಾಮಿ, ನವಲಿಂಗ ಪಾಟೀಲ ಮುಂತಾದವರು ಭಾಗವಹಿಸಿದ್ದರು.

ನಂತರ ವಿವಿಧ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಮೊದಲ ದಿನ ಸಿಬಿಎಸ್ಇ ಪರೀಕ್ಷೆ ಸುಸೂತ್ರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಫೆ.15–ಸಿಬಿಎಸ್ಇ 10 ಮತ್ತು 12 ನೇ ತರಗತಿ ಪರೀಕ್ಷೆಗಳು ಇಂದಿನಿಂದ ಪ್ರಾರಂಭವಾಗಿವೆ. ಯಾವುದೇ ಅಡ್ಡಿ ಆತಂಕವಿಲ್ಲದೆ ಮೊದಲ ದಿನ ಪರೀಕ್ಷೆ ಸುಸೂತ್ರವಾಗಿ ನಡೆಯಿತು. ಈ ಬೋರ್ಡ್ ಪರೀಕ್ಷೆಗಳು ಭಾರತ ಸೇರಿದಂತೆ ವಿಶ್ವದಾದ್ಯಂತ 26 ದೇಶಗಳಲ್ಲಿ 7,842 ಕೇಂದ್ರಗಳಲ್ಲಿ ನಡೆ–ಯುತ್ತಿದೆ.

ಈ ಬಾರಿ ಸಿಬಿಎಸ್ಇ 10ನೇ ತರಗತಿಯ 84 ವಿಷಯಗಳಲ್ಲಿ 24,12,072 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, 12ನೇ ತರಗತಿಯ 17,88,165 ವಿದ್ಯಾರ್ಥಿಗಳು 120 ವಿಷಯಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ.

# ಸುಪ್ರೀಂ ಕೋರ್ಟ್ ಕದ ತಟ್ಟಿದ ಯೂಟ್ಯೂಬರ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಫೆ.14–ಯೂಟ್ಯೂಬರ್ ರಣವೀರ್ ಅಲಹಾಬಾದ್ ಈಗ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ಇಂಡಿಯಾಸ್ ಗಾಟ್ ಟ್ಯಾಲೆಂಟ್ ಕುರಿತು ಅಸಭ್ಯ ಮತ್ತು ಅಶ್ಲೀಲ ಕಾಮೆಂಟ್‌ಗಳಿಂದಾಗಿ ರಣವೀರ್ ಅಲಹಾಬಾದ್ ವಿವಾದಕ್ಕೆ ಸಿಲುಕಿದ್ದಾ–ರೆ. ಇಂಡಿಯಾಸ್ ಗಾಟ್ ಲ್ಯಾಟೆಂಟ್ ಕಾರ್ಯಕ್ರಮದ ಸಂದರ್ಭದಲ್ಲಿ ನೀಡಿದ ಅಶ್ಲೀಲ ಹೇಳಿಕೆಗಳ ಆರೋಪದ ಮೇಲೆ ವಿವಿಧ ರಾಜ್ಯಗಳಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಬಹು ಎಫ್ಐಆರ್‌ಗಳಿಗೆ ಸಂಬಂಧಿಸಿದಂತೆ ಪರಿಹಾರ ಕೋರಿ ಬಿಯರ್ ಬೈಸೆಪ್ಸ್ ಎಂದೇ ಜನಪ್ರಿಯವಾಗಿರುವ ಯೂಟ್ಯೂಬರ್ ರಣವೀರ್ ಸುಪ್ರೀಂ ಕೋರ್ಟ್‌ಗೆ ಅನೇಕ ಎಫ್ಐಆರ್‌ಗಳನ್ನು ಒಟ್ಟುಗೂಡಿಸುವಂತೆ ಅರ್ಜಿ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ ಈ ವಿಡಿಯೋ ವೈರಲ್ ಆದ ನಂತರ ಭಾರೀ ಆಕ್ರೋಶಕ್ಕೆ ಕಾರಣವಾದ ಹೇಳಿಕೆಗಳ ಮೇಲೆ ಮಹಾರಾಷ್ಟ್ರ ಪೊಲೀಸರು ಮತ್ತು ಅಸ್ಸಾಂ ಪೊಲೀಸರು ಇಲ್ಲಿಯವರೆಗೆ ಎಫ್ಐಆರ್‌ಗಳನ್ನು ದಾಖಲಿಸಿದ್ದಾರೆ.

ಡಾ. ಅಭಿನವ್ ಚಂದ್ರಚೂಡ್ ಅವರು ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸಂಜೀವ್ ಖನ್ನಾ ಅವರ ಮುಂದೆ ಈ ವಿಷಯವನ್ನು ಪ್ರಸ್ತಾಪಿಸಿದ್ದಾರೆ. ಇದು ಸಂವಿಧಾನದ 32 ನೇ ವಿಧಿಯ ಅಡಿಯಲ್ಲಿ ಸಲ್ಲಿಸಲಾದ ಅರ್ಜಿಯಾಗಿದೆ ಎಂದು ಅವರು ಹೇಳಿದ್ದಾರೆ.

ಈ ಪ್ರಕರಣದಲ್ಲಿ ಮುಂಬೈ ಪೊಲೀಸರು ರಣವೀರ್ ಅವರನ್ನು ವಿಚಾರಣೆಗೆ ಕರೆದಿದ್ದಾರೆ, ಆದರೆ ಅವರು ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗಲು ನಿರಾಕರಿಸಿದ್ದಾರೆ. ಹೀಗಾಗಿ ಎರಡನೇ ಬಾರಿಗೆ ಸಮನ್ಸ್ ಜಾರಿ ಮಾಡಿದಾಗ, ಯೂಟ್ಯೂಬರ್ ತನ್ನ ಮನೆಯಲ್ಲಿ ತನ್ನ ಹೇಳಿಕೆಯನ್ನು ದಾಖಲಿಸಿಕೊಳ್ಳುವಂತೆ ವಿನಂತಿಸಿಕೊಂಡಿದ್ದಾರೆ.

ಆದರೆ, ಮುಂಬೈ ಪೊಲೀಸರು ಅವರ ಮನವಿಯನ್ನು ತಿರಸ್ಕರಿಸಿದ್ದಾರೆ. ರಣವೀರ್ ಪೊಲೀಸ್ ಠಾಣೆಯಲ್ಲಿ ಹಾಜರಾಗಬೇಕಾಗುತ್ತದೆ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.



ಬಸವಕಲ್ಯಾಣ :– ಫೆ 15. ಹಾರಕೂಡ ಶ್ರೀಮಠದ ವತಿಯಿಂದ ನಗರದ ರಥ ಮೈದಾನದಲ್ಲಿ ಶನಿವಾರ ರಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ನೇತೃತ್ವದಲ್ಲಿ ತೃತೀಯ ಕಾಯಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ವಿವಿಧ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. (ಮಲ್ಲಮ್ಮ ನುಡಿ ಚಿತ್ರ)

# ನಾಟಕಗಳಿಂದ ಮನಸ್ಸು ಪರಿವರ್ತನೆ ಸಾಧ್ಯ – ಸುರೇಶ ಚನಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ನಾಟಕ ಸೇರಿದಂತೆ ದೃಶ್ಯ ಪ್ರದರ್ಶನಗಳು ಮನಸ್ಸು ಪರಿವರ್ತಿಸುವ ಸಾಧನಗಳಾಗಿವೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು. ತಾಲೂಕಿನ ಧನ್ನೂರ(ಹೆಚ್) ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ನಡೆದ ವಿಷ್ಣುಕಾಂತ ಬಿ.ಜೆ ನಿರ್ದೇಶನದ, ಮೈಸೂರು ಹೆಲನ್ ಮತ್ತು ಮಲ್ಲಿಕಾರ್ಜುನ ಶಾಮ ನಟಿಸಿರುವ ಕಿವುಡ ಮಾಡಿತ ಕಿತಾಪತಿ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸತ್ಯ ಹರಿಶ್ಚಂದ್ರ ನಾಟಕ ನೋಡಿ, ಮನಸ್ಸು ಪರಿವರ್ತನೆ ಹೊಂದಿ, ಮೋಹನದಾಸ ಕರಮಚಂದ ಗಾಂಧಿ ಮಹಾತ್ಮಾಗಾಂಧಿಯಾದರು. ಹೀಗಾಗಿ ಜಾತ್ರಾ ಮಹೋತ್ಸವ ಸೇರಿದಂತೆ ಇತರೆ ಉತ್ಸವಗಳಲ್ಲಿ ಕಲ್ಯಾಣ ಕುವರ ಕಲ್ಚರಲ್ ಟ್ರಸ್ಟ್ ವತಿಯಿಂದ ವಿಶ್ನುಕಾಂತ ಬಿ.ಜೆ. ಯವರು ಕರ್ನಾಟಕ ನಾಟಕ ಅಕಾಡೆಮಿ ಸಹಯೋಗದೊಂದಿಗೆ ನಾಟಕ ಪ್ರದರ್ಶನ ಮಾಡಿ ಗ್ರಾಮೀಣ ಭಾಗದ ಜನರಲ್ಲಿ ಪ್ರೀತಿ ವಿಶ್ವಾಸ ತುಂಬುತಿರುವುದು ಸಂತಸದ ಸಂಗತಿಯಾಗಿದೆ ಎಂದು ಹೇಳಿದರು.

ಕಲ್ಯಾಣಕುವರ ಕಲ್ಚರಲ್ ಟ್ರಸ್ಟ್ ಅಧ್ಯಕ್ಷ ವಿಷ್ಣುಕಾಂತ.ಬಿ.ಜೆ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮೂರ ಧನ್ನೂರ ಹಬ್ಬವನ್ನು ಸುಮರು 8 ವರ್ಷಗಳಿಂದ ಮಾಡುತ್ತ ಬರಲಾಗುತ್ತಿದೆ. ಈ ಸಂದರ್ಭದಲ್ಲಿ ನಾಟಕ ಪ್ರದರ್ಶನ, ನೃತ್ಯ ಸ್ಥೆರಿದಂತೆ ನಾಡಿನ ಹೆಸರಾಂತ ಕಲಾವಿದರನ್ನು ಕರೆಸಿ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದು ಹೇಳಿದರು. ಇದೇವೇಳೆ ಚಲನಚಿತ್ರ ನಟ, ನಿರ್ದೇಶಕ ವಿಷ್ಣುಕಾಂತ.ಬಿ.ಜೆ ಸ್ಥೆರಿದಂತೆ ನಾಟಕದ ಇತರೆ ಕಲಾವಿದರಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕಲಾವಿದರಾದ ಬಸವರಾಜ ಕಟ್ಟಿಮನಿ, ರಾಜು ಗೋಕಾಕ, ಮೈಸೂರು ಹೆಲನ್, ಮಲ್ಲಿಕಾರ್ಜುನ ಶಾಮ, ರಾಚಯ್ಯ ಸ್ವಾಮಿ, ಶೇಷಪ್ಪಾ ಚಿಟ್ಟಾ, ಧನರಾಜ, ರೂಪಾ ಗೋಕಾಕ, ಅಂಬರೀಷ ಪಾಟಿಲ, ನಿಕಿರಾಜ, ಜಯಸ್ವಾಮಿ, ಅಕ್ಷಯ ಶೀಲವಚಿತ, ರಘುಪ್ರಿಯ, ಕೇದಾರನಾಥಸ್ವಾಮಿ ಮಠಪತಿ, ಸಿದ್ಧರೋಢ ಭಾಲ್ಕೆ. ಅಶೋಕ ದಾಡಗೆ, ವಿರಶೆಟ್ಟಿ ಚನಶೆಟ್ಟಿ, ವೀರಭದ್ರೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಪರಮೇಶ್ವರ ಪಾಟೀಲ, ಸುನೀಲಕುಮಾರ ಪಾಟೀಲ, ವಿಯಕುಮಾರ ಹಾಳಿ, ಬಾಬುರಾವ ಪೊಲೀಸ್ ಪಾಟೀಲ, ನಾಗನಾಥ ಅರಳೆ ಉಪಸ್ಥಿತರಿದ್ದರು.

ಕೇದಾರನಾಥಸ್ವಾಮಿ ಸ್ವಾಗತಿಸಿದರು. ವಿಜಯಕುಮಾರ ನಿರೂಪಿಸಿದರು. ಶ್ರೀಗೌರಿ ವಿಷ್ಣುಕಾಂತ ವಂದಿಸಿದರು.

# ಸಾಂಸ್ಕೃತಿಕ ಅಧ್ಯಯನವು ಅಧೀನತೆ ಮತ್ತು ಅಧಿಕಾರಗಳ ಸಂಕಥನ : ಡಾ. ದುಶಾನ್ ಡೀಕ್.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: –ಫೆ15. ಸಾಂಸ್ಕೃತಿಕ ಅಧ್ಯಯನವು ಸಮಾಜ, ರಾಜಕಾರಣ, ಆರ್ಥಿಕತೆ, ಧಾರ್ಮಿಕತೆ ಹಾಗೂ ಲಿಂಗ ರಾಜಕಾರಣಗಳಲ್ಲಿ ಕಂಡು ಬರುವ ಅಧಿಕಾರ ಮತ್ತು ಅಧೀನತೆಯ ಸಂಕಥನವಾಗಿದೆ. ಹಲವು ಸಿದ್ಧಾಂತಗಳನ್ನು ಪ್ರತಿಕಾರವಾಗಿ ಬಳಸಿ ಸಾಂಸ್ಕೃತಿಕ ಅಧ್ಯಯನ ನಡೆಸಲಾಗುತ್ತಿದೆ ಎಂದು ಸ್ಲೋವಾಕಿಯಾದ ಕೊಮೆನಿಯಸ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ದುಶಾನ್ ಡೀಕ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಂಶೋಧಕರೊಂದಿಗೆ ಸಂವಾದ ಸಮಾರಂಭದಲ್ಲಿ ಮಾತನಾಡಿದ ಅವರು, ಸಾಂಸ್ಕೃತಿಕ ಅಧ್ಯಯನವು ಆಧುನಿಕ ಸಂಶೋಧನೆಯ ಭಾಗವಾಗಿದೆ. ಇದೊಂದು ಬೌದ್ಧಿಕ ಮತ್ತು ವೈಚಾರಿಕ ಪ್ರಕ್ರಿಯೆಯಾಗಿದೆ ಎಂದರು.

ಅಧಿಕಾರದ ರಚನೆ, ಚಾರಿತ್ರಿಕ ಸಂದರ್ಭಗಳು, ಸಮಾಜದ ಸ್ತರ ವಿನ್ಯಾಸಗಳನ್ನು ಅರ್ಥಮಾಡಿಕೊಳ್ಳಲು ಒದಗಿದ ಅರಿವಿನ ಕಣ್ಣಾಗಿದೆ. ಮಾರ್ಕ್ಸ್ ವಾದಿ, ಸ್ತ್ರೀ ವಾದಿ ಸಿದ್ಧಾಂತಗಳನ್ನು ಅನ್ವಯಿಸಿ ಮಾನವಶಾಸ್ತ್ರ, ಸಮಾಜಶಾಸ್ತ್ರ ಸೇರಿ ಅಂತರ್ಶಿಸ್ತೀಯ ಅಧ್ಯಯನದ ಕ್ರಮ ಸಾಂಸ್ಕೃತಿಕ ಅಧ್ಯಯನದಲ್ಲಿ ಸಾಧ್ಯ ಎಂದರು.

ಚರಿತ್ರೆಯ ರೂಪುಗೊಳ್ಳುವ ಕ್ರಮ ಯಾವಾಗಲು ಕೇಂದ್ರದಿಂದಲೇ ಅನುಸರಿಸಿದ್ದೇವೆ. ಜನ ಸಮುದಾಯದ ಸಂಸ್ಕೃತಿ, ಆಚರಣೆ, ನಂಬಿಕೆಗಳ ಒಟ್ಟು ಮೌಲ್ಯಗಳನ್ನು ಗ್ರಹಿಸಿದರೆ, ಅಂಚಿನಲ್ಲಿನರಿಗೂ ಇರುವ ಐತಿಹಾಸಿಕ ಅಸ್ಮಿತೆಯನ್ನು ಕಟ್ಟಿಕೊಡಬಹುದು ಎಂದರು.

ಜನ ಸಮುದಾಯದಿಂದಲೇ ಕಲ್ಯಾಣದ ನೆಲದಲ್ಲಿ ಚಳುವಳಿ ಆರಂಭವಾಯಿತು. ಜನರ ತೀವ್ರವಾದ ಅನುಭವಗಳೇ ಸೃಜನಗೊಂಡು ವಚನಗಳಾದವು. ವಚನ ಸಾಹಿತ್ಯ ತನ್ನೊಳಗೆ ಹಲವು ತಾತ್ವಿಕತೆಗಳು ಇರಿಸಿಕೊಂಡು ಇಂದಿಗೂ ಸಾಂಸ್ಕೃತಿಕ ಅಧ್ಯಯನದ ವ್ಯಾಪ್ತಿಯಲ್ಲಿ ಹಲವು ಆಯಾಮಗಳಲ್ಲಿ ವಿಶ್ಲೇಷಣೆಗೆ ಒಳಗಾಗುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಸಾಂಸ್ಕೃತಿಕ ಅಧ್ಯಯನವನ್ನು ವಿದ್ವತ್ ವಲಯದಲ್ಲಿ, ಬೌದ್ಧಿಕ ಲೋಕದಲ್ಲಿ ವಿಮರ್ಶೆಯ ಹೊಸ ಮಾದರಿಯಾಗಿ ಈ ಕಾಲದಲ್ಲಿ ಪರಿಗಣಿಸಲಾಗುತ್ತದೆ. ಬಹುತ್ವದ ಆಯಾಮವನ್ನು ಪ್ರತಿಪಾದಿಸುವ ಸಾಂಸ್ಕೃತಿಕ ಅಧ್ಯಯನವು ಜನಪ್ರಿಯ ಸಂಸ್ಕೃತಿಯ ಕುರಿತೂ ಅನುಸಂಧಾನ ನಡೆಸುತ್ತಿದೆ ಎಂದರು.

ಡಾ. ದುಶಾನ್ ಡೀಕ್ ಅವರೊಂದಿಗೆ ವಿದ್ಯಾರ್ಥಿಗಳು ಸಂವಾದ ನಡೆಸಿದರು. ಈ ಸಂದರ್ಭದಲ್ಲಿ

ವಿವೇಕಾನಂದ ಶಿಂಥೆ,

ಶ್ರೀನಿವಾಸ ಉಮಾಪುರೆ, ಪವನ ಪಾಟೀಲ, ನೀಲಮ್ಮ ಮೇತ್ರೆ, ನಾಗವೇಣಿ ಬಿರಾದಾರ, ರೋಶನ್ ಬಿ, ಸಂಗೀತಾ ಮಹಾಗಾವೆ, ಗುರುದೇವಿ ಕಿಚಡೆ, ಪ್ರವೀಣ ಬಿರಾದಾರ, ಕೃಷ್ಣ ಸಸ್ತಾಪುರ, ನಾಗರಾಜ ನಾಸೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಚನ್ನಬಸಪ್ಪಗೌರ ನಿರೂಪಿಸಿದರು. ಗಂಗಾಧರ ಸಾಲಿಮಠ ಸ್ವಾಗತಿಸಿದರು .ಜಗದೇವಿ ಜವಳಗೆ ವಂದಿಸಿದರು.

# ಜೆಸ್ಕಾಂ ಗ್ರಾಮೀಣ; ಫೆ.19ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 15– ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ವಿಭಾಗದ ಕಲ್ಮಲಾ 33/11ಕೆವಿ ಉಪ ಕೇಂದ್ರದಲ್ಲಿ ತುರ್ತು ದುರಸ್ಥಿ ಕಾರ್ಯ ಹಮ್ಮಿಕೊಂಡ ಹಿನ್ನಲೆಯಲ್ಲಿ ಇದೇ ಫೆ.19ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಅಂ–ದು ಸಿದ್ಧನಭಾವಿ ಕ್ಯಾಂಪ್, ಕಸ್ಬೆಕ್ಯಾಂಪ್ ಮತ್ತು ಶ್ರೀರಾಮನಗರ ಕ್ಯಾಂಪ್, ಗೋನಾಳ, ಪತ್ತೇಪುರ, ಹೊಸ್ಪೇಟೆ, ಮಂಚ್ಲಾಪುರ, ಜೇಗರಕಲ್, ಮರ್ಚೇಡ್, ಮಲ್ಲಾಪುರ, ಹಂಬೆರಳು, ತಿಮ್ಮಪುರ, ಜಿ.ಹನುಮಾಪುರ, ಮೀರಾಪುರ, ಯಕ್ಲಾಸ್‌ಪುರ, ವಿಜಯನಗರ ಕ್ಯಾಂಪ್, ಮಾರೆಮ್ಮ ಕ್ಯಾಂಪ್, ಕಲ್ಮಲಾ, ಸೀತಾನಗರ ಕ್ಯಾಂಪ್, ಮುರಾಂಪುರ, ಸುಲ್ತಾನಪುರ, ಮಮದಾಪುರ ಮತ್ತು ನೆಲಹಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ರಯಯವಾಗಲಿದೆಂದು ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಹಕರು ಆನ್ ಲೈನ್ ಮೂಲಕ ಖರೀದಿ ಬಂದ್ ಮಾಡಿ: ಶಾಸಕ ಚನ್ನಾರಡ್ಡಿ ಪಾಟೀಲ್ ಕರೆ.

# ಜಿಲ್ಲಾ ಕಿರಾಣಿ ಮತ್ತು ಜನರಲ್ ಸ್ಟೋರ್ ವ್ಯಾಪಾರಿಗಳ ಸಂಘದ ಪದಾಧಿಕಾರಿಗಳ ಪದಗ್ರಹಣ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗ್ರಾಹಕರು ಆನ್ ಲೈನ್ ಮೂಲಕ ದಿನಸಿ ವಸ್ತುಗಳನ್ನು ಸೇರಿದಂತೆಯೇ ಅಗತ್ಯ ಸಾಮಾನುಗಳನ್ನು ತರಿಸಿಕೊಳ್ಳದೇ, ಮಾರುಕಟ್ಟೆಯಲ್ಲಿ ಇರುವ ಅಂಗಡಿಗಳಲ್ಲಿಯೇ ಖರೀದಿಸುವ ಮೂಲಕ ಸ್ಥಳಿಯ ವ್ಯಾಪಾರಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದರು.

ನಗರದ ಎಸ್ ಡಿಎನ್ ಹೋಟೆಲ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಿಲ್ಲಾ ಕಿರಾಣಿ ಮತ್ತು ಜನರಲ್ ಸ್ಟೋರ್ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ 2025–26 ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಇಂದು ಈ ಕ್ಷೇತ್ರದಲ್ಲಿ ಸಾಕಷ್ಟು ಸ್ಪರ್ಧೆಯಿದೆ. ಹೆಜ್ಜೆ, ಹೆಜ್ಜೆಗೂ ಕಿರಾಣಿ, ಜನರಲ್ ಸ್ಟೋರ್‌ಗಳು ಆಗುತ್ತಿವೆ, ಇದಲ್ಲದೇ ಆನ್ ಲೈನ್ ವ್ಯಾಪಾರದ ಭೂತವು ವ್ಯಾಪಾಕವಾಗಿ ಬೆಳೆಯುತ್ತಿದೆ. ಈ ನಡುವೆ ಸ್ಥಳಿಯ ವ್ಯಾಪಾರಿಗಳು ಗಟ್ಟಿಯಾಗಿ ನಿಂತು ಗ್ರಾಹಕರ ಬೇಡಿಕೆಯಂತೆಯೇ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಶ್ಲಾಘನಿಯವೆಂದರು.

ಗುಣಮಟ್ಟದ ಮತ್ತು ಆದಷ್ಟು ಕಡಿಮೆ ದರಗಳಲ್ಲಿ ಅಗತ್ಯ ವಸ್ತುಗಳನ್ನು ಜನರಿಗೆ ನೀಡುವ ಮೂಲಕ ವ್ಯಾಪಾರ ವೃದ್ಧಿಗೊಳಿಸಬೇಕೆಂದು ವ್ಯಾಪಾರಸ್ಥರಿಗೆ ಶಾಸಕರು ಕಿವಿಮಾತು ಹೇಳಿದರು.

ಸಂಘಕ್ಕೆ ಬೇಕಾದ ಸಹಾಯ, ಸಹಕಾರ ಯಾವತ್ತು ತಮ್ಮಿಂದ ಇರುತ್ತದೆ ಎಂದ ಶಾಸಕರು, ಸ್ಥಳಿಯವಾಗಿ ಉತ್ಪಾದನೆಯಾಗುವ ವಸ್ತುಗಳನ್ನೆ ಹೆಚ್ಚಿಗೆ ಮಾರಾಟ ಮಾಡಿದರೇ ನಮ್ಮವರಿಗೇ ಹೆಚ್ಚಿನ ಲಾಭವಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಸಂಘಕ್ಕೆ ಸಿಎ ಸೈಟ್ ನೀಡಲು ತಾವು ಸಿದ್ದರಿದ್ದು, ಸಂಘದ ಪದಾಧಿಕಾರಿಗಳು ಖಾಲಿ ನಿವೇಶನ ಗುರುತಿಸಿ ಬೇಕಾದ ದಾಖಲೆಗಳನ್ನು ನೀಡಿದರೇ ಇದೆ ಫೆ. 28 ನಗರಸಭೆ ಸಾಮಾನ್ಯ ಸಭೆಯಿದೆ. ಅಲ್ಲಿ ಈ ಬಗ್ಗೆ ಚರ್ಚಿಸಿ ಸಹಾಯ ಮಾಡುವುದಾಗಿ ಹೇಳಿದರು.

ಕಳೆದ ಹತ್ತು ವರ್ಷಗಳಿಂದ ಮಲ್ಲಿಕಾರ್ಜುನ ಶಿರಗೋಳ್ ಅವರ ನೇತೃತ್ವದಲ್ಲಿ ಎಲ್ಲ ಪದಾಧಿಕಾರಿಗಳು ಸಂಘವನ್ನು ಉತ್ತಮ ರೀತಿಯಲ್ಲಿ ನಡೆಸಿಕೊಂಡು ಹೋಗುವ ಮೂಲಕ ಬೇರೆ ಊರಿನ ವ್ಯಾಪಾರಿಗಳಿಗೆ ಮಾದರಿಯಾಗಿದ್ದಾರೆ ಎಂದರು.

ಟ್ರೇಡಿಂಗ್ ಪರವಾನಿಗೆ ಬೇಕಾದ ದಾಖಲೆಗಳು ನೀಡಿದರೇ ಒಂದೇ ದಿನದಲ್ಲಿ ಕೆಲಸ ಮಾಡಿಕೊಡಲು ತಾವು ನಗರಸಭೆ ಅಧಿಕಾರಿಗಳಿಗೆ ಸೂಚಿಸುವುದಾಗಿ ಭರವಸೆ ನೀಡಿದರು. ನಗರದ ಬಹುತೇಕ ವ್ಯಾಪಾರಿಗಳು ನಿಗದಿತ ಸಮಯಕ್ಕೆ ನಗರಸಭೆಗೆ ತೆರಿಗೆ ಕಟ್ಟುತ್ತಾರೆ. ಇದು ಶೇ.ನೂರಷ್ಟು ಆಗಬೇಕೆಂದರು. ಪರವಾನಿಗೆ ರಿನಿವಲ್ ಮಾಡಿಸಿಕೊಳ್ಳಬೇಕೆಂದು ಹೇಳಿದ ಅಧ್ಯಕ್ಷೆ ಅನಪುರ, ಸಾರ್ವಜನಿಕರು ಸ್ಥಳಿಯ ವ್ಯಾಪಾರಿಗಳ ಬಳಿಯೇ ವಸ್ತು ಖರೀದಿಸುವ ಮೂಲಕ ಆನ್ ಲೈನ್ ವ್ಯಾಪಾರಕ್ಕೆ ಇತಿಶ್ರೀ ಹೇಳಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಿವಿಧ ಸಂಘಟನೆಗಳ ಪ್ರಮುಖ ಪದಾಧಿಕಾರಿ ಡಾ.ಸಿದ್ದರಾಜ್, ಕಳೆದ ಹತ್ತು ವರ್ಷಗಳಿಂದ ಈ ಸಂಘದ ಪದಾಧಿಕಾರಿಗಳು ತಮ್ಮ ವ್ಯಾಪಾರದೊಂದಿಗೆ ಕೆಲವು ಸಾಮಾಜಿಕ ಕಳಕಳಿಯ ಕೆಲಸಗಳು ಮಾಡುತ್ತಿವೆ. ಹೀಗಾಗಿ ಅವರಿಗೆ ಉದ್ಯೋಗದ ಜೊತೆಗೆ ಜನರ ಕಳಕಳಿ ಇರುವುದು ಕೂಡಾ ಕಂಡು ಬರುತ್ತದೆ ಎಂದರು.

ಸಂಘದ ಸಂಸ್ಥಾಪಕರೂ ಆದ ಹಿರಿಯ ಉದ್ಯಮಿ ಮಲ್ಲಿಕಾರ್ಜುನ ಶಿರಗೋಳ ಮಾತನಾಡಿ, ಸಂಘವು ವ್ಯಾಪಾಸ್ಥರ ಸುರಕ್ಷತೆಗೆ ಮೊದಲ ಆದ್ಯತೆ ನೀಡುವ ಮೂಲಕ ಸಾಮಾಜಿಕ ಕೆಲಸದಲ್ಲೂ ತೊಡಗಿಸಿಕೊಂಡಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಜಿಲ್ಲಾಧ್ಯಕ್ಷ ಸಿದ್ದಣ್ಣಗೌಡ ಹಿರೇಗೌಡ ವಹಿಸಿದ್ದರು.

ಬಿಜೆಪಿ ಮುಖಂಡರಾದ ರಾಚನಗೌಡ ಮುದ್ನಾಳ, ಚೆಂಬರ್ ಆಫ್ ಕಾಮರ್ಸನ ಅಧ್ಯಕ್ಷ ದಿನೇಶಕುಮಾರ ದೋಖಾ, ವಿವಿಧ ಇಲಾಖೆಗಳ ಅಧಿಕಾರಿಗಳಾದ ಚಂದ್ರಶೇಖರ ವಿ., ಖಾಜಾ ಖಲಿಲುಲ್ಲಾ, ಆಂಜನಯ್ಯ ಬೈಕಾರ್, ಅಶ್ಥತಕುಮಾರ ಪತ್ತಾರ್, ಸಂಘದ ಪ್ರಧಾನ ಕಾರ್ಯದರ್ಶಿ ಯಶವಂತಕುಮಾರ ಜಾಧವ್ , ಗೌರವ ಅಧ್ಯಕ್ಷ ಸುರೇಶ ಬಾಡದ್, ಶಂಕರೆಣ್ಣ ಕಾಗಲಜಗಾರ್, ರಾಜೇಂದ್ರ ಕುಮಾರ ಶಾಲೆ ಸೇರಿದಂತೆ–ಯೇ ಪದಾಧಿಕಾರಿಗಳು, ವ್ಯಾಪಾರಿಗಳು ಇದ್ದರು. ನೂತನ ಪದಾಧಿಕಾರಿಗಳಿಗೆ ಸನ್ಮಾನಿಸಲಾಯಿತು.



ಸೇಡಂ : ನಗರದ ಹೃದಯಬಾಗದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಾತಪಸ್ವಿ ಸಮಾಜ ಸುಧಾರಕ ಶ್ರೀ ಸಂತ ಸೇವಾಲಾಲ ಮಹಾರಾಜರ 286 ನೇ ಜಯಂತಿ ಪ್ರಯುಕ್ತ ಬಾವ ಚಿತ್ರಕ್ಕೆ ಪೂಜೆ, ಪುಷ್ಪನಮನ ಸಲ್ಲಿಸಿ ಜಯಂತೋತ್ಸವವನ್ನು ಆಚರಿಸಲಾಯಿತು.ಈ ವೇಳೆಯಲ್ಲಿ ವಿವಿಧ ಅಧ್ಯಯನ ವಿಭಾಗದ ಮುಖ್ಯಸ್ಥರು, ಪ್ರಾಧ್ಯಾಪಕರು, ಉಪನ್ಯಾಸಕರು, ಸಿಬ್ಬಂದಿ ಉಪಸ್ಥಿತರಿದ್ದರು.

## ತ್ವರಿತ ಜಾತಿ ಆದಾಯ ಪ್ರಮಾಣ ಪತ್ರಕ್ಕೆ

### ಸಹಾಯವಾಣಿ ಸ್ಥಾಪನೆ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ




ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.14: ಜಿಲ್ಲೆಯಲ್ಲಿ ಗ್ರಾಮ ಅಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ / ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿದ್ದು, ವಿದ್ಯಾರ್ಥಿಗಳ ಹಾಗೂ ಅಭ್ಯರ್ಥಿಗಳ ಅನುಕುಲಕ್ಕಾಗಿ ಜಿಲ್ಲಾಧಿಕಾರಿಗಳಕಾರ್ಯಾಲಯದಲ್ಲಿ ಸಹಾಯವಾಣಿಯನ್ನುಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ತ್ವರಿತವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆಯಿರುವವಿದ್ಯಾರ್ಥಿಗಳು / ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 08482-224319 ನ್ನು ಸಂಪರ್ಕಿಸಬಹುದಾಗಿದೆ. ಜಾತಿ ಮತ್ತು ಆದಾಯ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಸ್ವೀಕೃತ ಕರೆಗಳಿಗೆ ಕೂಡಲೇ ಸ್ಪಂದಿಸಿ ಕ್ರಮ ವಹಿಸಲಾಗುವುದು ಯಾವುದೇ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕಪಡುವ ಅಗತ್ಯವಿಲ್ಲವೆಂದು ಅವರು ತಿಳಿಸಿದ್ದಾರೆ.

## ಕಲಬುರಗಿಯಲ್ಲಿ "ರಾಷ್ಟ್ರೀಯ ಸಂಗೀತ ನೃತ್ಯ ಮಹೋತ್ಸವ":ಶುಭ ಧನಂಜಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಫೆ. 15 :ಬೆಂಗಳೂರು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ವತಿಯಿಂದ ಫೆಬ್ರವರಿ 23 ರಂದು ಬೆಳಿಗ್ಗೆ 10.00 ಗಂಟೆಗೆ ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ರಾಷ್ಟ್ರೀಯ ಸಂಗೀತ ಮತ್ತು ನೃತ್ಯ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಶುಭ ಧನಂಜಯ ಅವರು ತಿಳಿಸಿದರು.

ಇಂದು ಕನ್ನಡ ಭವನದ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಮ್ಮ ರಾಜ್ಯದ ಕಲಾವಿದರಿಗೆ ಹೊರ ರಾಜ್ಯದ ಕಲೆ ಹಾಗೂ ಕಲಾವಿದರು ಪರಿಚಯವಾಗಬೇಕು.ಹೊರರಾಜ್ಯದವರಿಗೆ ನಮ್ಮ ರಾಜ್ಯದ ಕಲೆ ಮತ್ತು ಕಲಾವಿದರು ಪರಿಚಯವಾಗಬೇಕು ಅಲ್ಲದೇ ಉತ್ತರ ಕರ್ನಾಟಕದಲ್ಲೂ ಸಹ ಕಲೆಯ ಮಹತ್ವ ಬಿಂಬಿಸಬೇಕು ಎನ್ನುವ ಉದ್ದೇಶದಿಂದ ಈ ರಾಷ್ಟ್ರೀಯ ಸಂಗೀತನೃತ್ಯಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಸಚಿವರು ಹಾಗೂ ಕಲಬುರಗಿ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಉದ್ಘಾಟಿಸಲಿದ್ದು, ಈ ಮಹೋತ್ಸವದಲ್ಲಿ ಹಿಂದೂಸ್ತಾನಿ ಸಂಗೀತ, ಭರತನಾಟ್ಯ,ಕರ್ನಾಟಕಸಂಗೀತ, ಕಥಕ್,ಸಿತಾರ್,ಕೂಚುಪುಡಿ, ವಚನ ಸಂಗೀತ ಹಾಗೂ ನೃತ್ಯ ರೂಪಕ ಸೇರಿದಂತೆ ಮುಂತಾದ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಸಾಧಕ-ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿದೆ.

ಇದೇ ಸಂದರ್ಭದಲ್ಲಿ ಸಂಗೀತ, ನೃತ್ಯ ಕಲೆಯ ಬಗ್ಗೆ ಅಭಿರುಚಿ ಮೂಡಿಸಲು ಫೆಬ್ರವರಿ 28, ಮಾರ್ಚ್ 01 ಮತ್ತು 2 ರಂದು ಮೂರು ದಿನಗಳ ಭರತನಾಟ್ಯ, ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ ಹಾಗೂ ಗಮಕ ಕಲಾ ತರಬೇತಿಯನ್ನು ಹಾಗೂ ತರಬೇತಿ ಶಿಬಿರವನ್ನು ಮಾರ್ಚ್ 3 ರಂದು ಮೈಸೂರಿನ ಕಲಾಮಂದಿರದಲ್ಲಿ ಉಪನ್ಯಾಸ ಶಿಬಿರಾರ್ಥಿಗಳಿಂದ ಪ್ರದರ್ಶನ ಹಾಗೂ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ತರಬೇತಿಯು ಉಚಿತವಾಗಿದ್ದು, ಆಸಕ್ತ ಕಲಾವಿದರುಗಳು ಇ-ಮೇಲ್ karnatakasangeeta@gmail.com <mailto:karnatakasangeeta@gmail.com> ಮೂಲಕ ಫೆಬ್ರವರಿ 20 ರ ಒಳಗಾಗಿ ನೋಂದಾಯಿಸಿಕೊಂಡು ತರಬೇತಿಯ ಪ್ರಯೋಜನವನ್ನು ಪಡೆಯಬಹುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಎನ್.ನರೇಂದ್ರಬಾಬು ಉಪಸ್ಥಿತರಿದ್ದರು.

## ಬೆನಕನಹಳ್ಳಿ, ಶ್ರೀ ಮಠದಲ್ಲಿ ಇಂದಿನಿಂದ ದಾನಮ್ಮ ದೇವಿ ಪುರಾಣ



ಶ್ರೀ ಕೇದಾರಲಿಂಗ ದೇವರು

ಮಲ್ಲಮ್ಮ ನುಡಿ ವಾರ್ತೆ

ಸೇಡಂ: ಫೆ,15,ತಾಲೂಕಿನ ಬೆನಕನಹಳ್ಳಿ ಗ್ರಾಮದ ಶ್ರೀ ಸಿದ್ದಲಿಂಗೇಶ್ವರವೀರಕ್ತಮಠದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ದಿ. 16 ರಿಂದ ದಿ. 26 ರ ವರೆಗೆ ಗುಡ್ಡಾಪುರದ ಶ್ರೀ ದಾನಮ್ಮ ದೇವಿ ಪುರಾಣ ಕಾರ್ಯಕ್ರಮವನ್ನುಆಯೋಜನೆ ಮಾಡಲಾಗಿದೆ. ಶ್ರೀ ಮಠದ ಇವರ ಘನ ಸಾನಿಧ್ಯದಲ್ಲಿ ನೆರವೇರುವುದು ಹಾಗೂ ಗ್ರಾಮದ ಹಿರಿಯರು,ಯುವಕರು,ರೈತರ ನೇತೃತ್ವದಲ್ಲಿ ನಡೆಯಲಿದೆ ಎಂದು ಶ್ರೀ ಮಠದ ಭಕ್ತಾದಿಗಳು ತಿಳಿಸಿದ್ದು ಹನ್ನೊಂದು ದಿನಗಳ ವರೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಹಾಗೂ ರಾಜಕೀಯ ಮುಖಂಡರು ಈ ಧಾರ್ಮಿಕ ಕಾರ್ಯಕ್ರಮಕ್ಕೆ ಬ್ಯಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

## ರನ್ನವೈಭವ-ಮುಧೋಳದಲ್ಲಿ ವಿವಿಧ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ಜಿಲ್ಲೆಯ ಮುಧೋಳದಲ್ಲಿ ಫೆ.22 ರಿಂದ 24ರವರೆಗೆ ನಡೆಯಲಿರುವ ರನ್ನವೈಭವದ ಹಿನ್ನಲೆಯಲ್ಲಿ ರನ್ನಬೆಳಗಲಿ ಹಾಗೂ ಮುಧೋಳದ ಕವಿ ಚಕ್ರವರ್ತಿ ರನ್ನ ತಾಲ್ಲೂಕು ಕ್ರೀಡಾಂಗಣದಲ್ಲಿ ವಿವಿಧ ಕ್ರೀಡೆಗಳನ್ನುಹಮ್ಮಿಕೊಳ್ಳಲಾಗಿದೆ.

ಫೆ. 22 ರಂದು ಸಂಜೆ 4ಕ್ಕೆ ಕವಿ ಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಕ್ರೀಡಾಕೂಟ-ಕ್ಕೆ ಚಾಲನೆ ದೊರೆಯಲಿದ್ದು, ಸಂಜೆ 6.30ಕ್ಕೆ ಮಲ್ಲಕಂಬ ಪ್ರದರ್ಶನ ಜರುಗಲಿದೆ.

23 ರಂದು ಬೆಳಿಗ್ಗೆ 6.30ಕ್ಕೆ ಮುಧೋಳದ ಸಂಗೊಳ್ಳಿರಾಯಣ್ಣ ಸರ್ಕಲ್ದಿಂದ ಕ್ರೀಡಾಂಗಣದವರೆಗೆ ಮ್ಯಾರಾಥಾನ್ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನ 12ಕ್ಕೆ ತಾಲ್ಲೂಕು ಕ್ರೀಡಾಂಗಣದಲ್ಲಿ ಸಂಗ್ರಾಣಿಕಲ್ಲು, ಗುಂಡು, ಚೀಲ ಎತ್ತುವುದು ಹಾಗೂ ಗುಂಡು ಕಲ್ಲು ಎತ್ತುವ ಕ್ರೀಡೆಗಳು ನಡೆಯಲಿವೆ.

ಫೆ.23 ಮತ್ತು 24 ರಂದು ರನ್ನ ಕ್ರೀಡಾಂಗಣದಲ್ಲಿ ಆಯ್ದ ಅಂತರರಾಜ್ಯ ಪುರುಷ ಹಾಗೂ ಮಹಿಳಾ ಕಬಡ್ಡಿ ಪಂದ್ಯಾವಳಿಗಳು ನಡೆಯಲಿವೆ. ಎಲ್ಲ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಆಕರ್ಷಕ ನಗದು ಬಹುಮಾನ ಹಾಗೂ ಟ್ರೋಫಿನೀಡಲಾಗುತ್ತದೆ.ಮಾಹಿತಿಗೆ ಮೊಬೈಲನಂ.9739722700ಗೆ ಸಂಪರ್ಕಿಸಬಹುದಾಗಿದೆ.

## ಆದರ್ಶ ವಿದ್ಯಾಲಯ-6ನೇ ತರಗತಿ ಪ್ರವೇಶಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ತಾಲ್ಲೂಕಿನ ಆದರ್ಶ ವಿದ್ಯಾಲಯ (ಆರ್.ಎಂ.ಎಸ್.ಎ.) ನವನಗರ (ವಸತಿರಹಿತ,ಆಂಗ್ಲಮಾಧ್ಯಮ) ಶಾಲೆಯಲ್ಲಿ 2025-26 ನೇ ಸಾಲಿನ 6ನೇ ತರಗತಿಯ ವಿದ್ಯಾರ್ಥಿಗಳ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ.

2024-25 ಸಾಲಿನಲ್ಲಿ ಐದನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು www.schooleducation.kar.nic.in ಅಥವಾ www.vidyavahini karnataka.gov.in ಮೂಲಕ ಅರ್ಜಿಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಫೆ.28 ಕೊನೆ ದಿನವಾಗಿದ್ದು,ಹೆಚ್ಚಿನ ಮಾಹಿತಿಗೆ ವೆಬ್ಸೈಟ್ ನೋಡಬಹುದಾಗಿದೆ ಎಂದು ಕ್ಷೇತ್ರಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸುರೇಖಾ ಕೊರ್ಲಹಳ್ಳಿಗೆ ಪಿಎಚ್‌ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ನಗರದ ವಾಸವಿ ಚಿತ್ರಮಂದಿರದ ಮಾಲಿಕ ಸಂಜೀವ ಜೋಶಿ ಅವರ ಧರ್ಮಪತ್ನಿ ಸು-ರೇಖಾ ಕೊರ್ಲಹಳ್ಳಿ(ಸ್ನೇಹಾ ಜೋಶಿ)ಅವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ದೊರಕಿದೆ.

ಸುರೇಖಾ ಅವರು ಬಾಗಲಕೋಟೆ ಜಿಲ್ಲೆಯ 'ಶಾಸನೋಕ್ತಸ್ಥಳನಾಮಗಳು' ಎಂಬ ವಿಷಯದ ಮೇಲೆ ಪ್ರಬಂಧ ಮಂಡಿಸಿ ಪಿಎಚ್‌ಡಿ ಪಡೆದಿದ್ದಾರೆ.ಇವರಿಗೆ ವಾಸುದೇವ ಬಡಿಗೇರ ಮಾರ್ಗದರ್ಶನ ನೀಡಿದ್ದರು.

## ರಕ್ತದಾನ ಮಾಡಲು ಯುವಕರಲ್ಲಿ ಜಾಗೃತಿ ಮೂಡಿಸಬೇಕು:ಡಾ.ಕೇಶವ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ರಕ್ತದಾನ ಶ್ರೇಷ್ಠದಾನವಾಗಿದ್ದು, ಯುವಕರು ರಕ್ತದಾನ ಮಾಡಲು ಮುಂದಾಗಬೇಕು. ಇದಕ್ಕಾಗಿ ಅವರಲ್ಲಿ ಜಾಗೃತಿ ಮೂಡಿಸಬೇಕಿದೆ ಎಂದು ಹಾನಗಲ್ ಕುಮಾರೇಶ್ವರ ಆಸ್ಪತ್ರೆಯ ರಕ್ತ ಭಂಡಾರದ ಮೇಲುಸ್ತುವಾರಿ ಅಧಿಕಾರಿ ಡಾ.ಕೇಶವ ಕುಲಕರ್ಣಿ ಹೇಳಿದ್ದಾರೆ.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಶಾರದಾಂಬೆ ನರ್ಸಿಂಗ್ ವಿಜ್ಞಾನಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕದವತಿಯಿಂದ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ರಕ್ತದಾನ ಶಿಬಿರದ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಒಬ್ಬ ವ್ಯಕ್ತಿ ಒಂದು ಬಾರಿ ರಕ್ತದಾನ ಮಾಡುವುದರಿಂದ 4 ಜನರ ಪ್ರಾಣವನ್ನು ಉಳಿಸಬಹುದಾಗಿದ್ದು, ಯುವಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಮುಂದಾಗಬೇಕಿದೆ. ಇಂತಹ ಶಿಬಿರಗಳನ್ನು ಏರ್ಪಡಿಸುವ ಮೂಲಕ ರಕ್ತದಾನ ಮಹತ್ವ, ಅವಶ್ಯಕತೆ ಕುರಿತು ಜಾಗೃತಿ ಮೂಡಿಸಬೇಕಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಡಾ.ಪ್ರವೀಣ ಎಸ್.ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಬೇಕು. ಇದರಿಂದ ತಮಗೂ ಆರೋಗ್ಯ ಲಾಭ ಜೊತೆಗೆ ಅವಶ್ಯಕತೆಯುಳ್ಳ ರೋಗಿಗಳಿಗೂ ಸಹಕಾರಿಯಾಗುತ್ತದೆ ಎಂದರು.

ಎನ್.ಎಸ್.ಎಸ್.ಘಟಕದ ಮುಖ್ಯಸ್ಥ ಗುರುಸಿದ್ದಯ್ಯ ಹಿರೇಮಠ,ಮಹಾವಿದ್ಯಾಲಯದ ಉಪನ್ಯಾಸಕರು,ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ನಂತರ ನಡೆದ ರಕ್ತದಾನ ಶಿಬಿರದಲ್ಲಿ ಅನೇಕ ವಿದ್ಯಾರ್ಥಿಗಳು ರಕ್ತದಾನ ಮಾಡಿದರು.

## ಫೆ.19 ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತ್ಯೋತ್ಸವವನ್ನು ಫೆ.19 ರಂದು ಆಚರಿಸಲಾಗುವುದು ಎಂದು ಮಾರಾಠಾ ಹಿತಚಿಂತಕ ಸಂಘದ ಅಧ್ಯಕ್ಷ ಎಂ.ಆರ್.ಶಿಂಧೆ ತಿಳಿಸಿದ್ದಾರೆ.

ನಗರದ ಕಿಲ್ಲಾದಲ್ಲಿರುವ ಅಂಬಾಭವಾನಿ ದೇವಾಲಯದಲ್ಲಿ ಶುಕ್ರವಾರ ನಡೆದ ಸಮಾಜದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ಬಾರಿಯು ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದ್ದು, ಯುವ ಬ್ರಿಗೇಡ್ ಮಾರ್ಗದರ್ಶಕ ಚಕ್ರವರ್ತಿ ಸೂಲಿಬೆಲೆ ಪ್ರಮುಖ ಭಾಷಣಕಾರರಾಗಿ ಆಗಮಿಸಲಿದ್ದಾರೆ ಎಂದರು.

ಹೊಳೆ ಆಂಜನೇಯ ದೇವಾಲಯದ ಬಳಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು,ಅಂದು ಬೆಳಿಗ್ಗೆ 8 ಗಂಟೆಗೆ ಶಾಸಕ ಎಚ್.ವೈ.ಮೇಟಿ ಅವರಿಂದ ಭಗವಾ ಧ್ವಜಾರೋಹಣ ನೆರವೇರಲಿದೆ. ನಂತರ ಶಿವಾಜಿ ಮೂರ್ತಿಗೆ ವಿಶೇಷ ಪೂಜೆ ಪುನಸ್ಕಾರ ಸಲ್ಲಿಸಲಾಗುವುದು. ಸಂಜೆ 4ಗಂಟೆಗೆ ಕುಂಭಮೇಳದೊಂದಿಗೆ ಛತ್ರಪತಿ ಶಿವಾಜಿ ಮಹಾರಾಜರ ಭವ್ಯ ಮೂರ್ತಿಯ ಶೋಭಾ ಯಾತ್ರೆ ನಡೆಸಲಾಗುವುದು ಎಂದು ಶಿಂಧೆ ತಿಳಿಸಿದರು.

ಸಮಾರಂಭದ ಸಾನಿಧ್ಯವನ್ನು ಗುಳೇದಗುಡ್ಡ ಮರಡಿಮಠದ ಕಾಡಸಿದ್ದೇಶ್ವರ ಸ್ವಾಮೀಜಿ ವಹಿಸಲಿದ್ದಾರೆ. ಸಂಸದ ಪಿ.ಸಿ.ಗದ್ದಿಗೌಡರ,ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಮಾಜಿ ಶಾಸಕ ವೀರಣ್ಣ ಚರಂತಿಮಠ,ಗಣ್ಯರು ಭಾಗವಹಿಸಲಿದ್ದಾರೆ.

ಸಮಾಜದ ಮುಖಂಡರಾದ ಗುಂಡುರಾವ್ ಶಿಂಧೆ,ರಾಜು ವಾಘ,ನಿವೃತ್ತಪಿಎಸ್ಐಜಾಧವ, ತಾಣಾಜಿ ಜಮಖಂಡಿ,ಭೀಮಸಿ ಮೋರೆ,ಮಾರುತಿ ನಲವಡೆ, ರಾಜು ಶಿಂಧೆ, ದಯಾನಂದ ಶಿಂಧೆ ಉಪಸ್ಥಿತರಿದ್ದರು.

## ಸೇವಾಲಾಲರ ವಿಚಾರಧಾರೆಗಳು ಸಮಾಜಕ್ಕೆ ಬೆಳಕಾಗಿವೆ :ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15-ಬಂಜಾರಾ ಸಮಾಜದ ಆರಾಧ್ಯ ದೈವ, ಶಿವನ ಆಶೀರ್ವಾದಿಂದಹುಟ್ಟಿಬಂದ ಸಂತ ಸೇವಾಲಾಲರು ತಪಸ್ಸಿನಿಂದ ಶಕ್ತಿಯನ್ನು ಪಡೆದುಪವಾಡಪುರುಷರಾಗಿ ಸಮುದಾಯಕ್ಕೆ ಜ್ಞಾನದ ಮಾರ್ಗ ತೋರಿದವರು ಎಂದು ಶಾಸಕ ಎಚ್.ವಾಯ್.ಮೇಟಿಹೇಳಿದರು.

ನವನಗರದಕಲಾಭವನದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಸಂತ ಸೇವಾಲಾಲ್ ಮಹಾರಾಜರ ಜಯಂತಿಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು,ಸಂತಸೇವಾಲಾಲ್ ಮಹಾರಾಜರು ಸಮಾಜ ಸುಧಾರಣೆಗೆಹತ್ತುಹಲವಾರು ಪವಾಡಗಳನ್ನುಮಾಡಿದ್ದು, ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಎಲ್ಲರೂ ನಡೆಯಬೇಕಿದೆ ಎಂದರು.

ಮಹಾನ್ ಸಂತ ಸೇವಾಲಾಲರ ವಿಚಾರ ಧಾರೆಗಳು ಸಮಾಜಕ್ಕೆ ಬೆಳಕಾಗಿದ್ದು,ಅವುಗಳನ್ನು ಜೀವನದಲ್ಲಿಅಳವಡಿಸಿಕೊಂಡು ಸಾಗಬೇಕಿದೆ ಎಂದ ಶಾಸಕ ಮೇಟಿ, ಬಂಜಾರಾ ಸಮಾಜ ಅತ್ಯಂತ ನಂಬಿಕಸ್ಥರಾಗಿದ್ದು,ಸದಾ ಕಾಯಕಜೀವಿಗಳಾಗಿದ್ದಾರೆ ಎಂದು ಹೇಳಿದರು.

**ಭಾವಚಿತ್ರದ ಮೆರವಣಿಗೆ**

ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಂತ ಸೇವಾಲಾಲರ ಭಾವಚಿತ್ರಕ್ಕೆ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು. ಕುಮಾರ ಮಹಾರಾಜರು, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಪ್ರಮುಖರಾದ ಪ್ರಕಾಶ ತಪಶೆಟ್ಟಿ, ಹೂವಪ್ಪ ರಾಠೋಡ, ರಕ್ಷಿತಾ ಈಟಿ, ನಾಗರಾಜ ಹದ್ಲಿ, ಚಂದ್ರಶೇಖರ ರಾಠೋಡ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ಸೇರಿದಂತೆ ಸಮುದಾಯ ಮುಖಂಡರು ಪಾಲ್ಗೊಂಡಿದ್ದರು. ಮೆರವಣಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ನವನಗರದ ಕಲಾಭವನಕ್ಕೆ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾ ತಂಡಗಳು ಹಾಗೂ ಲಂಬಾಣಿ ಹಾಡು, ಕುಣಿತ ತಂಡಗಳು ಭಾಗವಹಿಸಿದ್ದವು.

ಉಪನ್ಯಾಸ ನೀಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಚಂದ್ರಶೇಖರ ಕಾಳನ್ನವರ, ಸೇವಾಲಾಲ ಒಬ್ಬ ಸನ್ಯಾಸಿ, ಪವಾಡ ಪುರುಷ ಅಷ್ಟೇ ಆಗಿರದೇ ಶ್ರೇಷ್ಠ ತತ್ವಜ್ಞಾನಿ, ಸೇನಾನಿ, ಸಾಂಸ್ಕೃತಿಕ ನಾಯಕ, ಕಾಲಜ್ಞಾನಿ, ನಾಟಿವೈದ್ಯ ಹಾಗೂ ಚಾರಿತ್ರಿಕ ಪುರುಷರಾಗಿದ್ದರು. ಮಾನವ ಕುಲದ ಉದ್ಧಾರಕ್ಕೆ ತತ್ವ, ಸಿದ್ಧಾಂತ ಹಾಗೂ ಚಿಂತನೆಗಳನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದರು.

ಸಮಾಜವನ್ನು ಶೈಕ್ಷಣಿಕವಾಗಿ,ಸಾಂಸ್ಕೃತಿಕವಾಗಿ ಬೆಳೆಸಿಕೊಂಡು ಬಂದ ಸೇವಾಲಾಲರ ಜಯಂತಿ ಆಚರಿಸಿದರಷ್ಟೇ ಸಾಲದು, ಅವರ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಬಂಜಾರಾ ಸಮಾಜದ ಕುಮಾರ ಮಹಾರಾಜರು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಜಿಲ್ಲಾಪಂಚಾಯತ ಅಧಿಕಾರಿ ಎಸ್.ಎಂ.ಕಾಂಬಳೆ,ಗ್ಯಾರಂಟಿ ಯೊಜನೆ ಅನುಷ್ಠಾನ ಪ್ರಾಧಿಕಾರದ ತಾಲೂಕಾ ಅಧ್ಯಕ್ಷ ಎಸ್.ಎನ್.ರಾಂಪೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಸಮುದಾಯದ ಮುಖಂಡರಾದ ರಂಗನಗೌಡ ಗೌಡರ,ಬಸಪ್ಪ ನಾಯಕ,ಎಂ.ಬಿ.ನಾಯಕ, ಬಲರಾಮ ಪವಾರ,ರಾಜು ರಾಠೋಡ, ಚಿದಾನಂದ ನಾಯಕ, ಮೋತಿಲಾಲ್ ನಾಯಕ, ತುಕಾರಾಮ ನಾಯಕ,ರಮೇಶ ಚವ್ಹಾಣ ಸೇರಿದಂತೆ ಇತರರು ಉಪಸ್ಥಿತರಿದ್ದರು.ಶಂಕರಲಿಂಗ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು.

# ಸಂತ ಸೇವಾಲಾಲ್ ಮಹಾರಾಜರ 286 ನೇ ಜಯಂತಿ ಆದ್ದೋರಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಮಾರನಾಳ ತಾಂಡ : ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಮಾರನಾಳ ತಾಂಡದಲ್ಲಿ ಇಂದು ಸಂತ ಸೇವಾಲಾಲ್ ಮಹಾರಾಜರು ಜಯಂತಿಯನ್ನು ಆಚರಿಸಿದರು.

ಸಂತ ಸೇವಾಲಾಲ್ ಮಹಾರಾಜರು ದಾವಣಗೆರೆ ಜಿಲ್ಲೆಯ ಸೂರಗೊಂಡನಕೊಪ್ಪದಲ್ಲಿ 1739 ಫೆಬ್ರವರಿ 15 ರಂದು ಧರ್ಮಣಿಬಾಯಿ ಭೀಮಾನಾಯಕ್ ಇವರ ಉದರದಲ್ಲಿ ಜನಿಸಿದರು. ಮಹಾರಾಜರು ಬಾಲ್ಯದಲ್ಲಿ ತಮ್ಮ ದನಗಳನ್ನು ಕಾಯುತ್ತಿದ್ದ ಸಂದರ್ಭದಲ್ಲಿ ನದಿಯ ದಡದಲ್ಲಿ ಇದ್ದ ಮಣ್ಣಿನಿಂದ ಸಿಹಿ ಪಾಯಸ ಮಾಡಿ ದೇವರಿಗೆ ನೈವೇದ್ಯ ಮಾಡಿ ಎಲ್ಲಾ ಸ್ನೇಹಿತರಿಗೆ ಉಣಬಡಿಸಿದರು.

ಮಹಾರಾಷ್ಟ್ರದ ಸಮೂದ್ರದ ಸ್ಮಿತ್ ಬಾವೂಚ್ ಸ್ಥಳದಲ್ಲಿ ಪೋರ್ಚುಗೀಸರ ವಜ್ರ,ಮುತ್ತು,ವೈಡೂರ್ಯ ಸಂಪತ್ತುಗಳಿಂದ ತುಂಬಿದ ಹಡಗವು ಸಮುದ್ರದ ಸುಳಿಯಲ್ಲಿ ಮುಳುಗುತ್ತಿದ್ದುದನ್ನು ರಕ್ಷಣೆ ಮಾಡಿದರು. ಆದ್ದರಿಂದ ಸೇವಾಲಾಲ್‌ರನ್ನು ಮೋತಿವಾಳೊ ಎಂದು ಕರೆಯುತ್ತಾರೆ.

ನರನಿಗೆ ನಾರಿ ಮಾಡಿ ಏಳು ಮಕ್ಕಳು ಹುಟ್ಟುತ್ತವೆ ಎಂದು ಹೇಳಿ ಕಳಿಸಿದರು ಅದೆ ರೀತಿಯಾಗಿ ಏಳು ಮಕ್ಕಳಾದರು. ಈ ರೀತಿಯಾಗಿ ಅನೇಕ ಪವಾಡಗಳನ್ನು ಮಾಡುತ್ತಾ ಕೊನೆಗೆ ಮಹಾರಾಷ್ಟ ದ ಪೋಹರಾಗಡ ಎಂಬ ಸ್ಥಳದಲ್ಲಿ ಕ್ರಿ, ಶ 1806 ಡಿಸೆಂಬರ್ 4 ರಂದು ದೈವಾಧೀನರಾದರು. ಸರ್ವ ಸಮಾಜದ ಹಾಗೂ ಹುಟ್ಟಿದ ಸಕಲ ಜೀವರಾಶಿಗಳ, ಮತ್ತು ಪ್ರಕೃತಿಯ ಲೇಸನ್ನು ಬಯಸಿದರು ಎಂದು ಹೇಳಿದರು.

. ಈ ಸಂದರ್ಭದಲ್ಲಿ ಶೇಖರ್ ನಾಯಕ್ , ಬಾಲಚಂದ್ರ ತೆ-ಊಟದ, ತಿರುಪತಿ ಚವ್ಹಾಣ, ಲೋಕೇಶ್ ರಾಠೋಡ್, ಭೀಮು ನಾಯಕ್, ರೇವಣಪ್ಪ, ಮೋನೇಶ್, ದೇವಿಂದ್ರ ರಾಠೋಡ, ಶಂಕ್ರಪ್ಪ, ವೆಂಕಟೇಶ್, ಮಲ್ಲಪ್ಪ,ಮಂಜು ರಾಠೋಡ, ಮೊತಿಲಾಲ್, ಚಂದ್ರಕಾಂತ, ಸಮಾಜದ ಹಿರಿಯ ಮುಖಂಡರು ಭಾಗವಹಿಸಿದ್ದರು.

# ಮೆಟ್ರಿಕ್ ನಂತರ ಕೋರ್ಸ್ಗಳ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆಬ್ರವರಿ 15, : 2024-25ನೇ ಸಾಲಿನ ಮೆಟ್ರಿಕ ನಂತರ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ "ಶುಲ್ಕ ಮರುಪಾವತಿ"(ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ ವೃತ್ತಿಪರ ಸ್ನಾತಕೋತ್ತರ ಪದವಿ ಮತ್ತು ನರ್ಸಿಂಗ್ ಕೋರ್ಸುಗಳಿಗೆ ಮಾತ್ರ) ವಿದ್ಯಾರ್ಥಿವೇತನ ಸೌಲಭ್ಯಕ್ಕೆ ವಿಸ್ತರಿಸಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ. ಎಂ.ನಾರಾಯಣಕರ್ ಅವರು ತಿಳಿಸಿದ್ದಾರೆ.

ಮೆಟ್ರಿಕ ನಂತರ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ "ಶುಲ್ಕ ಮರುಪಾವತಿ"(ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ ವೃತ್ತಿಪರ ಸ್ನಾತಕೋತ್ತರ ಪದವಿ ಮತ್ತು ನರ್ಸಿಂಗ್ ಕೋರ್ಸುಗಳಿಗೆ ಮಾತ್ರ) ವಿದ್ಯಾರ್ಥಿವೇತನ, ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 15.02.2025 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿಯನ್ನು ಮಾಡಿಕೊಂಡಿರುವುರಿಂದ ಅರ್ಜಿ ಸಲ್ಲಿಸಲು 2025ರ ಮಾರ್ಚ್ 10ರ ವರೆಗೆ ವಿಸ್ತರಿಸಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ssp.postmatric.karnataka.gov.in ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳು ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ ಇಲಾಖಾ ಸಹಾಯವಾಣಿ ದೂರವಾಣಿ ಸಂ-ಖ್ಯೆ 8050770005 ಇಮೇಲ್ bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾವಾಣಿ ಇಮೇಲ್ postmatrichelp@karnataka.gov.in ದೂ.ಸಂಖ್ಯೆ 1902ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಣ್ಣೂರ: ಕಲಿಕಾ ಹಬ್ಬ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.15-ತಾಲ್ಲೂಕಿನ ಸಣ್ಣೂರ ಗ್ರಾಮದ ಸಮೂಹ ಸಂಪನ್ಮೂಲ ಕೇಂದ್ರದಲ್ಲಿ ಕ್ಲಸ್ಟರ್ ಮಟ್ಟದ ಪಿಎಲ್‌ಎನ್ ಆಧಾರಿತ ಕಲಿಕಾ ಹಬ್ಬ ಕಾರ್ಯಕ್ರಮ ನಡೆಯಿತು. ಈಶ್ವರಗೌಡ ಪಾಟೀಲ, ಶಿಕ್ಷಣ ಸಂಯೋಜಕ ಶರಣಬಸಪ್ಪ ದಣ್ಣೂರ ಕಾರ್ಯಕ್ರಮ ಉದ್ಘಾಟಿಸಿದರು. ಸಿಆರ್‌ಪಿ ಶ್ರೀಕಾಂತ, ಗೀತಾ ಭರಣಿ, ನಂದಿನಿ ಸನ್ನಾಬಾಳ, ದೇವಿಂದ್ರಪ್ಪ ಗಣಮುಖಿ, ಎಸ್‌ಡಿಎಂಸಿ ಅಧ್ಯಕ್ಷ ಗೌತಮ, ಶರಣಬಸಪ್ಪ ಪೂಜಾರಿ, ಶರಣಬಸಪ್ಪ ಚಿಂಚೂರ, ಗೋಪಾಲ ಜಾಧವ್, ಮುಖ್ಯಗುರು ಜಯಶ್ರೀ, ಅಂಬಿಕಾ, ಕವಿತಾ, ಸುರೇಖಾ ಒಂಟಿ, ಸಂಪನ್ಮೂಲ ವ್ಯಕ್ತಿಗಳಾದ ಅಶೋಕ, ಭೀಮರಾಯ, ಮಹಾನಂದಾ ಉಪಸ್ಥಿತರಿದ್ದರು.

# ಮಾರ್ಚ್ 10 ಮತ್ತು 11ರಂದು ಕಮ್ಮಟ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 15-ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ಹಾಗೂ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್ ಕೃಷ್ಣಾಪುರದೊಡ್ಡಿ ಇವರ ಸಹಯೋಗದಲ್ಲಿ ಸಂಶೋಧನೆ ಮಾಡುತ್ತಿರುವ ಯುವ ಸಂಶೋಧನಾರ್ಥಿಗಳಿಗೆ 2025ರ ಮಾರ್ಚ್ 10 ಮತ್ತು 11 ರಂದು ಮುದ್ದುಶ್ರೀ ದಿಬ್ಬ, ಕೆರೆಮೇಗಳದೊಡ್ಡಿ, ರಾಮನಗರ ಜಿಲ್ಲೆಯಲ್ಲಿ ಫೆ.24ರಂದು ಅಧ್ಯಯನ ಕಮ್ಮಟವನ್ನು ನಡೆಸಲು ಉದ್ದೇಶಿಸಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20ರಿಂದ 40ವರ್ಷ ವಯಸ್ಸುಳ್ಳ ರಾಯಚೂರು ಜಿಲ್ಲೆಯ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ವೆಬೆಸೈಟ್ ವಿಳಾಸ: https://kanakadasaresearch-center.karnataka.gov.in ಪಡೆದುಕೊಳ್ಳಬಹುದಾಗಿದೆ ಎಂದು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಧ್ಯಮ ಅಕಾಡೆಮಿಯಿಂದ ಪ್ರಥಮ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನ ಕೊನೆಯ ದಿನಾಂಕ ಫೆಬ್ರವರಿ 20 ರವರೆಗೆ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಫೆಬ್ರವರಿ 15- ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ಏರ್ಪಡಿಸಿದ್ದ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನದ ಕೊನೆಯ ದಿನಾಂಕವನ್ನು ಫೆಬ್ರವರಿ 20 ರವರೆಗೆ ವಿಸ್ತರಿಸಲಾಗಿದೆ.

ಈ ಮೊದಲು ಛಾಯಾಚಿತ್ರಗಳನ್ನು ಕಳುಹಿಸಲು ಫೆಬ್ರವರಿ 15 ಕೊನೆ ದಿನಾಂಕವಾಗಿತ್ತು. ಉಳಿದಂತೆ ಸ್ಪರ್ಧೆಯ ನಿಯಮ ಸೇರಿದಂತೆ ಯಾವುದರಲ್ಲೂ ಬದಲಾವಣೆ ಮಾಡಿಲ್ಲ.

ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000/-ರೂ., 25,000/- ರೂ. ಹಾಗೂ 15,000/- ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ ಅತ್ಯುತ್ತಮ ಛಾಯಾಚಿತ್ರಗಳನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.

**ಸ್ಪರ್ಧೆಯ ಷರತ್ತುಗಳು:**

* ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ :01-01-.2024 ರಿಂದ 31-01-2025 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರಗ್ರಾಹಕರು ತಾವೇ ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು.

*ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ.

* ಪ್ರತಿ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಕರ್ತರಿಗಾಗಿ ನೀಡುವ Accreditation Card ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

* ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು. * ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್ ಗಳನ್ನು JPEG format ನಲ್ಲಿ ಮಾತ್ರ ಸಲ್ಲಿಸಬೇಕು.

*ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20"ಥ 30" ಅಳತೆಯಲ್ಲಿ ಮುದ್ರಣ ಮಾಡಿಸಬೇಕಾಗಿರುವುದರಿಂದ ನೀವು ಕಳಿಸುವ ಇಮೇಜ್‌ಗಳು 20"x 30" ಅಳತೆಯ,300 DPI ನಲ್ಲಿದ್ದು ಕನಿಷ್ಠ 5ಒಃ ಗಾತ್ರದಲ್ಲಿರಬೇಕು.

*ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ.

*ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿ ಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು.

*ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್ಸೈಟ್‌ನಲ್ಲಿ ಇರುವ ನಿಗದಿತ ಅರ್ಜಿಯನ್ನು Download ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್ಗಳನ್ನು photo.karnatakamediaacademy@gmail.com ಇ-ಮೇಲ್ ವಿಳಾಸಕ್ಕೆ ದಿನಾಂಕ: 20-02-2025 ರಂದು ಸಂಜೆ 5:00ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

*ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಮೂವರು ತೀರ್ಪುಗಾರರಿದ್ದು ಅವರು ತೆಗೆದುಕೊಂಡ ತೀರ್ಮಾನವೇ ಅಂತಿಮವಾಗಿರುತ್ತದೆ.

*ಪ್ರಶಸ್ತಿಗೆ ಆಯ್ಕೆಯಾದ ಮೂರು ಛಾಯಾಚಿತ್ರಗಳಿಗೆ ಪ್ರಥಮ ಬಹುಮಾನ: ರೂ.35,000/ ದ್ವಿತೀಯ ಬಹುಮಾನ: ರೂ. 25000, ಹಾಗೂ ತೃತೀಯ ಬಹುಮಾನ: ರೂ.15000 ಗಳನ್ನು ನೀಡಲಾಗುವುದು.

* ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448227768 ಹಾಗೂ 9449245980 ನ್ನು ಸಂಪರ್ಕಿಸಬಹುದು.

# ಕಲಚೇತನರ ಸೌಲಭ್ಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ

## 'ವಿಕಲಚೇತನರಿಗಾಗಿ ಸರ್ಕಾರ ಜಾರಿಗೊಳಿಸಿದ ಯೋಜನೆಗಳಡಿ ಹಾಗೂ ಇಲಾಖಾವಾರು ಶೇ.5ರಷ್ಟು ಅನುದಾನ ಸದ್ಬಳಕೆ ಮಾಡಿ, ಸೌಲಭ್ಯ ಕಲ್ಪಿಸಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ;ಫೆ:15-ಕಡುಬಡವರು ಹಾಗೂ ತೀರ ಕಷ್ಟದಲ್ಲಿರುವಂತಹ ವಿಕಲಚೇತನರಿಗೆ ಸರ್ಕಾರ ಜಾರಿಗೊಳಿಸಿದ ಯೋಜನೆಗಳಡಿ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಅವರಿಗೆ ಮುಖ್ಯ ವಾಹಿನಿಗೆ ತರಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ವಿಕಲಚೇತನರ ಹಕ್ಕುಗಳ ಅಧಿನಿಯಮದಡಿಯ ರಾಜ್ಯ ಆಯುಕ್ತರಾದ ಶ್ರೀ ದಾಸ್ ಸೂರ್ಯವಂಶಿ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಸರ್ಕಾರದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ವಿಕಲಚೇತನರಿಗಾಗಿ ಮೀಸಲಾದ ಶೇ. ಐದರಷ್ಟು ಅನುದಾನ ಬಳಕೆ, ಮತ್ತು ವಿವಿಧ ಯೋಜನೆಗಳಡಿ ಸಾಧಿಸಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಸೌಲಭ್ಯಗಳ ಮೂಲಕ ವಿಕಲಚೇತನ ಓರ್ವ ವ್ಯಕ್ತಿಗೂ ನೆರವಾದರೂ ಜೀವನ ಸಾರ್ಥಕವಾಗಲಿದೆ. ಈ ದಿಸೆಯಲ್ಲಿ ಸರ್ಕಾರವು ಶಿಕ್ಷಣ, ಉದ್ಯೋಗ ಹಾಗೂ ಅನುದಾನದಲ್ಲಿ ನ್ಯಾಯಬದ್ಧವಾಗಿ ಮೀಸಲಿಟ್ಟ ಅನುದಾನದಲ್ಲಿ ವಿಕಲಚೇತನರಿಗೆ ಅವಶ್ಯಕ ಸೌಲಭ್ಯಗಳನ್ನು ಕಡ್ಡಾಯವಾಗಿ ತಲುಪಿಸುವಂತೆ ಅವರು ಸೂಚನೆ ನೀಡಿದರು.

ವಿಕಲಚೇತನರ ಜೀವನದಲ್ಲಿ ಆರೋಗ್ಯ ಮತ್ತು ಶಿಕ್ಷಣ ಪ್ರಮುಖ ಪಾತ್ರ ವಹಿಸಲಿದೆ. ಈ ಹಿನ್ನೆಲೆಯಲ್ಲಿ ಪ್ರತಿ ಶಾಲಾ ವ್ಯಾಪ್ತಿಯಲ್ಲಿ ವಿಕಲಚೇತನ ವಿದ್ಯಾರ್ಥಿಗಳಿಗೆ ಬ್ರೈಲ್ ಲಿಪಿ, ಕಿವುಡರಿಗೆ ಸೈನ್ ಭಾಷೆ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗೆ ವಿಶೇಷ ಶಿಬಿರ, ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಈ ಕುರಿತು ಕ್ರಿಯಾಯೋಜನೆ ರೂಪಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಸಲ್ಲಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳಿಗೆ ಬ್ರೈಲ್ ಲಿಪಿ, ಭಾಷೆ ಕಲಿಸಿದಲ್ಲಿ ವಿಶ್ವದ ಯಾವ ಭಾಗದಲ್ಲಾದರೂ ಅವರು ಜೀವಿಸಬಹುದು. ಈ ಹಿನ್ನೆಲೆಯಲ್ಲಿ ಇದಕ್ಕೆ ವಿಶೇಷ ಗಮನ ನೀಡಬೇಕು. ಆರೋಗ್ಯ ಇಲಾಖೆ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ವಿಕಲಚೇತನರನ್ನು ಶಸ್ತ್ರಚಿಕಿತ್ಸೆ ಮೂಲಕ ಶೇಕಡಾ 80 ರಷ್ಟು ಸರಿಪಡಿಸಲು ಅವಕಾಶವಿರುವುದರಿಂದ, ಇದಕ್ಕೆ ವಿಶೇಷ ಗಮನ ನೀಡಬೇಕು. ಅವಶ್ಯಕ ಸಂದರ್ಭದಲ್ಲಿ ಸರ್ವಶಿಕ್ಷಣ ಅಭಿಯಾನದ ಅನುದಾನ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಉದ್ಯೋಗ ಮತ್ತು ವಿನಿಮಯ ಕಚೇರಿ ಮೂಲಕ ಸೂಕ್ತ ಉದ್ಯೋಗಾವಕಾಶ ಕಲ್ಪಿಸಬೇಕು. ಕೃಷಿ, ಮೀನುಗಾರಿಕೆ, ಪಶು ಸಂಗೋಪನೆ, ವಿವಿಧ ನಿಗಮಗಳ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿಕಲಚೇತನರಿಗೆ ದೊರೆಯಬಹುದಾದ ಸೌಲಭ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸಬೇಕು. ಶೇ5 ರಷ್ಟು ಅನುದಾನ ತಪ್ಪದೇ ಬಳಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಜ್ಯ ಸರ್ಕಾರ ಶಿಕ್ಷಣ, ಉದ್ಯೋಗ ಹಾಗೂ ಇಲಾಖೆಯ ಅನುದಾನದಲ್ಲಿ ಶೇಕಡಾ ಐದರಷ್ಟು ಮೀಸಲು ಅವಕಾಶ ಕಲ್ಪಿಸಿದೆ. ವಿಕಲಚೇತನರಿಗಾಗಿ ರಾಜ್ಯ ಸರ್ಕಾರ ಕಲ್ಪಿಸಿದ ಸೌಲಭ್ಯಗಳು ದೇಶದ ಯಾವ ರಾಜ್ಯಗಳಲ್ಲಿಯೂ ಕಲ್ಪಿಸಿಲ್ಲ. ವಿಕಲಚೇತನರ ಆರೈಕೆದಾರರಿಗೆ ಪಿಂಚಣಿ ಸಹ ಒದಗಿಸುತ್ತಿದೆ. ನವೋದಯ, ಜವಾಹರ ಮಾದರಿ ವಸತಿ ಶಾಲೆಗಳಲ್ಲಿ ವಿಕಲಚೇತನರಿಗೆ ಶೇ. ಹತ್ತರಷ್ಟು ಮೀಸಲು ಹಾಗೂ ಕೇಂದ್ರ ಸರ್ಕಾರದಿಂದ ಉದ್ಯೋಗದಲ್ಲಿ ಶೇ4ರಷ್ಟು ಮೀಸಲು ಅವಕಾಶ ಕಲ್ಪಿಸಿದ್ದು, ಅಧಿಕಾರಿಗಳು ಅರ್ಹರಿಗೆ ಸೌಲಭ್ಯ ಕಲ್ಪಿಸಿ, ಅವರಿಗೆ ನೆರವಾಗಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಲೋಕೋಪಯೋಗಿ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳ ವ್ಯಾಪ್ತಿಯಲ್ಲಿ ವಿಕಲಚೇತನರಸ್ನೇಹಿ ಸೌಲಭ್ಯಗಳನ್ನು ವಿಶೇಷವಾಗಿ ಯಾರ್ಂಪ್, ಶೌಚಾಲಯ ಇನ್ನಿತರ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು. ವಿಕಲಚೇತನರು ಸೌಲಭ್ಯ ಪಡೆಯುವವರೆಗೆ ಕಾಯದೆ ಅವರ ಮನೆ ಬಾಗಿಲಿಗೆ ಸೌಲಭ್ಯ ಕಲ್ಪಿಸಬೇಕು. ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ತಕ್ಷಣ ಸೌಲಭ್ಯಗಳನ್ನು ಕಲ್ಪಿಸಲು ಅವರು ಸೂಚನೆ ನೀಡಿದರು.

ವಿಕಲಚೇತನರಿಗೆ ಸಕಾಲಕ್ಕೆ ಮಾಹೆವಾರು ಪಿಂಚಣಿ ಸೌಲಭ್ಯ ಕಲ್ಪಿಸಬೇಕು. ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ವಿಶೇಷ ನ್ಯಾಯಾಧೀಶರ ಮೂಲಕ ಅವರು ಪ್ರಕರಣಗಳ ಇತ್ಯರ್ಥಕ್ಕೆ ಅವಕಾಶವಿದೆ. ವಿವಿಧ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಲು ಬ್ಯಾಂಕ್ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಪ್ರತಿ ಇಲಾಖೆ ವ್ಯಾಪ್ತಿಯ ವಿಕಲಚೇತನರಿಗೆ ಇರುವ ಶೇ.5ರ ಅನುದಾನ ಸಮರ್ಪಕವಾಗಿ ಬಳಸಬೇಕು. ಬ್ರೈಲ್ ಭಾಷಾ ,ಸೈನ್ ಭಾಷೆ ತರಬೇತಿ ಹಮ್ಮಿಕೊಳ್ಳಬೇಕು. ವಿಕಲಚೇತನರ ಭವಿಷ್ಯದ ಹಿತದೃಷ್ಟಿಯಿಂದ ಅವರಿಗೆ ಸೌಲಭ್ಯ ಕಲ್ಪಿಸಲು ಸೂಚಿಸಿದರು. ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳಾದ ಶರಣಗೌಡ ಪಾಟೀಲ್ ಅವರು ಮಾತನಾಡಿ ಜಿಲ್ಲೆಯಲ್ಲಿ ಮಹಿಳೆಯರು(10568),(ಪುರುಷರು-16855), ಲಿಂಗತ್ವ ಅಲ್ಪಸಂಖ್ಯಾತರು(4) ಒಳಗೊಂಡು ಒಟ್ಟು 27,427 ವಿಕಲಚೇತನರು ಇದ್ದಾರೆ. 2016ರ ವಿಕಲಚೇತನರ ಹಕ್ಕುಗಳ ಕಾಯ್ದೆ ಯಡಿ 21ವಿಧಧ ಅಂಗವಿಕಲತೆಗೆ ಸೌಲಭ್ಯ ಕಲ್ಪಿಸಲಾಗುತ್ತಿದೆ. 23,272 ವಿಕಲತೆ ಪ್ರಮಾಣ ಪತ್ರ ನೀಡಲಾಗಿದೆ. 31,334 ಅಂಗವಿಕಲ ಪೋಷಣಾ ಪಿಂಚಣಿ ನೀಡಲಾಗುತ್ತಿದ್ದು, ಆರೋಗ್ಯ ವಿಮೆ ಇತರೆ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಇ-ಆಸ್ತಿ ತಂತ್ರಾಂಶದಲ್ಲಿ ಸ್ವತ್ತುಗಳಿಗೆ ಸಂಬಂಧಪಟ್ಟ ಅಗತ್ಯ ದಾಖಲೆಗಳು ಫೆ.25ರೊಳಗೆ ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ಸುತ್ತೋಲೆ ಪತ್ರ ಸಂಖ್ಯೆ: 105855/DMA/DEV/KHTA/20/2023, ದಿನಾಂಕ:03.02.2025ರಂತೆ ತಂತ್ರಾಂಶವನ್ನು ಸರಳೀಕರಣಗೊಳಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಆಸ್ತಿ ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಂಡ ಆಸ್ತಿಗಳ ವಿವರಗಳನ್ನು ಪರಿಶೀಲನೆಗೆ ಒಳಪಡಿಸಿ ಇ-ಆಸ್ತಿ ತಂತ್ರಾಂಶದಲ್ಲಿ ಸ್ವತ್ತುಗಳಿಗೆ ಸಂಬಂಧಪಟ್ಟ ಅಗತ್ಯ ದಾಖಲೆಗಳನ್ನು ಅಂ-ದರೆ ಸ್ವತ್ತಿನ ಮಾಲೀಕತ್ವವನ್ನು ದೃಢೀಕರಿಸುವ ಕ್ರಯ/ದಾನ/ ಎಲ್/ ಹಕ್ಕು ನಿವೃತ್ತಿ/ ಹಕ್ಕು ಪತ್ರ/ ವಿಭಾಗ ಪತ್ರ ಸ್ವತ್ತಿನ ಫೋಟೋ ಮಾಲೀಕರ ಭಾವಚಿತ್ರ ಮಾಲೀಕರ ಮತದಾರರ ಗುರುತಿನ ಚೀಟಿ, ಆಧಾರ ಕಾರ್ಡ್, ಪ್ಯಾನ್ ಕಾರ್ಡ್, ಕಂದಾಯ ಪಾವತಿಸಿರುವ ರಶೀದಿ, ವಿದ್ಯುತ್ ಬಿಲ್, ನೀರಿನ ಬಿಲ್ ಇತ್ಯಾದಿ ದಾಖಲಾತಿಗಳನ್ನು ಫೆ. 25 ರೊಳಗೆ ಸಲ್ಲಿಸುವಂತೆ ಹಾಗೂ ಈಗಾಗಲೇ ಗಣಕೀಕರಣಗೊಳಿಸಿರುವ ತಮ್ಮ ಆಸ್ತಿಗಳ ವಿವರವನ್ನು ಪರಿಶೀಲಿಸಿಕೊಂಡು, ಯಾವುದೇ ತಿದ್ದುಪಡಿ ಅಥವಾ ಬದಲಾವಣೆಗಳು ಇದ್ದಲ್ಲಿ ಮಾಹಿತಿಯನ್ನು ಫೆ.25ರೊಳಗೆ ನೀಡುವಂತೆ ಪುರಸಭೆ ಅಧ್ಯಕ್ಷೆ ರೋಜಮ್ಮಾ ಹಾಗೂ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಪುರಸಭೆ ಕಛೇರಿಗೆ ಸಂಪರ್ಕಿಸಲು ಕೋರಲಾಗಿದೆ.

# ಜಾತಿ-ಆದಾಯ ಪ್ರಮಾಣ ಪತ್ರಕ್ಕಾಗಿ ಸಹಾಯವಾಣಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 15- ಇಟಿ ಹಾಗೂ ಇತರೆ ಪರೀಕ್ಷೆ ಬರೆಯುವ ಉದ್ದೇಶಕ್ಕಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆಯಿರುವ ವಿದ್ಯಾರ್ಥಿಗಳು/ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 08532-225630 ಹಾಗೂ 08537-200248ಗೆ ಸಂಪರ್ಕಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ತಿಳಿಸಿದ್ದಾರೆ.

ಜಾತಿ ಮತ್ತು ಆದಾಯ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಸ್ವೀಕೃತ ಕರೆಗಳಿಗೆ ಕೊಡಲೇ ಸ್ಪಂದಿಸಿ ಕ್ರಮ ವಹಿಸಲಾಗುವುದು ಯಾವುದೇ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕಪಡುವ ಅಗತ್ಯವಿಲ್ಲವೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವ–ಉದ್ಯೋಗಕ್ಕೆ ಸೃಜನಾತ್ಮಕ ಕೌಶಲ ಅಗತ್ಯ: ಜಿಪಂ ಸಿಇಒ ರಾಹುಲ್ ಶರಣಪ್ಪ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಫೆ.15–ಸ್ವ–ಉದ್ಯೋಗ ಕೈಗೊಳ್ಳಲು ಸೃಜನಾತ್ಮಕವಾಗಿ ಹೊಸ ವಿಧದ ಕೌಶಲ್ಯ ತರಬೇತಿ ಹೊಂದಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಹೇಳಿದರು.

ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಉಚಿತ ಊಟ ಮತ್ತು ವಸತಿಯೊಂದಿಗೆ 30 ದಿನಗಳ ಬ್ಯೂಟಿ ಪಾರ್ಲರ್ ತರಬೇತಿ ಕಾರ್ಯಕ್ರಮ ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತದಲ್ಲಿ ಮಹಿಳೆಯರು ಸೌಂದರ್ಯಕ್ಕೆ ಹೆಚ್ಚು ಒತ್ತು ಕೊಡುವರಿಂದ, ಬ್ಯೂಟಿ ಪಾರ್ಲರ್‌ನಲ್ಲಿ ವಿಧದ ಮೇಕಪ್ ಕೌಶಲ್ಯವನ್ನು ಬೆಳಸಿಕೊಳ್ಳಬೇಕು. ಸಮಾಜದಲ್ಲಿ ಉತ್ತಮ ಜೀವನ ನಡೆಸಲು ಇಂತಹ ತರಬೇತಿಗಳು ಸಹಕಾರಿಯಾಗಲಿ ಎಂದು ಅವರು ಹಾರೈಸಿದರು.

ಮಹಿಳೆಯರು ಈಗಿನ ಕಾಲದಲ್ಲಿ ಸೌಂದರ್ಯದ ಬಗ್ಗೆ ತುಂಬಾ ಕಾಳಜಿ ವಹಿಸುವುದರಿಂದ ಬ್ಯೂಟಿ ಪಾರ್ಲರ್ ಮತ್ತು ಬ್ಯೂಟಿಷಿಯನ್‌ಗಳಿಗೆ ತುಂಬಾ ಬೇಡಿಕೆಯಿದೆ. ಬೇಡಿಕೆಗೆ ಅನುಗುಣವಾಗಿ ಕಾಲಕ್ಕೆ ತಕ್ಕಂತೆ ಹೊಸ ವಿನ್ಯಾಸಕ್ಕೆ ನೈಪುಣತೆ ಹೊಂದಿ ಸ್ವ–ಉದ್ಯಮ ಪ್ರಾರಂಭ ಮಾಡಿದರೆ ಮಹಿಳೆಯರು ಸ್ವಾವಲಂಬಿಗಳಾಗಿ ಯಶಸ್ವಿ ಮಹಿಳಾ ಉದ್ಯಮಿಯಾಗಬಹುದು ಎಂದು ಹೇಳಿದರು.

ಮಹಿಳೆಯರು ಮನೆಯಲ್ಲಿ ಕುಳಿತು ಬ್ಯೂಟಿ ಪಾರ್ಲರ್ ಮಾಡುವದರಿಂದ ಕೌಟುಂಬಿಕ ಜೀವನದಲ್ಲಿ ಆರ್ಥಿಕವಾಗಿ ಸಬಲರಾಗಬಹುದು. ಕೌಶಲ್ಯದ ಜೊತೆಗೆ ಆತ್ಮವಿಶ್ವಾಸ, ವ್ಯಕ್ತಿತ್ವ ವಿಕಸನದ ಮಾಹಿತಿ ನೀಡಲಾಗುತ್ತಿದ್ದು, ತಮ್ಮ ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ 34 ಜನ ಶಿಬಿರಾರ್ಥಿಗಳಿಗೆ ಬ್ಯೂಟಿಪಾರ್ಲರ್ ಟೂಲ್ ಕಿಟ್ ಹಾಗೂ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಜಿಪಂನ ಯೋಜನಾ ನಿರ್ದೇಶಕ ವಿನೋದ್, ಜಿಪಂ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ, ಜಿಪಂ ಎನ್‌ಆರ್‌ಎಲ್‌ಎಂನ ರಾಜೇಂದ್ರ, ರಘುವರ್ಮಾ, ಉಪನ್ಯಾಸಕರಾದ ಜಡೇಪ್ಪ, ದಿನೇಶ್, ಸಿದ್ದಲಿಂಗಮ್ಮ, ಸಂತೋಷಕುಮಾರ್, ಕಿರಣ ಕುಮಾರ ಸೇರಿದಂತೆ ಇತರರು ಭಾಗವಹಿಸಿದ್ದರು.

## ಮಾಧ್ಯಮ ಅಕಾಡೆಮಿಯಿಂದ ಪ್ರಥಮ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನ ಕೊನೆಯ ದಿನಾಂಕ ಫೆ.20 ರವರೆಗೆ ವಿಸ್ತರಣೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಫೆ.15–ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ಏರ್ಪಡಿಸಿದ್ದ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನದ ಕೊನೆಯ ದಿನಾಂಕವನ್ನು ಫೆಬ್ರವರಿ 20 ರವರೆಗೆ ವಿಸ್ತರಿಸಲಾಗಿದೆ.

ಈ ಮೊದಲು ಛಾಯಾಚಿತ್ರಗಳನ್ನು ಕಳುಹಿಸಲು ಫೆಬ್ರವರಿ 15 ಕೊನೆ ದಿನಾಂಕವಾಗಿತ್ತು. ಉಳಿದಂತೆ ಸ್ಪರ್ಧೆಯ ನಿಯಮ ಸೇರಿದಂತೆ ಯಾವುದರಲ್ಲೂ ಬದಲಾವಣೆ ಮಾಡಿಲ್ಲ.

ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000/– ರೂ., 25,000/– ರೂ. ಹಾಗೂ 15,000/– ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ ಅತ್ಯುತ್ತಮ ಛಾಯಾಚಿತ್ರಗಳನ್ನು ಹುಬ್ಬಳ್ಳಿ–ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.

*ಸ್ಪರ್ಧೆಯ ಷರತ್ತುಗಳು:*

ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ :01–01–.2024 ರಿಂದ 31–01–2025 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರಗ್ರಾಹಕರು ತಾವೇ ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು. ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ.

ಪ್ರತಿ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಕರ್ತರಿಗಾಗಿ ನೀಡುವ ಆಕ್ರೇಡಿಟೇಷನ್ ಕಾರ್ಡ್ ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು. ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್‌ಗಳನ್ನು ಜೆಪಿಇಜಿ ಫಾರ್ಮಟ್‌ನಲ್ಲಿ ಮಾತ್ರ ಸಲ್ಲಿಸಬೇಕು. ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20"ಥ 30" ಅಳತೆಯಲ್ಲಿ ಮುದ್ರಣ ಮಾಡಿಸಬೇಕಾಗಿರುವುದರಿಂದ ನೀವು ಕಳಿಸುವ ಇಮೇಜ್‌ಗಳು 20"x30" ಅಳತೆಯ, 300 ಆಕಉ ನಲ್ಲಿದ್ದು ಕನಿಷ್ಠ 5MB ಗಾತ್ರದಲ್ಲಿರಬೇಕು.

ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿ ಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು.

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್‌ಸೈಟ್‌ನಲ್ಲಿ ಇರುವ ನಿಗದಿತ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್‌ಗಳನ್ನು photo.karnatakamediaacademy@gmail.com ಇ–ಮೇಲ್ ವಿಳಾಸಕ್ಕೆ ದಿನಾಂಕ: 20–02–2025 ರಂದು ಸಂಜೆ 5:00 ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆ ಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಮೂವರು ತೀರ್ಪುಗಾರರಿದ್ದು, ಅವರು ತೆಗೆದುಕೊಂಡ ತೀರ್ಮಾನವೇ ಅಂತಿಮವಾಗಿರುತ್ತದೆ.

ಪ್ರಶಸ್ತಿಗೆ ಆಯ್ಕೆಯಾದ ಮೂರು ಛಾಯಾಚಿತ್ರಗಳಿಗೆ ಪ್ರಥಮ ಬಹುಮಾನ: ರೂ.35,000/ ದ್ವಿತೀಯ ಬಹುಮಾನ: ರೂ. 25000 ಹಾಗೂ ತೃತೀಯ ಬಹುಮಾನ: ರೂ.15000 ಗಳನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448227768 ಹಾಗೂ 9449245980 ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಫೆ.17 ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ಬಳ್ಳಾರಿ,ಫೆ.15–ಕುರುಗೋಡು ಜೆಸ್ಕಾಂ ಕಾರ್ಯ ಮತ್ತು ಪಾಲನಾ ಎಮ್ಮಿಗನೂರು ಶಾಖೆ ವ್ಯಾಪ್ತಿಯ ಬರುವ ಎಲ್ಲಾ ಗ್ರಾಹಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಫೆ.17 ರಂದು ಬೆಳಿಗ್ಗೆ 11 ಗಂಟೆಗೆ ರ್‍ವಾಯಿ ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ, ಸೇಡಂ ವಿಭಾಗಿಯ ಕಚೇರಿಯಲ್ಲಿ ಶ್ರೀ ಸೇವಾಲಾಲ ಮಹಾರಾಜರ ಜಯಂತಿ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ**

ಸೇಡಂ:ತಾಲೂಕಿನ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ವಿಭಾಗಿಯ ಕಚೇರಿಯಲ್ಲಿ ಶ್ರೀ ಸಂತ ಸೇವಾಲಾಲ್ ಮಹಾರಾಜರ 286 ನೇ ಜಯಂತೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು ಈ ಸಂದರ್ಭದಲ್ಲಿ ಕಚೇರಿಯ ಅಧಿಕಾರಿಗಳಾದ ಡಾ.ಲಕ್ಷ್ಮಪ್ಪ . ಎ. ಓ. ರಮೇಶ ನಾಯಕ. ಪ್ರೇಮಸಿಂಗ ರಾಥೋಡ. ರಾಜೇಂದ್ರ. ಪ್ರೇಮಸಾಗರ. ಜಿತೇಂದ್ರ.ಮಹಾದೇವ.ಸುನಿಲ ಹಾಗೂ ಇನ್ನಿತರರು ಇದ್ದರು.

# ಮಕ್ಕಳ ಹಕ್ಕು ಹಾಗೂ ರಕ್ಷಣೆ ಕುರಿತು ಅಧಿಕಾರಿಗೆ ವಿಶೇಷ ಕಾಳಜಿ ಇರಲಿ: ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್



**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ:ಫೆ.15– ಸರ್ಕಾರಿ ಮತ್ತು ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಜಿಲ್ಲಾಮಟ್ಟದ ಹಾಗೂ ತಾಲ್ಲೂಕು ಮಟ್ಟದ ಸಂಬಂಧಿತ ಅಧಿಕಾರಿಗಳು ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳು ಹಾಗೂ ಮಕ್ಕಳಿಗೆ ಸೂಕ್ತ ಸಮಾಲೋಚನೆ ನೀಡುತ್ತಿರುವ ಕುರಿತು ವರದಿ ನೀಡುವಂತೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಗುರುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ, ಮುಖ್ಯಮಂತ್ರಿ ಬಾಲಸೇವಾ ಯೋಜನೆ, ಪಿ.ಎಮ್.ಕೇರ್ಸ್. ಫಾರ್ ಚಿಲ್ಡ್ರನ್ ಯೋಜನೆಗಳ ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

2025 ನೇ ಸಾಲಿನಲ್ಲಿ ಸರ್ಕಾರದ ಆದೇಶದಂತೆ ಜಾರಿಗೆ ಬಂದಿರುವ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಮತ್ತು ಸದಸ್ಯರುಗಳು ನಿಗಧಿತ ಸಮಯದಲ್ಲಿ ನಿಯಮಾನುಸಾರ ಮಕಳ ಪ್ರಕರಣಗಳನ್ನು ತುರ್ತಾಗಿ ಇತ್ಯರ್ಥಪಡಿಸಲು ತಿಳಿಸಿದರು.

ಪ್ರಾಯೋಜಕತ್ವ ಯೋಜನೆ ಅಡಿ ಬಂದಂತಹ ಅರ್ಜಿಗಳಿಗೆ ಸಂಬಂಧಿಸಿದಂತೆ ಮನೆ ಭೇಟಿ ಮಾಡಿ ಸಾಮಾಜಿಕ ತನಿಖಾ ವರದಿಗಳನ್ನು ಮಾಡುವಂತೆ ತಿಳಿಸಿದರು

ಪೋಕ್ಸೋ ಪ್ರಕರಣದಡಿ ದೂರು ದಾಖಲಾದ ಪ್ರಕರಣಗಳ ಸಂಬಂಧಪಟ್ಟಂತೆ ಪ್ರತಿಯೊಂದು ಪ್ರಕರಣ ವಿವರಣೆಯನ್ನು ಹಾಗೂ ಯಾವ ಹಂತದಲ್ಲಿ ಇದೆ ಎನ್ನುವುದು ಕುರಿತಂತೆ ವರದಿ ನೀಡಲು ತಿಳಿಸಿದರು. ಮಕ್ಕಳ ಸಹಾಯವಣಿಗೆ ಬಂದಂತಹ ಕರೆಗಳ ಕುರಿತು ಕಳೆದ 5 ವರ್ಷಗಳ ವರದಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಮಕ್ಕಳಿಗೆ ಸರ್ಕಾರದ ಸೌಲಭ್ಯಗಳನ್ನು ಸರಿಯಾಗಿ ನೀಡಬೇಕು. ಒಳ್ಳೆ ಊಟ, ಸ್ವಚತೆ ಕಾಯ್ದುಕೊಳ್ಳಬೇಕು. ಶಾಲೆಯಿಂದ ಹೊರಗೂಳಿದ ಮಕ್ಕಳನ್ನು ಗುರುತಿಸಿ ಅವರನ್ನು ಪುನಃ ಮರಳಿ ಶಾಲೆಗೆ ಕರೆತರಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.

ಕೌಟುಂಬಿಕ ದೌರ್ಜನ್ಯ ಅತ್ಯಾಚಾರ, ಪೋಕ್ಸೋ, ಬಾಲ್ಯವಿವಾಹ, ನಾಪತ್ತೆ ಸೇರಿದಂತೆ ಇತರೆ ಪ್ರಕರಣಗಳ ಬಗ್ಗೆ ಹೆಚ್ಚಿನ ಗಮನ ಹರಿಸಿ ಕಾರ್ಯನಿರ್ವಹಿಸಬೇಕು. ಬಾಲ್ಯವಿವಾಹ ತಡೆಯಲು ಎಲ್ಲ ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದರು.

ಬಾಲಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆ ಮಾಡಬೇಕೆಂದರೆ ಅಧಿಕಾರಿಗಳ ತಂಡಗಳನ್ನು ರಚಿಸಿ ಹೊಟೆಲ್ ಬಾರ್ ಅಂಡ್ ರೆಸ್ಟೋರೆಂಟ್‌ಗಳು ಸೇರಿದಂತೆ ಇಟ್ಟಂಗಿ ಭಟ್ಟಿಗಳಲ್ಲಿ ಕಾಲ–ಕಾಲಕ್ಕೆ ಪರಿಶೀಲನೆ ಮಾಡಬೇಕು ಹಾಗೂ ಅಂತಹ ಮಕ್ಕಳು ಕಂಡು ಬಂದಲ್ಲಿ ಸಂಬಂಧಿಸಿದ ಮಾಲೀಕರನ್ನು ಶಿಕ್ಷೆಗೆ ಗುರಿಪಡಿಸಬೇಕು ಎಂದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ, ಡಿ.ಹೆಚ್.ಓ. ಡಾ. ಶರಣಬಸಪ್ಪ ಕ್ಯಾತನಾಳ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೂರ್ಯಕಾಂತ ಮದಾನೆ, ಕಾರ್ಮಿಕ ಇಲಾಖೆಯ ಅಧಿಕಾರಿ ಶರಣಪ್ಪ ಹಳಮನಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ. ಪಾಟೀಲ್. ಬಾಲ ಕಾರ್ಮಿಕ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ, ಜಿಲ್ಲಾಮಟ್ಟದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪೋಲಿಸ್ ನಿರೀಕ್ಷಕರು ಪೋಲಿಸ್ ಠಾಣೆ ಕಲಬುರಗಿ ನಗರ ಮತ್ತು ಸರ್ಕಾ–ರೇತರ ಪಾಲನಾ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಫೆ.16 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಬಳ್ಳಾರಿ,ಫೆ.15–ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ 220/110/11ಕೆ.ವಿ ಅಲ್ಲೀಪುರ ಸ್ವೀಕರಣ ಕೇಂದ್ರದಲ್ಲಿ 20 ಎಂವಿಎ ಪರಿವರ್ತಕ2 ಕ್ಕೆ ಅಗ್ನಿಶಾಮಕ ರಕ್ಷಣಾ ವ್ಯವಸ್ಥೆ ಅಳವಡಿಸುವ ಕಾಮಗಾರಿ ತುರ್ತಾಗಿ ಕೈಗೊಳ್ಳುತ್ತಿರುವುದರಿಂದ ಫೆ.16 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 04 ಗಂಟೆಯವರೆಗೆ 220/110/11ಕೆ.ವಿ ಅಲ್ಲಿಪುರ ಸ್ವೀಕರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ 11ಕೆ.ವಿ ಮಾರ್ಗಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ **ಪ್ರದೇಶಗಳು:**

ಎಫ್–31 ಕೊಳಗಲ್ಲು ಮಾರ್ಗದ ಕೊಳಗಲ್ಲು, ಕೃಷ್ಣಾ ನಗರ ಕ್ಯಾಂಪ್, ಎಫ್–32 ಐ.ಪಿ ಸೆಟ್ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ, ಅಲ್ಲೀಪುರ, ಆಲದಹಳ್ಳಿ ಕೃಷಿ ಪ್ರದೇಶಗಳು. ಎಫ್–37 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಮಾರ್ಗದ ಬೆಳಗಲ್ಲು ಗ್ರಾಮ, ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶಗಳು.

ಎಫ್–38 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಫೀಡರ್ ಮಾರ್ಗದ ಬೆಳಗಲ್ಲು ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ ಗ್ರಾಮಗಳು. ಎಫ್–71 ಹರಗಿನದೋಣಿ ಎನ್.ಜೆ.ವೈ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ, ಹೊನ್ನಳ್ಳಿ, ಹೊನ್ನಳ್ಳಿ ತಾಂಡ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರೇಕುಪ್ಪ ಪುರಸಭೆ: ದಾಖಲೆ ಸಲ್ಲಿಸಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಫೆ.15–ಕುರೇಕುಪ್ಪ ಪುರಸಭೆ ವ್ಯಾಪ್ತಿಯ ಆಸ್ತಿ ಮಾಲೀಕರು ತಮ್ಮ ಆಸ್ತಿಯ ವಿವರಗಳನ್ನು ಆಸ್ತಿ ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಳಿಸಿರುವ ಸ್ವತ್ತುಗಳಿಗೆ ಸಂಬಂಧಪಟ್ಟ ಅಗತ್ಯ ದಾಖಲೆಗಳನ್ನು ಕುರೇಕುಪ್ಪ ಪುರಸಭೆ ಕಚೇರಿಗೆ ಸಲ್ಲಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಆಸ್ತಿ ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಂಡ ಆಸ್ತಿಗಳ ವಿವರಗಳನ್ನು ಪರಿಶೀಲನೆಗೆ ಒಳಪಡಿಸಿ ಇ–ಆಸ್ತಿ ತಂತ್ರಾಂಶದಲ್ಲಿ ಇಂಡೀಕರಿಸುವಂತೆ ಸೂಚಿಸಿರುವುದರಿಂದ, ಸ್ವತ್ತಿನ ಮಾಲೀಕತ್ವವನ್ನು ದೃಢೀಕರಿಸುವ ಕ್ರಯ/ದಾನ/ವಿಲ್/ಹಕ್ಕುನಿವೃತ್ತಿ ಹಕ್ಕುಪತ್ರ/ವಿಭಾಗ ಪತ್ರ ಸ್ವತ್ತಿನ ಫೋಟೊ ಮಾಲೀಕರ ಭಾವಚಿತ್ರ, ಮಾಲೀಕರ ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಕಂದಾಯ ಪಾವತಿಸಿರುವ ರಶೀದಿ, ವಿದ್ಯುತ್ ಬಿಲ್, ನೀರಿನ ತೆರಿಗೆ ಬಿಲ್ ಇತ್ಯಾದಿ ದಾಖಲಾತಿಗಳನ್ನು ಫೆ.25 ರೊಳಗೆ ಸಲ್ಲಿಸಬೇಕು.

ಈಗಾಗಲೇ ಗಣಕೀಕರಣಗೊಳಿಸಿರುವ ತಮ್ಮ ಆಸ್ತಿಗಳ ವಿವರ ಪರಿಶೀಲಿಸಿಕೊಂಡು, ಯಾವುದೇ ತಿದ್ದುಪಡಿ ಅಥವಾ ಬದಲಾವಣೆ ಇದ್ದಲ್ಲಿ ಅಂತಹ ಮಾಹಿತಿಯನ್ನೂ ಒಂದು ವಾರದೊಳಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇ–ರಿಯ ನೋಡಲ್ ಅಧಿಕಾರಿ, ಕಂದಾಯ ಅಧಿಕಾರಿ, ಕಂದಾಯ ಶಾಖೆಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡತಿನಿ: ಆಸ್ತಿ ತೆರಿಗೆ ಪಾವತಿಸಲು ಸೂಚನೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಫೆ.15–ಕುಡತಿನಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕಟ್ಟಡ, ನಿವೇಶನ ಹೊಂದಿರುವ ಆಸ್ತಿ ಮಾಲೀಕರು ಕಡ್ಡಾಯವಾಗಿ ತಮ್ಮ ಆಸ್ತಿ ತೆರಿಗೆ ಪಾವತಿಸಬೇಕು ಎಂದು ಕುಡತಿನಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಕುಡತಿನಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಾಗ, ಅರೆ ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಸ್ವತ್ತುಗಳನ್ನು ಹೊರತುಪಡಿಸಿ ಇನ್ನುಳಿದ ಕಟ್ಟಡ, ನಿವೇಶನಗಳ ಮಾಲೀಕರು ತಮ್ಮ ಆಸ್ತಿಗಳ ಆಸ್ತಿ ತೆರಿಗೆ ಪಾವತಿಸಬೇಕು.

ಸಂಬಂಧಿಸಿದ ಪೂರಕ ನೋಂದಾಯಿತ ದಾಖಲೆ ಪತ್ರಗಳು, ಸ್ವತ್ತಿನ ಭಾವಚಿತ್ರ, ಮಾಲೀಕರ ಫೋಟೋ, ನಮೂನೆ–15, ವಿದ್ಯುತ್ ಬಿಲ್, ಕುಡಿಯುವ ನೀರಿನ ಬಿಲ್, ಕಟ್ಟಡ ಪರವಾನಗಿ ಮತ್ತು ಅನುಮೋದಿತ ನಕ್ಷೆ, ಏಕ ನಿವೇಶನ ವಿನ್ಯಾಸ ಅನುಮೋದನೆ ಅಥವಾ ಅನುಮೋದಿತ ಬಡಾವಣೆಯ ನಕ್ಷೆ, ಆಲಿನೇಷನ್ ನಕಲು ಪ್ರತಿ, ಆರ್‌ಟಿಸಿ, ಮ್ಯೂಟೇಶನ್ ನಕಲು ಪ್ರತಿ, ಮಾಲೀಕರ ಆಧಾರ್ ಕಾರ್ಡ್ ಪ್ರತಿ, ಮಾಲೀಕರ ಪಾನ್ ಕಾರ್ಡ್ ಪ್ರತಿ ಅಥವಾ ಚುನಾವಣಾ ಗುರುತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ಪುರಸಭೆ ಕಚೇರಿಗೆ ಸಲ್ಲಿಸಿ ಸ್ವತ್ತಿಗೆ ಸಂಬಂಧಪಟ್ಟ ತೆರಿಗೆ ಪಾವತಿಸಬೇಕು.

ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ–3, ನಮೂನೆ–3ಎ ಪಡೆದುಕೊಂಡು ನೋಂದಾಯಿತ ಕಚೇರಿಯಲ್ಲಿ ಕ್ರಯ ಪತ್ರ, ದಾನ ಪತ್ರ, ವಿಭಾಗ ಪತ್ರ ಹಕ್ಕು, ಖುಲಾಸೆ ಹಾಗೂ ಇತರೆ ದಾಖಲೆ ಪತ್ರ ನೋಂದಣಿ ಮಾಡಿಸಿಕೊಂಡು ಸರ್ಕಾರದ ಸೌಲಭ್ಯ ಪಡೆದುಕೊಳ್ಳಬಹುದು.

ತಪ್ಪಿದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರುಗಳಿಗೆ ನಿಯಮ 10ಎ ರಂತೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕುಡತಿನಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳ ಕಚೇರಿ, ಕಂದಾಯ ಶಾಖೆಯ ಕಂದಾಯ ನಿರೀಕ್ಷಕರ ಕಚೇರಿ ಅಥವಾ ಮೊ.7019333 6208, 9902426116, 9844223831 ಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.16 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಫೆ.15–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಫ್–72 ಫೀಡರ್‌ನ ತುರ್ತು ನಿರ್ವಹಣಾ ಕಾರ್ಯ ಕೈಗೊಳ್ಳುತ್ತಿರುವುರಿಂದ ಫೆ.16 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ನಗರ ಉಪವಿಭಾಗ–1ರ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

***ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:***

ಎಫ್–72 ಫೀಡರ್ ಮಾರ್ಗದ ಕಂಟೋನ್‌ಮೆಂಟ್, ಸೂರ್ಯ ಕಾಲೋನಿ, ತಿಲಕ್ ನಗರ, ಸುಧಾ ಕ್ರಾಸ್, ನಂದಿ ಕಾಲೋನಿ, ಹೆಚ್.ಆರ್.ಜಿ ಕಾಲೋನಿ, ಜಯ ನಗರ, ರಹಿಮಬಾದ್ ಕಾಲೋನಿ, ನಲಂದ ಕಾಲೇಜ್, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನಾಥ ಮಂದಿರ, ಭಾಸ್ಕರ ನಾಯ್ಡು, ಸೆಂಟ್ ಜೋಸೆಫ್ ಸ್ಕೂಲ್ ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳು.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಬಳ್ಳಾರಿ ನಗರ ಉಪ–ವಿಭಾಗ–1 ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಕಾಯಕ ಜೀವಿಗಳ ಅಂದೋಲನವೆ ಶರಣದಾಗಿತ್ತು.



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :– ಫೆ 15. ಕಾಯಕಜೀವಿಗಳಅಂದೋಲನವೆ ಶರಣದಾಗಿತ್ತುಇಂಥಹ ಒಂದು ವೈಚಾರಿಕತೆಯ ಸಮಾರಂಭವು ಹಾರಕೂಡಿನ ಪೂಜ್ಯರು ಶರಣರ ನಾಡಾದ ಬಸವಕಲ್ಯಾಣದಿಂದ ಆಚರಿಸುತ್ತಿರುವುದು ನಮಗೆಲ್ಲರಿಗೂ ಸಂತೋಷದ ವಿಷಯ ವಾಗಿದೆ ಎಂದು ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು ತಿಳಿಸಿದರು. ಇಲ್ಲಿನ ಥೇರ ಮೈದಾನದ ಸಭಾಭವನದ ಆವರಣದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿ. ಕಾಯಕ ಹಾಗೂ ದಾಸೋಹಕೆ ಬಸವಾದಿ ಶಿವಶರಣರು ಬಹಳಷ್ಟು ಮಹತ್ವ ನೀಡಿದರು ಎಂದು ತಿಳಿಸಿದರು.

ಹಾರಕೂಡ ಸಂಸ್ಥಾನ ಹಿರೇಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು. ತಿಪುರಾಂತಿನ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ಹರಳಯ್ಯಗವಿಯ ಪೂಜ್ಯಶ್ರೀ ಡಾ ಗಂಗಾಂಬಿಕಾ ಅಕ್ಕ ಅಧ್ಯಕ್ಷತೆ ವಹಿಸಿದ್ದರು. ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ಎಸ್. ಬಿರಾದಾರ್ ಉದ್ಘಾಟಿಸಿದರು. ಆಶೆಯ ನುಡಿ ಬಸವಕಲ್ಯಾಣ ಕ್ಷೇತ್ರ ಸಮಿತಿಯ ಬಸವರಾಜ ಪಾಟೀಲ ಸೇಡಂ. ಮುಖ್ಯ ಅತಿಥಿಗಳಾಗಿ ಬಿ. ಕೆ. ಡಿ. ಬಿ. ಆಯುಕ್ತರಾದ ಜಗನ್ನಾಥ ರೆಡ್ಡಿ. ಬೀದರ. ಚೆಬರ್ ಆಫ್ ಕಾಮ್ರಸ್ ಹಾಗೂ ಇಂಡಸ್ಟ್ರೀಸ್ ಅಧ್ಯಕ್ಷರಾದ ಬಿ. ಜಿ. ಶೆಟ್ಟಗಾರ. ನಗರ ಸಭೆಯ ಪೌರಾಯುಕ್ತರಾದ ರಾಜು ಬಣಗಾರ. ಗುರು ಪೂಜೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶಾಂತಲಿಂಗ ಮಠಪತಿ. ಷಟಸ್ಥಲ ಧ್ವಜಾರೋಹಣ ನಿವೃತ್ತ ನ್ಯಾಯಾಧೀಶ ಸುಭಾಷ ಚಂದ್ರ ನಾಗರಾಳೆ. ಸಿದ್ರಾಮ್ ಗುದಗೆ. ಮೇಘರಾಜ ನಾಗರಳೆ. ಮಲ್ಲಿನಾಥ ಹಿರೇಮಠ ಹಾರಕೂಡ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಂಗೀತ ಸೇವೆ ಕು. ರಾಜೇಶ್ರೀ ದೀಲಿಪ ಕುಮಾರ್ ಸ್ವಾಮಿ ಸಂಗೀತ ಸೇವೆ ಸಲ್ಲಿಸಿದರು. ಸಂಚಾಲನೆ ನವಲಿಂಗ ಪಾಟೀಲ ಮಾಡಿದರು.

# ಹಸಿರು ಪಡೆ ಯೋಜನೆ ಪರಿಸರ ಸಂರಕ್ಷಣೆಗೆ ಸಹಾಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:–ರಾಷ್ಟ್ರೀಯಹಸಿರು ಪಡೆ ಯೋಜನೆ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆ, ವೈಜ್ಞಾನಿಕ ಮನೋಭಾವನೆಯ ಅರಿವು ಒಡ ಮೂಡಿಸಲು ಸಹಾಯವಾಗಿದೆ ಎಂದು ಇಕೋ ಕ್ಲಬ್ ನೋಡಲ್ ಅಧಿಕಾರಿ ಗುಂಡಪ್ಪ ಹುಡುಗೆ ತಾಲೂಕಿನ ಹಳ್ಳಿಖೇಡ್ (ಬಿ) ಸರ್ಕಾರಿ ಪ್ರೌಢ ಶಾಲೆಯಲ್ಲಿ ಇಕೋ ಕ್ಲಬ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ಮಾಲಿನ್ಯ ಹೋಗಲಾಡಿಸಲು ವಿದ್ಯಾರ್ಥಿಗಳು ಕಡ್ಡಾಯವಾಗಿ ಗಿಡ ಮರಗಳು ಬೆಳೆಸಿ ಸಂರಕ್ಷಣೆ ಮಾಡಲು ಸಲಹೆ ನೀಡಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಪರಿಸರ ಅಸಮತೋಲನಹೋಗಲಾಡಿಸಲು ಪ್ರತಿಯೊಬ್ಬರು ಗಿಡ ಮರಗಳನ್ನು ಬೆಳೆಸಿ ಸಂರಕ್ಷಿಸಬೇಕು ಎಂದರು. ಪರಿಸರ ಅಸಮತೋಲನದಿಂದಾಗಿ ಭೂ ತಾಪಮಾನ ಹೆಚ್ಚಳವಾಗಿ ಜೀವ ವೈವಿಧ್ಯತೆ ಮೇಲೆ ಭಾರಿ ಪರಿಣಾಮ ಬೀರುತ್ತಿದೆ ಭೂ ತಾಪಮಾನ ಕಡಿಮೆ ಮಾಡಲು ಮರ ಗಿಡ ಬೆಳೆಸಿ ಸಂರಕ್ಷಣೆ ಮಾಡಲು ಕಾವಡಿ ತಿಳಿಸಿದರು. ಶಾಲೆ ಮುಖ್ಯ ಗುರುಗಳಾದ ದತ್ತಾತ್ರೇಯ ಪಂಚಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು. ದೈಹಿಕ ಶಿಕ್ಷಕರಾದ ನಾಗರಾಜ ಶಿರಮುಂಡಿ, ಸಹ ಶಿಕ್ಷಕಿ ನಾಹಹಿತಾ ಅಂಜುಮ್ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸೇವಾಲಾಲ್ ನಗರದಲ್ಲಿ ಸಂಭ್ರಮದ ಸಂತ ಸೇವಾಲಾಲ್ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ :ಫೆ.15: ನಗರದ ಶಹಾಬಾದ ರಸ್ತೆಯ ನೃಪತುಂಗ ಕಾಲನಿಯ ಶ್ರೀ ಸೇವಾಲಾಲ್ ನಗರದಲ್ಲಿ ಸಂತ ಸೇವಾಲಾಲ್ ಮಹಾರಾಜ ಅವರ 286ನೇ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಬಸವೇಶ್ವರ ಸಮಾಜ ಸೇವಾ ಬಳಗದವತಿಯಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅಧ್ಯಕ್ಷ ಎಚ್. ಬಿ.ಪಾಟೀಲ ಹಾಗೂ ಸಕ್ರಿಯ ಸದಸ್ಯ ಶಿವಯೋಗೆಪ್ಪಾ ಎಸ್. ಬಿರಾದಾರ ಸಮುದಾಯದವರಿಗೆ ಜಯಂತಿಯ ಶುಭಾಶಯ ಕೋರಿದರು.

ಮುಖಂಡ ಹಾಗೂ ಸಮಾಜ ಸೇವಕ ರವಿನಾಯಕ, ಪ್ರಮುಖರಾದ ರಾಜು ಎಂ.ಚವ್ಹಾಣ, ಸುಭಾಷ್ ರಾಠೋಡ, ಬನ್ಸಿಲಾಲ್ ರಾಠೋಡ, ಬೆಡಸೂರ ಗ್ರಾಪಂ ಅಧ್ಯಕ್ಷ ಕಿಶೋರ್ ಜಾಧವ, ಶಂಕರ ಪವಾರ, ಮೋಹನ ರಾಠೋಡ, ನಿತೇಶ್ ಬಿ.ಪವಾರ, ದೇಸಾಯಿ ಚವ್ಹಾಣ, ಕೇಶವ ಚವ್ಹಾಣ, ಸೋಮನಾಥ ರಾಠೋಡ, ರಮೇಶ್ ಚವ್ಹಾಣ, ವಿಜಯ ಎಂ.ಚವ್ಹಾಣ, ರಾಜು ರಾಠೋಡ ಸೇರಿದಂತೆ ಬಡಾವಣೆಯ ಅನೇಕ ನಾಗರಿಕರು, ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದರು. ನಂತರ ಜರುಗಿದ ಮೆರವಣಿಗೆಯ ಕಾರ್ಯಕ್ರಮದಲ್ಲಿ ಬಂಜಾರಾ ನೃತ್ಯ ಮನಸೂರೆಗೊಳಿಸಿತು.

# ಸಾಫ್ಟವೇರ್ ಇಂಜಿನಿಯರ್‌ಗೆ 97,800 ರೂ.ವಂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.14–ಸಾಮಾಜಿಕ ಜಾಲತಾಣಗಳಾದ ವಾಟ್ಸಪ್ ಮತ್ತು ಟೆಲಿಗ್ರಾಮ ಖಾತೆಗಳ ಮೂಲಕ ವರ್ಕ್‌ಫರ್ಮ್ ಹೋಮ್ ಕೆಲಸ ಅಂತ ಗೂಗಲ್‌ನಲ್ಲಿ ಹೋಟೆಲ್, ಸ್ಥಳಗಳಿಗೆ ರೇಟಿಂಗ್ ನೀಡಿ ಹಣಗಳಿಸಬಹುದು ಎಂದು ಸುಳ್ಳು ಹೇಳಿ ನಂಬಿಸಿ ಸಾಫ್ಟವೇರ್ ಇಂಜಿನಿಯರ್‌ಗೆ 97,800 ರೂ. ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ.

ಹೈದ್ರಾಬಾದನಲ್ಲಿ ಸಾಫ್ಟವೇರ್ ಇಂಜಿನಿಯರ್ ಆಗಿರುವ ನಗರದ ನ್ಯೂ ರಾಘವೇಂದ್ರ ಕಾಲೋನಿಯ ಶ್ರೀಪಾದ ಕುಲಕರ್ಣಿ ಎಂಬುವವರೆ ವಂಚನೆಗೆ ಒಳಗಾಗಿದ್ದಾರೆ.

# ಇಕೋ ಕ್ಲಬ್ ಹಸಿರು ಪಡೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಫೆ 15. ತಾಲ್ಲೂಕಿನ ಆಲಗೂಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಿ.ವಿ.ರಾಮನ್ ಇಕೋ ಕ್ಲಬ್ ಹಸಿರು ಪಡೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರಾದ ದಯಾನಂದ ಚಿಟ್ಟಂಪಲ್ಲೆಯವರು ಅಧ್ಯಕ್ಷತೆ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಭೋಸಗಾ ವಲಯದ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಅಣ್ಣೆಪ್ಪ ಚಿಟ್ಟಂಪಲ್ಲೆ ಮಾತನಾಡಿ ಇಂದಿನ ದಿನ ಮಾನಗಳಲಿ ಪರಿಸರದ ಅವಶ್ಯಕತೆ ಇದೆ ಆದರಿಂದ ಹೆಚ್ಚಿನ ಗಿಡ ಮರಗಳನ್ನು ನಡೆಸಬೇಕು ಎಂದರು. ,ಸರಕಾರಿ ಪ್ರೌಢ ಶಾಲೆ ಅಲಗೂಡನ ಸಹಶಿಕ್ಷಕರಾದ ಬೊಮ್ಮಲಿಂಗಪ್ಪರವರು ಉಪನ್ಯಾಸ ನೀಡಿ ಪ್ರಸ್ತುತ ಸನ್ನಿವೇಶದಲ್ಲಿ ಕಾಡುಗಳ ಪ್ರಾಮುಖ್ಯತೆ, ಪ್ಲಾಸ್ಟಿಕ್ ವಸ್ತುಗಳ ಮರುಬಳಕೆ ಹಾಗೂ ಜಾಗತಿಕ ತಾಪಮಾನದ ದುಷ್ಪರಿಣಾಮದ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ನಾಗಪ್ಪಾ ನಿಣ್ಣೆ. ಎಸ್. ಡಿ. ಎಮ್. ಸಿ. ಸದಸ್ಯರು ಗಾಣಟಿಜಜಜಿಟಿಜಜಮದ ಪ್ರಮುಖರು. ಶಾಲೆಯ ಶಿಕ್ಷಕರು ಹಾಗೂ ಮುದ್ದು ಮಕ್ಕಳು ಭಾಗವಹಿಸಿದ್ದರು. ಶಿಕ್ಷಕರಾದ ಜಗನ್ನಾಥ ಬಿರಾದಾರ ನಿರೂಪಿಸಿದರು, ಪ್ರಸ್ತಾವಿಕ ಮಾತು ಶಾಲಾ ಮುಖ್ಯ ಗುರುಗಳಾದ ವಿಜಯಕುಮಾರ. ಸ್ವಾಗತ ಶಿಕ್ಷಕಿ ಕರುಣಾದೇವಿ. ಶಿಕ್ಷಕಿ ಸುಮಿತ್ರಾ ಮುಳೆ ವಂದಿಸಿದರು.

# ರಾಯಚೂರು ಜಿಲ್ಲೆ: ರೇಷ್ಮೆ ಇಲಾಖೆಯ ಯೋಜನೆಗಳು; ಅನುಕೂಲತೆಗಳು

ನಮ್ಮ ದೇಶದಲ್ಲಿ ರೇಷ್ಮೆ ಕೃಷಿಯು 250ವರ್ಷಗಳಿಂದಲೂ ಪ್ರಚಲಿತದಲ್ಲಿದೆ. ಪ್ರಮುಖ ಗುಡಿ ಕೈಗಾರಿಕೆ ಎಂದೇ ಗುರುತಿಸಿಕೊಂಡಿರುವ ರೇಷ್ಮೆಯು ರೈತರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಿದೆ. ರೇಷ್ಮೆ ಕೃಷಿ ಮಾಡಲು ರೈತರು ಇತ್ತೀಚೆಗೆ ಹೆಚ್ಚಿನ ಆಸಕ್ತಿ ತೋರುತ್ತಿದ್ದು, ಈ ಕೃಷಿ ಪದ್ಧತಿಯು ಇಂದು ಪ್ರಮುಖ ಕಸುಬಾಗಿದೆ.

ನಮ್ಮ ದೇಶದಲ್ಲಿ ವಾರ್ಷಿಕ ಸುಮಾರು 60 ರಿಂದ 70 ಲಕ್ಷ ಜನರಿಗೆ ರೇಷ್ಮೆ ಕೃಷಿ ಮತ್ತು ರೇಷ್ಮೆ ಕೈಗಾರಿಕಾ ಚಟುವಟಿಕೆಗಳಿಂದ ಉದ್ಯೋವಕಾಶಗಳು ದೊ–ರೆಯುತ್ತಿದ್ದು, ಇದರಿಂದಾಗಿ ಗ್ರಾಮೀಣ ಉದ್ಯೋಗ ಸೃಷ್ಟಿ ಮತ್ತು ಅಂತರ್ಗತ ಅಭಿವೃದ್ಧಿ ಸಾಧ್ಯವಾಗಿದೆ ಎಂಬುದು ರೇಷ್ಮೆಯ ಹೆಚ್ಚುಗಾರಿಕೆಯಾಗಿದೆ.

ರೇಷ್ಮೆ ಕೃಷಿಯಿಂದಾಗಿ ಮಹಿಳಾ ಸಬಲೀಕರಣವು ಸಹ ಸಾಧ್ಯವಾಗಿದೆ. ಈ ರೇಷ್ಮೆ ಕೃಷಿಯಲ್ಲಿ ಶೇ.60ರಷ್ಟು ಪ್ರಮಾಣದಲ್ಲಿ ಮಹಿಳೆಯರು ತೊಡಗಿದ್ದಾರೆ. ರಾಯಚೂರು, ಯಾದಗಿರಿ, ಕಲಬುರಗಿ, ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಗಳು ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ರೇಷ್ಮೆ ಬೆಳೆಯುತ್ತಿದ್ದು, ಸುಮಾರು 12 ಲಕ್ಷ ಕುಟುಂಬಗಳಿಗೆ ರೇಷ್ಮೆ ಕೃಷಿ ಮತ್ತು ರೇಷ್ಮೆ ಕೈಗಾರಿಕೆಗಳಿಂದ ಉದ್ಯೋಗಾವಕಾಶ ಸಿಕ್ಕಿದೆ. ಸಣ್ಣ, ಅತಿ ಸಣ್ಣ ರೈತರು ಮತ್ತು ಸಮಾಜದ ದುರ್ಬಲ ವರ್ಗದ ಜನರಿಗೆ ರೇಷ್ಮೆಯು ಮುಖ್ಯ ಕಸುಬು ಮತ್ತು ಸಾಂಪ್ರದಾಯಿಕ ಜೀವನಾಧಾರವಾಗಿದೆ.

ನಮ್ಮ ಕರ್ನಾಟಕ ರಾಜ್ಯದಲ್ಲಿ ಶ್ರೀಗಂಧದಷ್ಟೇ ರೇಷ್ಮೆಯು ಒಂದು ವಿಶೇಷ ಉತ್ಪನ್ನ ಎಂದು ಗುರುತಿಸಿಕೊಂಡಿದೆ. ರೇಷ್ಮೆ ಕೃಷಿಯು ರಾಜಶ್ರಯದಲ್ಲಿ ವೈಭವಾಗಿ ಬೆಳೆದು ಬಂದ ಶ್ರೇಷ್ಠ ಕೃಷಿ ಪದ್ಧತಿಯಾಗಿದೆ. ರೇಷ್ಮೆ ಹುಳು ಸಾಕಣೆ, ಹಿಪ್ಪುನೇರಳೆ ಬೇಸಾಯ ಹಾಗೂ ಕಚ್ಚಾ ರೇಷ್ಮೆ ಉತ್ಪಾದನೆಗಾಗಿ ನೂಲು ಬಿಚ್ಚಣಿಕೆಯು ರೇಷ್ಮೆ ಕೃಷಿಯ ವಿಶೇಷತೆಯಾಗಿದೆ.

ರೇಷ್ಮೆ ಇಲಾಖೆ ಪರಿಚಯ: 1914ರಲ್ಲಿ ಆರಂಭಗೊಂಡ ರೇಷ್ಮೆ ಇಲಾಖೆಯು ರೇಷ್ಮೆ ಚಟುವಟಿಕೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಹಿಪ್ಪುನೆರಳೆ ವ್ಯವಸಾಯ, ರೇಷ್ಮೆ ಹುಳು ಸಾಕಣೆ, ನೂಲು ಬಿಚ್ಚಣಿಕೆ, ಅಧಿಕ ಇಳುವರಿ ನೀಡುವ ಹಿಪ್ಪು ನೆರಳೆ ಮತ್ತು ರೇಷ್ಮೆ ಹುಳುವಿನ ತಳಿಗಳನ್ನು ಪರಿಚಯಿಸುವುದು, ಹಿಪ್ಪುನೇರಳೆ ಮತ್ತು ರೇಷ್ಮೆ ಹುಳುವಿನ ಮೂಲ ಬಿತ್ತನೆ ನಿರ್ವಹಿಸುವುದು, ರೇಷ್ಮೆ ಮೊಟ್ಟೆಗಳನ್ನು ರೈತರಿಗೆ ಒದಗಿಸುವುದು, ವಿಸ್ತರಣೆ, ಚಾಕಿ ಸಾಕಣೆ ಮತ್ತು ರೋಗ ನಿಯಂತ್ರಣ ಸೌಲಭ್ಯ ಒದಗಿಸುವುದು, ರೇಷ್ಮೆ ಚಟುವಟಿಕೆಗಳಿಗಾಗಿ ರೈತರಿಗೆ ಮತ್ತು ನೂಲು ಬಿಚ್ಚಣಿಕೆದಾರರಿಗೆ ಬ್ಯಾಂಕುಗಳಿಂದ ಸಾಲಸೌಲಭ್ಯ ಒದಗಿಸುವುದು, ರೇಷ್ಮೆ ಗೂಡು ಮತ್ತು ಕಚ್ಚಾ ರೇಷ್ಮೆ ಮಾರಾಟಕ್ಕೆ ಸೌಲಭ್ಯ ಒದಗಿಸುವುದು, ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳನ್ನು ಬಲಪಡಿಸುವುದು, ಅಂತಾರಾಷ್ಟ್ರೀಯ ಗುಣಮಟ್ಟದ ರೇಷ್ಮೆ ಉತ್ಪಾದಿಸಲು ಸ್ವಯಂಚಾಲಿಯ ನೂಲು ಬಿಚ್ಚಾಣಿಕೆ ಘಟಕಗಳ ಸ್ಥಾಪನೆಗೆ ಸಹಾಯ ನೀಡುವುದು ಹಾಗೂ ಹೊಸ ತಾಂತ್ರಿಕತೆ ಅಳವಡಿಸಿ ಉತ್ಪಾದನೆ ಹೆಚ್ಚಿಸುವುದು ಮತ್ತು ಸಕಾಲದ ಮೂಲಕ ಹಲವಾರು ಸೇವೆಗಳನ್ನು ರೇಷ್ಮೆ ಇಲಾಖೆಯು ಸಾರ್ವಜನಿಕರಿಗೆ ಒದಗಿಸುತ್ತಿದೆ.

ಧ್ಯೇಯ ಮತ್ತು ಉದ್ದೇಶ: ರೇಷ್ಮೆಯನ್ನು ಲಾಭದಾಯಕ ವೃತ್ತಿಯನ್ನಾಗಿಸುವ ಮತ್ತು ಗ್ರಾಮೀಣ ಜನರಿಗೆ ಉದ್ಯೋಗವಕಾಶ ಕಲ್ಪಿಸುವ ಪ್ರಮುಖ ಧ್ಯೇಯವನ್ನು ರೇಷ್ಮೆ ಇಲಾಖೆಯು ಹೊಂದಿದೆ. ರೇಷ್ಮೆ ಕೃಷಿಯ ವಿಸ್ತರಣೆ, ಯಾಂತ್ರಿಕರಣ ಮತ್ತು ತಾಂತ್ರಿಕ ನೈಪುಣ್ಯ ಬಲಪಡಿಸುವುದು, ಅಂತಾರಾಷ್ಟ್ರೀಯ ಮಟ್ಟಕ್ಕೆ ಉತ್ಪಾದಕೆಯನ್ನು ಹೆಚ್ಚಿಸುವುದು, ಮಾರಾಟ ಸಂಸ್ಥೆ ಮತ್ತು ಮಾರುಕಟ್ಟೆ ವ್ಯವಸ್ಥೆಯನ್ನು ಬಲಪಡಿಸುವುದು, ಸಂಶೋಧನೆ, ವಿಸ್ತರಣಾ ಕಾರ್ಯ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಬಲಪಡಿಸುವ ಘನೋದ್ದೇಶಗಳನ್ನು ಸಹ ಇಲಾಖೆಯು ಹೊಂದಿದೆ.

ಇಲಾಖೆಯ ಕಾರ್ಯ ಚಟುವಟಿಕೆಗಳು: ಅಧಿಕ ಇಳುವರಿ ನೀಡುವ ಸುಧಾರಿತ ಹಿಪ್ಪುನೇರಳೆ ತಳಿಗಳನ್ನು ಬೆಳೆಸಿ ವಿಸ್ತೀರ್ಣ ಹೆಚ್ಚಿಸಲು ಬೆಂಬಲ ನೀಡುವುದು., ಚಾಕಿ ಸಾಕಣೆ, ಪ್ರೌಢ ಹುಳು ಸಾಕಣೆ ಹಾಗೂ ಹಣ್ಣು ಹುಳುಗಳಿಗೆ ಅಗತ್ಯವಿರುವ ಶಿಫಾರಿತ ಸೂಕ್ಷ್ಮ ವಾತಾವರಣ ನಿರ್ಮಿಸಲು ಆಗತ್ಯ ಸಹಾಯಧನ ಹಾಗೂ ತಾಂತ್ರಿಕ ತಿಳಿವಳಿಕೆ ನೀಡುವುದು., ಅತ್ಯುತ್ತಮ ಗುಣಮಟ್ಟದ ರೇಷ್ಮೆ ಉತ್ಪಾದಿಸಲು ರೀಲಿಂಗ್ ಯಂತ್ರೋಪಕರಣಗಳನ್ನು ಅಳವಡಿಸಿಕೊಳ್ಳಲು ತಾಂತ್ರಿಕ ಬೆಂಬಲ ಹಾಗೂ ಸಹಾಯಧನ ಒದಗಿಸುವುದು., ಸೂಕ್ಷ್ಮ ನೀರಾವರಿ ಪದ್ಧತಿಯನ್ನು ಪ್ರೋತ್ಸಾಹಿಸಿ ನೀರನ್ನು ಸಂರಕ್ಷಿಸಿ ಹಿಪ್ಪುನೇರಳೆ ವಿಸ್ತೀರ್ಣವನ್ನು ಹೆಚ್ಚಿಸುವುದು., ಹಿಪ್ಪುನೇರಳೆ ತೋಟ ನಿರ್ವಹಣೆ ಹಾಗೂ ಹುಳು ಸಾಕಣೆಯನ್ನು ಯಾಂತ್ರೀಕರಣಗೊಳಿಸಿ ಕಾರ್ಮಿಕರ ಉಪಯೋಗ ಹಾಗೂ ಶ್ರಮ ಕಡಿಮೆಗೊಳಿಸುವುದು., ಮಾನವ ಸಂಪನ್ಮೂಲ ನಿರ್ವಹಣೆ ಮೂಲಕ ಎಲ್ಲಾ ಭಾಗೀದಾರರ ಸಾಮರ್ಥ್ಯ ಹೆಚ್ಚಿಸುವುದು., ರೇಷ್ಮೆ ಉದ್ಯಮದ ಎಲ್ಲಾ ಭಾಗೀದಾರರಿಗೂ ಸಾಲ ಸೌಲಭ್ಯ ಪಡೆಯಲು ಸಹಾಯ ಮಾಡುವುದು., ಹೊಸ ತಳಿಗಳನ್ನು ಪ್ರೋತ್ಸಾಹಿಸುವುದು ಹಾಗೂ ಸರ್ಕಾರಿ ಮತ್ತು ಖಾಸಗಿ ಭಾಗೀದಾರರಿಂದ ಉತ್ತಮ ಗುಣಮಟ್ಟದ ರೇಷ್ಮೆ ಮೊಟ್ಟೆಗಳ ಉತ್ಪಾದನೆ ಹಾಗೂ ಮಾರಾಟಕ್ಕೆ ಕ್ರಮಕೈಗೊಳ್ಳುವುದು., ರೇಷ್ಮೆ ಗೂಡು ಹಾಗೂ ಕಚ್ಚಾ ರೇಷ್ಮೆ ಮಾರಾಟಕ್ಕೆ ಸೌಲಭ್ಯಗಳನ್ನು ಒದಗಿಸುವುದು ಮತ್ತು ಹೊರಗಿನ ಸಂಸ್ಥೆ ಮೂಲಕ ಯೋಜನೆಗಳ ಕುರಿತು ಸತತ ಉಸ್ತುವಾರಿ ಹಾಗೂ ಮೌಲ್ಯಮಾಪನಕ್ಕೆಗೊಳ್ಳುವ ಹಲವಾರು ಕಾರ್ಯ ಚಟುವಟಿಕೆಗಳನ್ನು ರೇಷ್ಮೆ ಇಲಾಖೆಯು ಮಾಡುತ್ತಿದೆ.

ವಿವಿಧ ಯೋಜನೆಗಳು: ಹಿಪ್ಪುನೇರಳೆ ನಾಟಿಮಾಡಲು ಸಾಮಾನ್ಯ ವರ್ಗದ ರೈತರಿಗೆ 1.00 ಎಕರೆಗೆ 45000 ರೂ. ಸಹಾಯ ಧನ ನೀಡಲಾಗುತ್ತದೆ. ಹಿಪ್ಪುನೇರಳೆ ನಾಟಿಮಾಡಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಗೆ 1 ಎಕರೆಗೆ 54,000 ರೂ. ಸಹಾಯ ಧನ ನೀಡಲಾಗುತ್ತದೆ. ಅದೇ ರೀತಿ ಹಿಪ್ಪುನೇರಳೆ ನರ್ಸರಿ ಬೆಳೆಸಲು ಸಾಮಾನ್ಯ ವರ್ಗದ ರೈತರಿಗೆ ಒಂದು ಎಕರೆ ಪ್ರದೇಶದಲ್ಲಿ 1,28,000 ಹಿಪ್ಪುನೇರಳೆ ಸಸಿಗಳನ್ನು ಬೆಳೆಸಿದಲ್ಲಿ 1,12,500 ರೂ. ಸಹಾಯ ಧನವನ್ನು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ 1,35,000 ರೂ. ಸಹಾಯಧನ ನೀಡಲಾಗುತ್ತದೆ.

ರಾಜ್ಯವಲಯದ ಕಾರ್ಯಕ್ರಮಗಳು: ರೇಷ್ಮೆ ಹುಳು ಸಾಕಣೆಯ ಮನೆ ನಿರ್ಮಾಣಕ್ಕೆ 1000 ಚದರ ಅಡಿ ವಿಸ್ತೀರ್ಣಕ್ಕೆ ಸಾಮಾನ್ಯ ವರ್ಗದ ರೈತರಿಗೆ 3,37,500 ರೂ. ಸಹಾಯಧನ ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ 4,05,000 ರೂ. ಸಹಾಯಧನ ನೀಡಲಾಗುತ್ತದೆ. 600 ಚದರ ಅಡಿ ರೇಷ್ಮೆ ಹುಳು ಸಾಕಣೆ ಮನೆ ನಿರ್ಮಾಣಕ್ಕಾಗಿ ಸಾಮಾನ್ಯ ವರ್ಗದ ರೈತರಿಗೆ 2.43,750 ರೂ. ದಂತೆ ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ 2,92,500 ರೂ.ದಂತೆ ಸಹಾಯಧನ ನೀಡಲಾಗುತ್ತದೆ. ಕಡಿಮೆ ವೆಚ್ಚದ ರೇಷ್ಮೆ ಸಾಕಣೆ ಶೆಡ್ ನಿರ್ಮಾಣಕ್ಕೆ ಸಾಮಾನ್ಯ ವರ್ಗದ ರೈತರಿಗೆ ಪ್ರತಿ ಚದರ ಅಡಿಗೆ 100 ರೂ.ದಂತೆ 1000 ಚದರ ಅಡಿ ಮಿತಿಗೊಳಪಟ್ಟು 1 ಲಕ್ಷ ರೂ. ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ರೈತರಿಗೆ ಪ್ರತಿ ಚದರ ಆಡಿಗೆ 120 ರೂ.ದಂತೆ 1000 ಚದರ ಅಡಿ ಮಿತಿಗೊಳಪಟ್ಟು 1.20 ಲಕ್ಷ ರೂ.ಸಹಾಯಧನ ನೀಡಲಾಗುತ್ತದೆ. ಹುಳು ಸಾಕಣೆ ಸಲಕರಣೆಗಳನ್ನು ಇಲಾಖಾ ಅನುಮೋದಿತ ಕಂಪನಿಗಳಿಂದ ಖರೀದಿಸಬೇಕು. ಸಾಮಾನ್ಯ ವರ್ಗದವರಿಗೆ ಘಟಕ ದರದ ಶೇ.75 ಅಂದರೆ 56250 ರೂ. ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಠ ಪಂಗಡ ರೈತರಿಗೆ ಘಟಕ ದರದ ಶೇ.90ರಷ್ಟು ಅಂದರೆ 67,500 ರೂ.ಸಹಾಯಧನ ನೀಡಲಾಗುತ್ತದೆ. ರೇಷ್ಮೆ ಹುಳು ಚಾಕಿಗೆ ಎಲ್ಲಾ ವರ್ಗದ ರೈತರಿಗೆ ಚಾಕಿ ವೆಚ್ಚ 100 ಮೊಟ್ಟೆಗಳಿಗೆ 1,000 ರೂ.ದಂತೆ ಸಹಾಯಧನ ನೀಡಲಾಗುತ್ತದೆ. ರೇಷ್ಮೆ ಗೂಡು ಸಾಗಣೆಗೆ ಪ್ರತಿ ಕೆ.ಜಿ. ರೇಷ್ಮೆ ಗೂಡಿಗೆ ಎಲ್ಲಾ ವರ್ಗದ ರೈತರಿಗೆ 10 ರೂ. ಮತ್ತು ರೇಷ್ಮೆ ಗೂಡಿಗೆ ಕೆ.ಜಿ.ಗೆ ಎಲ್ಲಾ ವರ್ಗದ ರೈತರಿಗೆ 30 ರೂ.ರಂತೆ ಪ್ರೋತ್ಸಾಹ ಧನ ನೀಡಲಾಗುತ್ರದೆ.

ಕೇಂದ್ರವಲಯ ಯೋಜನೆಯಡಿ: ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಘಟಕ ಅಳವಡಿಸಲು ಎಲ್ಲಾ ವರ್ಗದ ರೇಷ್ಮೆ ಬೆಳೆಗಾರರಿಗೆ ಒಂದು ಹೆಕ್ಟೇರಿಗೆ 1,14,750 ರೂ.ವರೆಗೆ ಸಹಾಯಧನ ನೀಡಲಾಗುತ್ತದೆ. ಗಿಡಗಳ ಅಂತರ ಮತ್ತು ಹನಿ ನೀರಾವರಿ ಘಟಕ ಅಳವಡಿಕೆಯ ಲ್ಯಾಟರಲ್ ಅಂತರಕ್ಕೆ ಅನುಗುಣವಾಗಿ ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಘಟಕ ಅಳವಡಿಸಲು ಸಹಾಯಧನ ನೀಡಲಾಗುತ್ತದೆ.

ರೇಷ್ಮೆ ಕೃಷಿ ದ್ವೈಮಾಸಿಕ : ರೇಷ್ಮೆ ಇಲಾಖೆಯು ರೇಷ್ಮೆ ಕೃಷಿ ದ್ವೈಮಾಸಿಕವನ್ನು ಪ್ರಕಟಿಸುತ್ತಿದೆ. ಇಲ್ಲಿ ಪ್ರಕಟವಾಗುವ ಲೇಖನಗಳು ಮತ್ತು ಮಾಹಿತಿಯು ರೈತರಿಗೆ, ರೇಷ್ಮೆ ಭಾಗೀದಾರರಿಗೆ ಸಾಕಷ್ಟು ಅನುಕೂಲವಾಗುತ್ತಿದೆ. ಈ ರೇಷ್ಮೆ ಕೃಷಿ ದ್ವೈಮಾಸಿಕದ ವಿಳಾಸ: ಪ್ರಧಾನ ಸಂಪಾದಕರು ಮತ್ತು ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ಕೃಷಿ ನಿರ್ದೇಶಕರು, ರೇಷ್ಮೆ ಕೃಷಿ ನಿರ್ದೇಶನಾಲಯ, 5ನೇ ಮಹಡಿ, ಎಂ.ಎಸ್.ಬಿಲ್ಡಿಂಗ್, ಡಾ.ಅಂಬೇಡ್ಕರ್ ವೀದಿ, ಬೆಂಗಳೂರು –560001 ಇರುತ್ತದೆ. ಚಂದಾ ಮಾಡಿಸುವ ಮೂಲಕ ಪತ್ರಿಕೆಯನ್ನು ಪಡೆದು ಓದಬಹುದಾಗಿದೆ. ದೂರವಾಣಿ ಸಂಖ್ಯೆ: 080–23123930, 22253856. ಸಹಾಯವಾಣಿ: 9900881100 ಆಗಿರುತ್ತದೆ.



ಗವಿಸಿದ್ದಪ್ಪ ಹೊಸಮನಿ,
ವಾರ್ತಾ ಸಹಾಯಕರು,
ವಾರ್ತಾ ಇಲಾಖೆ,
ರಾಯಚೂರ

# 16ರಿಂದ 23ರವರೆಗೆ ಬಿಳೇಭಾವಿ : ಶ್ರೀ ಗ್ರಾಮದೇವತೆ–ಶ್ರೀಭಾಗಮ್ಮದೇವಿ ಜಾತ್ರೋತ್ಸವ


ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಫೆ.15: ತಾಲೂಕಿನ ಸುಕ್ಷೇತ್ರ ಬಿಳೇಭಾವಿ ಗ್ರಾಮದಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ಶ್ರೀ ದೇವಿಂದ್ರಸ್ವಾಮಿ ಆಜಾದ ಆರೋಡಮಠ ದೇವರ ಹಾಲಭಾವಿ ಅವರ ನೇತೃತ್ವದಲ್ಲಿ ಜರುಗಲಿರುವ ಶ್ರೀ ಗ್ರಾಮದೇವತೆ ಹಾಗೂ ಶ್ರೀ ಭಾಗಮ್ಮದೇವಿ ಜಾತ್ರಾ ಮಹೋತ್ಸವವು ಇದೇ ದಿ.16 ರಿಂದ ಪ್ರಾರಂಭಗೊಂಡು ದಿ.23 ರವಿವಾರದವರೆಗೆ ವಿಜೃಂಬಣೆಯಿಂದ ಜರುಗಲಿದೆ.

ಜಾತ್ರೋತ್ಸವ ಅಂಗವಾಗಿ ದಿ.16 ರವಿವಾರರಂದು ವಿಜಯಪುರ ಅನುಗ್ರಹ ವ್ಹಿಜನ್ ಪೌಂಡೇಶನ್ ಅನುಗ್ರಹ ಆಸ್ಪತ್ರೆ ಖ್ಯಾತ ನೇತ್ರ ತಜ್ಞವೈದ್ಯರಾದ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ನೇತೃತ್ವದಲ್ಲಿ ಉಚಿತ ನೇತ್ರತಪಾಸಣಾ ಶಿಬಿರವು ಜರುಗಲಿದೆ.

ದಿ.19 ಬುಧವಾರರಂದು ರಾತ್ರಿ 9–30 ಗಂಟೆಗೆ ಇಂಗಳೇಶ್ವರದ ಶ್ರೀ ಭೀರಲಿಂಗೇಶ್ವರ ಮ್ಯಾಳ ಮತ್ತು ಕಾಲೋಳಗಿಯ ಶ್ರೀ ಅಮೋಘಸಿದ್ದೇಶ್ವರ ಮ್ಯಾಳ ಅವರಿಂದ ಡೊಳ್ಳಿನ ಹಾಡಿಕೆ ಜರುಗುವದು.





ದಿ.20ಗುರುವಾರರಂದು ಮುಂಜಾನೆ 7 ಗಂಟೆಯಿಂದ ಕುಂಭ ಮೇಳ, ಕಳಸಾರೋಹಣ ನಡೆಯಲಿದೆ ಅಲ್ಲದೇ ರಾತ್ರಿ 10–30 ಗಂಟೆಯಿಂದ ಗಂಗಸ್ಥಳ ಕಾರ್ಯಕ್ರಮವು ಬೆಳಿಗ್ಗೆ 6 ಗಂಟೆಯವರೆಗೆ ಜರುಗಲಿದೆ.

ದಿ.21ಶುಕ್ರವಾರರಂದು ಮುಂಜಾನೆ 6 ಗಂಟೆಯಿಂದ 9 ಗಂಟೆಯವರೆಗೆ ಶ್ರೀ ಗ್ರಾಮದೇವತೆ ಹಾಗೂ ಶ್ರೀ ಭಾಗಮ್ಮದೇವಿಗೆ ಮಹಾ ಪೂಜಾ ಕಾರ್ಯಕ್ರಮವು ಜರುಗಲಿದೆ. ರಾತ್ರಿ 10–30 ಗಂಟೆಗೆ ಬಿಳೇಭಾವಿ ಗ್ರಾಮದ ಶ್ರೀ ಭಾಗ್ಯವಂತಿ ನಾಟ್ಯ ಸಂಘದವರಿಂದ ಹಾಗೂ ಶ್ರೀ ಜ್ಞಾನಯೋಗಿ ಸಿದ್ದೇಶ್ವರ ನಾಟ್ಯ ಸಂಘ ವಿಜಯಪುರ ಹಾಗೂ ಮುತ್ತು ಬಳಗಾನೂರ ಅವರ ನೇತೃತ್ವದಲ್ಲಿ ಮಾತು ಬಿದ್ದಿತು ಮೌನ ಗೆದ್ದಿತು ಎಂಬ ಸಾಮಾಜಿಕ ನಾಟಕ ಜರುಗಲಿದೆ.

ದಿ.23 ರವಿವಾರರಂದು ರಾತ್ರಿ 8–30 ಗಂಟೆಗೆ ಶ್ರೀ ಖಾಸ್ಗತೇಶ್ವರ ಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗದೇವರಿಂದ ಆಶಿರ್ವನ ಕಾರ್ಯಕ್ರಮವು ಜರುಗಲಿದೆ. ಅಂದೇ ರಾತ್ರಿ 10–30 ಗಂಟೆಗೆ ಮಸಣ ಸೇರಿದ ಮಲ್ಲಿಗೆ ಹೂವು ಎಂಬ ಸುಂದರ ಸಾಮಾಜಿಕ ನಾಟಕ ಜರುಗಲಿದೆ.

ಕಾರಣ ಸುತ್ತಮುತ್ತಲಿನ ಗ್ರಾಮಗಳ ಭಕ್ತಾಧಿಗಳು ಜಾತ್ರೋತ್ಸವದಲ್ಲಿ ಪಾಲ್ಗೊಂಡು ಶ್ರೀ ಗ್ರಾಮದೇವಿ ಹಾಗೂ ಶ್ರೀ ಭಾಗಮ್ಮದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಬಿಳೇಭಾವಿ ಸದ್ಭಕ್ತ ಮಂಡಳಿ ಪ್ರಕಟನೆ ಮೂಲಕ ತಿಳಿಸಿದೆ.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:9448604450

# ಸಂತ್ರಸ್ಥರಿಗೆ ಉದ್ಯೋಗಾವಕಾಶ ಕಲ್ಪಿಸಲು ಮನವಿ

## ಬಾಗಲಕೋಟೆಯಲ್ಲಿ ಬೃಹತ್ ಉದ್ಯಮ ಸ್ಥಾಪನೆಗೆ ಶಾಸಕ ಮೇಟಿ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.15–ಆಲಮಟ್ಟಿ ಜಲಾಶಯ ನಿರ್ಮಾಣದಿಂದ ಮನೆ–ಭೂಮಿ ಕಳೆದುಕೊಂಡ ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಯ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಬೃಹತ್ ಉದ್ಯಮಗಳನ್ನು ಸ್ಥಾಪನೆ ಮಾಡಬೇಕು ಎಂದು ಬಿಟಿಡಿಎ ಅಧ್ಯಕ್ಷರೂ ಆಗಿರುವ ಶಾಸಕ ಎಚ್.ವೈ.ಮೇಟಿ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಶುಕ್ರವಾರ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಡಾ.ಎಂ.ಬಿ.ಪಾಟೀಲ ಅವರನ್ನು ಭೇಟಿ ಮಾಡಿ ಈ ಕುರಿತು ಮನವಿ ಸಲ್ಲಿಸಿದ ಮೇಟಿ, ಆಲಮಟ್ಟಿ ಜಲಾಶಯ ನಿರ್ಮಾಣಕ್ಕೆ ಬಾಗಲಕೋಟೆಯ ಜನ ತ್ಯಾಗ ಮಾಡಿದ್ದಾರೆ. ಜನರು ಮನೆ, ಭೂಮಿ, ನೂರಾರು ವರ್ಷಗಳಿಂದ ಬಾಳಿ ಬದುಕಿದ ಊರುಗಳ ಬಿಟ್ಟು, ನವನಗರ ಸಹಿತ ವಿವಿಧೆಡೆ ಪುನರ್‌ವಸತಿ ಪಡೆದಿದ್ದಾರೆ. ಇಂದಿಗೂ ಅವರಿಗೆ ಸಂತ್ರಸ್ತರೆಂಬ ಹಣೆಪಟ್ಟಿ ಕಳಚಿಲ್ಲ. ಮನೆ–ಭೂಮಿ ಕಳೆದುಕೊಂಡು ಕೈಗೆ ಉದ್ಯೋಗವಿಲ್ಲದೇ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಇದು ಬಾಗಲಕೋಟೆಯ ಆರ್ಥಿಕ ಹಿನ್ನಡೆಗೂ ಕಾರಣವಾಗುತ್ತಿದೆ ಎಂದು ಹೇಳಿದ್ದಾರೆ.

ಮುಳುಗಡೆಯಿಂದ ಬದುಕು ಕಳೆದುಕೊಂಡ ಸಂತ್ರಸ್ತರು ಜೀವನೋಪಾಯಕ್ಕೆ ಗೋವಾ,



ಮಂಗಳೂರು, ಉಡುಪಿ, ಬೆಂಗಳೂರು, ಮಹಾರಾಷ್ಟ್ರದ ಪುಣೆ ಹೀಗೆ ವಿವಿಧೆಡೆ ವಲಸೆ ಹೋಗುತ್ತಿದ್ದಾರೆ. ಅದೆಷ್ಟೋ ವಿದ್ಯಾವಂತ ಯುವಕ–ಯುವತಿಯರು ಉದ್ಯೋಗಕ್ಕಾಗಿ ಪರದಾಡುತ್ತಿದ್ದಾರೆ. ಕಾರಣ ಬಾಗಲಕೋಟೆ ನವನಗರ ಹಾಗೂ ಬಾಗಲಕೋಟೆ ವಿಧಾನಸಭೆ ಮತಕ್ಷೇತ್ರ ವ್ಯಾಪಿಯಲ್ಲಿ ತಮ್ಮ ಇಲಾಖೆಯಿಂದ ಬೃಹತ್ ಉದ್ಯಮ ಸ್ಥಾಪಿಸಬೇಕು. ಆ ಮೂಲಕ ನಿರುದ್ಯೋಗ ಸಮಸ್ಯೆ ನಿಯಂತ್ರಣಕ್ಕೆ ಸಹಕಾರ ನೀಡಬೇಕು ಎಂದು ಶಾಸಕರು ಆಗ್ರಹಿಸಿದ್ದಾರೆ.

ನವನಗರ ವ್ಯಾಪ್ತಿಯಲ್ಲಿ ಕನಿಷ್ಠ 5 ಸಾವಿರ ಕೋಟಿ ಬಂಡವಾಳ ಹೂಡಿಕೆಯ 2 ಸಾವಿರ ಜನ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಉದ್ಯಮ ಸ್ಥಾಪಿಸಬೇಕು. ಇದಕ್ಕೆ ಬೇಕಾಗುವ ಭೂಮಿ ಹಾಗೂ ಅಗತ್ಯ ಮೂಲಭೂತ ಸೌಲಭ್ಯವನ್ನು ಸ್ಥಳೀಯವಾಗಿ ಕಲ್ಪಿಸಲು ನಾವು ಸಿದ್ಧರಿದ್ದೇವೆ. ಅಲ್ಲದೇ ಬಾಗಲಕೋಟೆ ವಿಧಾನಸಭೆ ಮತಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಭಾಗದಲ್ಲೂ ಒಂದು ಉದ್ಯಮ ಸ್ಥಾಪಿಸಬೇಕು ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಬಾಗಲಕೋಟೆ ನವನಗರ ಹಾಗೂ ಗ್ರಾಮೀಣ ಭಾಗದಲ್ಲಿ ಬೃಹತ್ ಉದ್ಯಮ ಸ್ಥಾಪನೆಗೆ ಕ್ರಮಕೈಗೊಳ್ಳಬೇಕು. ಮುಂಬರುವ ಬಜೆಟ್‌ನಲ್ಲಿ ಉದ್ಯಮ ಸ್ಥಾಪನೆಯ ಘೋಷಣೆ ಮಾಡಬೇಕು ಜೊತೆಗೆ ಇದಕ್ಕಾಗಿ ಅಗತ್ಯ ಅನುದಾನ ಒದಗಿಸುವ ಪ್ರಾಮಾಣಿಕ ಪ್ರಯತ್ನವನ್ನು ತಾವು ಮಾಡಬೇಕೆಂದು ಶಾಸಕ ಮೇಟಿ ಅವರು ಸಚಿವ ಎಂ.ಬಿ.ಪಾಟೀಲರಲ್ಲಿ ಮನವಿ ಮಾಡಿದರು.

ಬಾಗಲಕೋಟೆ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಸ್.ಎನ್.ರಾಂಪುರ, ನಗರ ಬ್ಲಾಕ್ ಅಧ್ಯಕ್ಷ ರಜಾಕ ಬೆನ್ನೂರ, ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ದ್ಯಾಮಣ್ಣ ಗಾಳಿ, ಯುವ ಮುಖಂಡ ಹೊಳಬಸು ಶೆಟ್ಟರ ಮುಂತಾದವರು ಉಪಸ್ಥಿತರಿದ್ದರು.

ರಾಜ್ಯದ 24 ಜಿಲ್ಲೆಗಳ ವ್ಯಾಪ್ತಿ ಹೊಂದಿರುವ ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಕೃಷಿ ವಿಶ್ವವಿದ್ಯಾಲಯಗಳ ಜೊತೆ ವಿಲೀನ ಮಾಡಲಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಸರಕಾರ ಯಾವುದೇ ಕಾರಣಕ್ಕೂ ಈ ನಿರ್ಧಾರವನ್ನು ಕೈಗೊಳ್ಳಬಾರದು. ಒಂದು ವೇಳೆ ಸರ್ಕಾರ ಈ ನಿರ್ಧಾರ ಕೈಗೊಂಡರೆ ಜಿಲ್ಲೆಗೆ ಅನ್ಯಾಯವಾಗಲಿದೆ ಎಂದಿರುವ ಶಾಸಕ ಎಚ್.ವಾಯ್.ಮೇಟಿ, ತೋಟಗಾರಿಕೆ ವಿವಿ ವಿಲೀನ ಬೇಡ ಎಂದಿದ್ದಾರೆ. ಈ ಕುರಿತು ಮುಖ್ಯಮಂತ್ರಿ ಸಿದ್ಧರಾಮಯ್ಯ, ಕೃಷಿ ಸಚಿವ ಚಲುವರಾಯಸ್ವಾಮಿ ಮತ್ತು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರಿಗೆ ಪ್ರತ್ಯೇಕ ಮನವಿ ಸಲ್ಲಿಸಿ ತೋಟಗಾರಿಕೆ ವಿವಿಗೆ ಯಾವುದೇ ಧಕ್ಕೆ ತರುವ ಕೆಲಸ ಆಗಬಾರದು ಎಂದು ಆಗ್ರಹಿಸಿರುವುದಾಗಿ ತಿಳಿಸಿದ್ದಾರೆ.

# ಮೈರಾಡಾ ಸಂಸ್ಥೆಯಿಂದ 10 ಗ್ರಾಮ ದತ್ತು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 15 : ಮೈರಾಡಾ ಸ್ವಯಂ ಸೇವಾ ಸಂಸ್ಥೆಯು ಎಚ್‌ಡಿಎಫ್‌ಸಿ ಬ್ಯಾಂಕ್‌ನ ಸಮಗ್ರ ಗ್ರಾಮೀಣ ಅಭಿವೃದ್ಧಿ ಕಾರ್ಯಕ್ರಮ (ಎಚ್‌ಆರ್‌ಡಿಪಿ) ಅನುಷ್ಠಾನಕ್ಕೆ ಹುಮನಾಬಾದ್ ತಾಲ್ಲೂಕಿನ ಹತ್ತು ಗ್ರಾಮಗಳನ್ನು ದತ್ತು ಪಡೆದಿದೆ ಎಂದು ಸಂಸ್ಥೆಯ ಕಲಬುರಗಿ ಕಾರ್ಯಕ್ರಮ ಅಧಿಕಾರಿ ಎಸ್.ಜಿ. ಉಜಳಂಬೆ ಹೇಳಿದರು.




ಹುಮನಾಬಾದ್ ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಈಚೆಗೆ ನಡೆದ ಯೋಜನೆಯ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಳ್ಳಿಖೇಡ(ಕೆ), ಮುಸ್ತಾಪುರ, ಚಿತಕೋಟಾ, ಕತ್ಥಳ್ಳಿ, ಬೋರಂಪಳ್ಳಿ, ಕನಕಟ್ಟಾ, ಹುಣಸಗೇರಾ, ಸೋನಕೇರಾ, ಚಿನಕೇರಾ ಹಾಗೂ ವರವಟ್ಟಿ (ಕೆ) ದತ್ತು ಗ್ರಾಮಗಳಾಗಿವೆ ಎಂದು ತಿಳಿಸಿದರು.

ಸಂಸ್ಥೆ ಈ ಗ್ರಾಮಗಳಲ್ಲಿ ನಾಲ್ಕು ವರ್ಷಗಳ ಅವಧಿಯಲ್ಲಿ ಮಹಿಳಾ ಸಬಲೀಕರಣ, ರೈತರ ಅಭಿವೃದ್ಧಿ, ಅಂಗನವಾಡಿಗಳ ಸುಂದರೀಕರಣ, ಸೋಲಾರ್ ದೀಪ ಅಳವಡಿಕೆ, ಚೆಕ್ ಡ್ಯಾಂ ನಿರ್ಮಾಣ, ಕುರಿ ಸಾಕಾಣಿ–ಕೆಗೆ ನೆರವು ಮೊದಲಾದ ಚಟುವಟಿಕೆಗಳನ್ನು ಕೈಗೊಳ್ಳಲಿದೆ ಎಂದು ಹೇಳಿದರು.

ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಅರವಿಂದ ಜಿ. ರಿಸ್ಬಡ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಜಗನ್ನಾಥಮೂರ್ತಿ, ಜಿಲ್ಲಾ ಯೋಜನಾಧಿಕಾರಿ ನಾಗೇಂದ್ರ, ಮೈರಾಡಾ ಸಂಸ್ಥೆಯ ಸುಧಾಮರಾವ್, ಎಸ್.ಡಿ. ಕಲ್ಯಾಣಶೆಟ್ಟಿ, ದ್ಯಾವಪ್ಪ, ತಾಲ್ಲೂಕು ಪಂಚಾಯಿತಿ ವ್ಯವಸ್ಥಾಪಕ ವೈಜಿನಾಥ ಬಲ್ಲೂರ, ಶಿಕ್ಷಣ ಇಲಾಖೆಯ ಸೋಮಶೇಖರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಲ್ಲಮ್ಮ ಉಪಸ್ಥಿತರಿದ್ದರು.

ಕ್ಲಸ್ಟರ್ ಸಂಯೋಜಕ ಪ್ರಕಾಶ ಡಿ.ಕೆ. ನಿರೂಪಿಸಿದರು. ಮಾಲಾಶ್ರೀ ವಂದಿಸಿದರು.

# ಈಗ ಅಧಿಕಾರದಲ್ಲಿರುವ ಕಾಂಗ್ರೆಸ್ ಮುಂದೆ ಸೋಲುತ್ತೆ : ಪ್ರಕಾಶ್ ರಾಜ್

ಮಲ್ಲಮ್ಮ ನುಡಿ ವಾರ್ತೆ

ಮಂಗಳೂರು:ಫೆ.15:ಚುನಾವಣೆ ಪ್ರಕ್ರಿಯೆ ಮತ್ತು ರಾಜಕಾರಣದಲ್ಲಿ ವಿರೋಧಪಕ್ಷಗಳು ಗೆಲ್ಲಲ್ಲ, ಆದ್ರೆ ಆಳುವ ಪಕ್ಷಗಳು ಸೋಲುತ್ತೆ. ಕಾಂಗ್ರೆಸ್ ಈಗ ಅಧಿಕಾರದಲ್ಲಿದೆ, ಮುಂದೆ ಸೋಲೋದು ಅವರೇ ಎಂದು ನಟ ಪ್ರಕಾಶ್ ರಾಜ್ ಭವಿಷ್ಯ ನುಡಿದಿದ್ದಾರೆ.

ರಾಜ್ಯದಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಹಣದ ಅಭಾವ ವಿಚಾರಕ್ಕೆ ಪ್ರತಿಕ್ರಿಯಿಸಿ ಮಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಇದನ್ನೂ ಓದಿ: ಧಾರ್ಮಿಕ ವಿಚಾರದಲ್ಲೂ ರಾಜಕಾರಣ ಮಾಡುವವರು ನಿಜವಾದ ಹಿಂದೂಗಳಲ್ಲ: ಪ್ರಕಾಶ್ ರಾಜ್ ನಾವು ಮೊದಲು ಯೋಚನೆ ಮಾಡಬೇಕು. ಚುನಾವಣೆ ಪ್ರಕ್ರಿಯೆ ಮತ್ತು ರಾಜಕಾರಣದಲ್ಲಿ ವಿರೋಧಪಕ್ಷಗಳು ಗೆಲ್ಲಲ್ಲ, ಆದ್ರೆ ಆಳುವ ಪಕ್ಷಗಳು ಸೋಲುತ್ತೆ. ಕಾಂಗ್ರೆಸ್ ಈಗ ಅಧಿಕಾರದಲ್ಲಿದೆ, ಮುಂದೆ ಸೋಲೋದು ಅವರೇ. ಲಾಸ್ ಆಗಿದೆ, ಹಣ ಹೊಂದಿಸಲು ಆಗುತ್ತಿಲ್ಲ ಅನ್ನೋದಕ್ಕೆ ಏನ್ ಬಿಸಿನೆಸ್ ಮಾಡ್ತಿದ್ದೀರಾ? ಇದೆಲ್ಲವನ್ನ ಜನ ಗಮನಿಸಬೇಕು, ನಾವು ಎಲ್ಲಿ ತಪ್ಪುತ್ತಿದ್ದೇವೆ ಅನ್ನೋದನ್ನ ಯೋಚಿಸಬೇಕು ಎಂದು ಸಲಹೆ ನೀಡಿದರು.

# ಮಕ್ಕಳನ್ನು ಮೊಬೈಲ್ ಗೀಳಿನಿಂದ ದೂರವಿಡಿ



ಫಾಸ್ಟ್‌ಫುಡ್ ಸೇವನೆಯಿಂದ ಮಕ್ಕಳ ದೈಹಿಕ ಬೆಳವಣಿಗೆ ಆಗುತ್ತಿಲ್ಲ. ಹಾಗಾಗಿ ಪಾಲಕರು ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರ ನೀಡುವುದರ ಜತೆಗೆ ಮಕ್ಕಳಲ್ಲಿ ಸಂಸ್ಕಾರ, ಹೃದಯವಂತಿಕೆ ಬೆಳೆಸುವ ಕೆಲಸ ಆಗಬೇಕು.

– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಗುರುಕುಲದಲ್ಲಿ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚಿನ ಆದ್ಯತೆ ನೀಡಿ ವಿದ್ಯಾರ್ಥಿಗಳಿಗೆ ಸಂಸ್ಕಾರಯುತ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ.

– ಶಿವಾನಂದ ಪವಾಡಶೆಟ್ಟಿ ಡಿವೈಎಸ್ಪಿ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.15: ಪಾಲಕರು ಮಕ್ಕಳ ಬಗ್ಗೆ ಸದಾ ಜಾಗೃತಿ ವಹಿಸಬೇಕು. ಮಕ್ಕಳನ್ನು ಮೊಬೈಲ್ ಗೀಳಿನಿಂದ ದೂರ ಮಾಡಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಶನಿವಾರ ಆಯೋಜಿಸಿದ್ದ ಚನ್ನಬಸವೇಶ್ವರ ಗುರುಕುಲ ವಸತಿ ಮತ್ತು ಸಂಚಾಲಿತ ಪ್ರಾಥಮಿಕ ಶಾಲೆಯ 33ನೆಯ ವಾರ್ಷಿಕೋತ್ಸವ ಸ್ನೇಹ ಸಮ್ಮೇಳನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯೊಂದರಲ್ಲೇ ಅತಿಯಾದ ಮೊಬೈಲ್ ಬಳಕೆಯಿಂದ 20 ಸಾವಿರ ಮಕ್ಕಳಲ್ಲಿ ದೃಷ್ಟಿದೋಷ ಇರುವ ವಿಜಯ ಕರ್ನಾಟಕ ಪತ್ರಿಕೆ ಇತ್ತಿಚಿಗೆ ವರದಿ ಮಾಡಿದೆ.

ನಮ್ಮ ಗಡಿ ಜಿಲ್ಲೆ ಬೀದರ್ ಕೂಡ ಅದರಿಂದ ಹೊರತಾಗಿಲ್ಲ. ನಮ್ಮಲ್ಲಿಯು ಸಾವಿರಾರೂ ಮಕ್ಕಳಲ್ಲಿ ದೃಷ್ಟಿದೋಷ ಸಮಸ್ಯೆ ಕಂಡು ಬಂದಿರುವ ಸಾಧ್ಯತೆ ಇದೆ.

ಹಾಗಾಗಿ ಪಾಲಕರು ಮಕ್ಕಳನ್ನು ಮೊಬೈಲ್ ನಿಂದ ಆದಷ್ಟು ದೂರವಿಟ್ಟು ಓದು ಬರಹದ ಹವ್ಯಾಸ ಬೆಳೆಸಬೇಕು ಎಂದರು.

ನಮ್ಮ ಮಕ್ಕಳಲ್ಲಿ ಅದ್ಭುತ ಪ್ರತಿಭೆ ಇದೆ. ಅಂತವರನ್ನು ಗುರುತಿಸಿ ವೇದಿಕೆ ಕಲ್ಪಿಸುವ ಅಗತ್ಯವಿದೆ. ಆ ಕೆಲಸವನ್ನು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾಡುತ್ತಿದ್ದಾರೆ. ಪೂಜ್ಯರು ಕಟ್ಟಿದ ವಿದ್ಯಾಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುತ್ತಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿದರು.

ಬೀದರ್ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ರವಿ ದೇಶಮುಖ ಬಸವ ಗುರುವಿನ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಶಶಿಧರ ಕೋಸಂಬೆ, ಕರವೇ ಸ್ವಾಭಿಮಾನಿ ಸೇನೆ ಕಾರ್ಯಾಧ್ಯಕ್ಷ ಶಿವರಾಜ ಪಟ್ನೆ, ಬೀದರ್ ಸರಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಏಕನಾಥ ಸುಣಗಾರ, ವ್ಯಾಪರಸ್ಥ ಸುನಿಲಕುಮಾರ ವಾಲಿ ಸೇರಿದಂತೆ ಹಲವರು ಇದ್ದರು.

ಮುಖ್ಯಗುರು ಮಹೇಶ ಕುಲಕರ್ಣಿ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಸುಜಾತಾ ವಂದಿಸಿದರು.

# ಸಂತ ಸೇವಾಲಾಲರ

## ತತ್ವಾದರ್ಶಗಳನ್ನು ಪಾಲಿಸಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 15: ಸಂತ ಸೇವಾಲಾಲ್ ಅವರು ಪವಾಡ ಪುರುಷರು, ಸತ್ಯ, ಅಹಿಂಸೆಯ ಮೂಲಕ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾ–ರೆ. ಸಮಾಜದ ಏಳಿಗೆಗಾಗಿ ನಿರಂತರ ಶ್ರಮಿಸಿದ್ದು, ಅವರ ತತ್ವ ಆದರ್ಶಗಳನ್ನು ಪಾಲಿಸಿ ಅವರು ಹಾಕಿಕೊಟ್ಟ ಹಾದಿಯಲ್ಲಿ ನಡೆಯಬೇಕು ಎಂದು ರಾಯಚೂರು ಗ್ರೇಡ್–2 ತಹಶೀಲ್ದಾರ್ ಭೀಮರಾಯ ಅವರು ಹೇಳಿದರು.

ಫೆ.15ರ ಶನಿವಾರ ದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರಪಾಲಿಕೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂತ ಶ್ರೀ ಸೇವಾಲಾಲ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ಸಂತ ಸೇವಾಲಾಲ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತರಾಗಿಲ್ಲ. ಜಾತಿ, ಧರ್ಮ ಎಂಬ ಬೇಧ ಭಾವವಿಲ್ಲದೆ ಎಲ್ಲರು ಸಮಾನರು ಎಂದು ವಿಶ್ವ ಮಾನವ ಸಂದೇಶ ಸಾರುವ ಮೂಲಕ ಸಮಾಜದಲ್ಲಿ ಅನೇಕ ಒಳ್ಳೆಯ ಕಾರ್ಯಗಳನ್ನು ಮಾಡಿದ್ದಾರೆ. ಭರತ ಖಂಡ ಪವಿತ್ರವಾದ ಖಂಡ, ಈ ಪವಿತ್ರ ಖಂಡದಲ್ಲಿ ಹುಟ್ಟಬೇಕಾದರೆ ಪುಣ್ಯ ಮಾಡಿರಬೇಕು. ಹಾಗೆಯೇ ಪ್ರತಿಯೊಬ್ಬರು ಸೇವಾಲಾಲ್ ಅವರ ತತ್ವಗಳನ್ನು ಪಾಲಿಸಬೇಕು. ಅಲ್ಲದೆ ಅವರ ಹಾದಿಯಲ್ಲಿ ನಡೆಯಬೇಕು. ಯಾವುದೇ ಸಮಾಜ ಅಭಿವೃದ್ಧಿ ಹೊಂದಬೇಕಾದರೆ ಮೊದಲು ಶಿಕ್ಷಣ ಪಡೆಯಬೇಕೆಂದರು.

ಈ ವೇಳೆ ಉಪನ್ಯಾಸಕರಾಗಿ ಹನುಮಂತು ಚವ್ಹಾಣ್ ಅವರು ಮಾತನಾಡಿ, ಸೇವಾಲಾಲ್ ಅವರ ಕೊಡುಗೆ ಸಮಾಜಕ್ಕೆ ಅಪಾರವಾದದ್ದು, ಮತ್ತು ಅವರ ಅಪಾರ ಕೊಡುಗೆಯಿಂದ ಇವತ್ತು ಈ ಬಂಜಾರ ಸಮಾಜವು ಹುಟ್ಟಿಕೊಂಡಿದೆ ಎಂದರು.

ಶಾಸಕರಿಂದ ಮೆರವಣಿಗೆಗೆ ಚಾಲನೆ: ಬೆಳಗ್ಗೆ ನಗರದ ಶ್ರೀ ಬಸವೇಶ್ವರ ವೃತ್ತದಿಂದ ಆರಂಭವಾದ ಶ್ರೀ ಸಂತ ಸೇವಾಲಾಲ ಅವರ ಭಾವಚಿತ್ರ ಮೆರವಣಿಗೆಗೆ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಚಾಲನೆ ನೀಡಿದರು. ಅಲ್ಲಿಂದ ಆರಂಭಗೊಂಡ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಂಗಮಂದಿರಕ್ಕೆ ಬಂದು ಸೇರಿತು. ಈ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ಇತರರು ಇದ್ದರು.

ಸನ್ಮಾನ: ಕಾರ್ಯಕ್ರಮದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ. ದಂಡಪ್ಪ ಬಿರಾದಾರ ಅವರಿಗೆ ಇತ್ತೀಚಿಗೆ ಉತ್ತಮ ಮತದಾರ ಸಾಕ್ಷರತಾ ಸಂಪನ್ಮೂಲ ವ್ಯಕ್ತಿ ಎಂದು ಜಿಲ್ಲಾ ಮಟ್ಟದ ಪ್ರಶಸ್ತಿ ಪಡೆದ ಹಿನ್ನೆಲೆಯಲ್ಲಿ ಬಂಜಾರ ಸೇವಾ ಸಮಾಜದ ಮುಖಂಡರು, ನೌಕರ ಬಾಂಧವರು ಸನ್ಮಾನಿಸಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಂಡಪ್ಪ ಬಿರಾದರ್, ಅಖಿಲ ಭಾರತ ಬಂಜಾರ ಸಮಾಜದ ಜಿಲ್ಲಾಧ್ಯಕ್ಷರು ಜೀವಪ್ಪ ನಾಯಕ್, ಸಮಾಜದ ಮುಖಂಡರಾದ ನಾರಾಯಣ ನಾಯಕ್, ಹುಚ್ಚಪ್ಪ ನಾಯಕ್, ರಾಗಮ್ಮ ಬಾಯಿ, ಭೀಮ್ಲ್ ನಾಯಕ್, ಜ್ಯೋತಿ ಬಾಪುರಿ ತಾಂಡ, ದೇವಪ್ಪ ನಾಯಕ್, ಶಿವಣ್ಣ ನಾಯಕ್, ಲತೇಪ್ಪ ನಾಯಕ್ ಸೇರದಂತೆ ಇತರರು ಇದ್ದರು.


**ನಗರಸಭೆ ಕಾರ್ಯಾಲಯ, ಬೀದರ,**

ಸಂಖ್ಯೆ:ಬಿಎಂಸಿ/ಇಎನ್‌ಜಿ/ಸಿಆರ್–443/ /2024–25 ದಿನಾಂಕ:12–02–2025

**ಟೆಂಡರ್ ಪ್ರಕಟಣೆ**

1) ಕಾಮಗಾರಿ/ಸರಕು/ಸೇವೆಯ ವಿವರ: DMA/2024-25/OW/WORK_INDENT35945, DMA/2024-25/OW/WORK_INDENT35957, DMA/2024-25/OW/WORK_INDENT36108, 2) ಕಾಮಗಾರಿಯ ಅಂದಾಜು ಮೊತ್ತ: e-portal ನಲ್ಲಿ ನಮೂದಿಸಿದಂತೆ, 3) ಗುತ್ತಿಗೆದಾರರ ಅರ್ಹತೆ ವಿವರ: e-portal ನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ : e-portalನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು: 24–02–2025 upto 04.00 PM, 6) ಟೆಂಡರ ತೆರೆಯುವ ದಿನಾಂಕ: 25–02–2025 at 4.30 PM, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಪೌರಾಯುಕ್ತರು ನಗರಸಭೆ ಬೀದರ. ಇ–ಮೇಲ್: itstaff_ulb_bidar@yahoo.com, 08482–240432, 8) ಅಂತರಜಾಲ ತಾಣದ ವಿಳಾಸ: https://kppp.karnataka.gov.in/

ಸಹಿ/–ಪೌರಾಯುಕ್ತರು
ನಗರಸಭೆ ಬೀದರ

ವಾ.ಸಾ.ಸಂ.ಇ/ಬೀದರ/396/ಕೆಎಸ್‌ಎಂಸಿ&ಎ/2024–25


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.